
21 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 21 | ಸಂಚಿಕೆ 319 | ನವದೆಹಲಿ | ಬೆಲೆ ₹ 10 | ಮೇ 18, 2024 ಶನಿವಾರ



21 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಮೇ 18 2024, ಶನಿವಾರ

## ಒಳಪುಟಗಳಲ್ಲಿ

ಸಾರಿಗೆ ನೌಕರರ ವೇತನ ಶೇ.12-15 ಹೆಚ್ಚಳ - ಪು.5

ಕೊಟ್ಟ ಮಾತಿನಂತೆ ಬಾಗಲಕೋಟೆ ಯುವತಿಗೆ ಪತ್ರ ಬರೆದ ಪ್ರಧಾನಿ ಮೋದಿ - ಪು.6




ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸುರೇಶ್ ಸಜ್ಜನ್ ನಾಮಪತ್ರ ಸಲ್ಲಿಕೆ - ಪು.7

# ಅಬಕಾರಿ ನೀತಿ ಅಕ್ರಮ ಹಣ ವರ್ಗಾವಣೆ ಪ್ರಕರಣ

## ಆಮ್‌ಆದ್ಮಿ ಪಕ್ಷ ಮುಖ್ಯ ಆರೋಪಿ: ಎಸ್.ವಿ.ರಾಜು ಸುಪ್ರೀಂಗೆ ದೂರು

**ನವದೆಹಲಿ, ಮೇ 17: ದೆಹಲಿಯ ಆಡಳಿತಾರೂಢ ಆಮ್ ಆದ್ಮಿ ಪಕ್ಷವನ್ನು ಅಬಕಾರಿ ನೀತಿ ಹಗರಣ ಪ್ರಕರಣದಲ್ಲಿ ಆರೋಪಿಯಾಗಿ ಮಾಡಲಾಗಿದೆ ಎಂದು ಜಾರಿ ನಿರ್ದೇಶನಾಲಯ ಶುಕ್ರವಾರ ಸುಪ್ರೀಂಕೋರ್ಟ್‌ಗೆ ತಿಳಿಸಿದೆ. ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಸಲ್ಲಿಸಿದ ಅರ್ಜಿಯ ವಿಚಾರಣೆಯ ವೇಳೆ, ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ.ರಾಜು ಅವರು ಇಂದು ಪ್ರಾಸಿಕ್ಯೂಷನ್ ದೂರು ಸಲ್ಲಿಸಲಾಗುತ್ತಿದ್ದು, ಎಎಪಿಯನ್ನು ಆರೋಪಿಯನ್ನಾಗಿ ಮಾಡಲಾಗಿದೆ ಎಂದು ಸುಪ್ರೀಂ ಕೋರ್ಟ್‌ಗೆ ತಿಳಿಸಿದರು.**

ಮದ್ಯದ ನೀತಿ ಪ್ರಕರಣವು ದೆಹಲಿ ಸರ್ಕಾರದ 2021-22ರ ಅಬಕಾರಿ ನೀತಿಯ ರಚನೆ ಮತ್ತು ಜಾರಿಯಲ್ಲಿ ಭ್ರಷ್ಟಾಚಾರ ಮತ್ತು ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ ಮತ್ತು ಜಾರಿ ನಿರ್ದೇಶನಾಲಯದ ಪ್ರಕಾರ, ಅಬಕಾರಿ ನೀತಿಯನ್ನು ಮಾರ್ಪಡಿಸುವಾಗ ಅಕ್ರಮಗಳನ್ನು ಎಸಗಲಾಗಿದೆ ಮತ್ತು ಪರವಾನಗಿ ಹೊಂದಿರುವವರಿಗೆ ಪರೋಕ್ಷವಾಗಿ ಅನುಕೂಲಗಳನ್ನು ಮಾಡಿದೆ ಎನ್ನಲಾಗಿದೆ. ಎಎಪಿ ಸರ್ಕಾರವು ಸಗಟು ವ್ಯಾಪಾರಿಗಳ ಲಾಭಾಂಶವನ್ನು ಶೇ.6 ರಷ್ಟು ಕಿಕ್‌ಬ್ಯಾಕ್ ಬದಲಿಗೆ ಶೇ.12ಕ್ಕೆ ಹೆಚ್ಚಿಸಿತು, ಇದರಿಂದಾಗಿ ದೆಹಲಿ ಸರ್ಕಾರಕ್ಕೆ 2,873 ಕೋಟಿ ರೂಪಾಯಿ ನಷ್ಟವಾಗಿದೆ. ಪಕ್ಷದ ಪರವಾಗಿ ಎಎಪಿ ಮಾಧ್ಯಮ ಮುಖ್ಯಸ್ಥ ವಿಜಯ್ ನಾಯರ್ ಅವರು ಸೌತ್ ಗ್ರೂಪ್‌ನಿಂದ ಮುಂಗಡವಾಗಿ 100 ಕೋಟಿ ರೂ. ಕಿಕ್‌ಬ್ಯಾಕ್ ಪಡೆದಿದ್ದಾರೆ ಎನ್ನಲಾಗಿದೆ.




ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇದುವರೆಗೆ ಏಳು ಆರೋಪಪಟ್ಟಿಗಳನ್ನು ಸಲ್ಲಿಸಿದೆ. ಮಾ.21 ರಂದು ಅರವಿಂದ್ ಕೇಜ್ರಿವಾಲ್ ಮತ್ತು ಮಾರ್ಚ್ 15 ರಂದು ಕವಿತಾ ಸೇರಿದಂತೆ 18 ಜನರನ್ನು ಬಂಧಿಸಲಾಗಿದೆ. ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರನ್ನು ಕಳೆದ ವರ್ಷ ಮಾರ್ಚ್‌ನಲ್ಲಿ ಈ ಪ್ರಕರಣದಲ್ಲಿ ಬಂಧಿಸಲಾಯಿತು ಮತ್ತು ಇನ್ನೂ ನ್ಯಾಯಾಂಗ ಬಂಧನದಲ್ಲಿದ್ದಾರೆ. ಕೇಜ್ರಿವಾಲ್‌ಗೆ ಏಪ್ರಿಲ್ 10 ರಂದು ಸುಪ್ರೀಂ ಕೋರ್ಟ್ ಮಧ್ಯಂತರ ಜಾಮೀನು ನೀಡಿದೆ.

> ಸಿಎಂ ಅರವಿಂದ್ ಕೇಜ್ರಿವಾಲ್ ವಿರುದ್ಧ ದೆಹಲಿಯ ರೌಸ್ ಅವೆನ್ಯೂ ಕೋರ್ಟ್‌ಗೆ ಮೊದಲ ಆರೋಪ ಪಟ್ಟಿ ಸಲ್ಲಿಕೆಯಾಗಿದೆ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಆರೋಪ ಪಟ್ಟಿ ಸಲ್ಲಿರುವ ಇ.ಡಿ ಅರವಿಂದ್ ಕೇಜ್ರಿವಾಲ್ ಜೊತೆಗೆ ಇದೇ ಮೊದಲ ಬಾರಿಗೆ ರಾಜಕೀಯ ಪಕ್ಷವೊಂದರ ವಿರುದ್ಧವೂ ಆಕ್ಷೇಪಣೆ ಸಲ್ಲಿಸಿ ಆರೋಪಿಯನ್ನಾಗಿಸಿದೆ.

### ಆದೇಶ ಕಾಯ್ದಿರಿಸಿದ ಸುಪ್ರೀಂಕೋರ್ಟ್

ಹೊಸ ಅಬಕಾರಿ ನೀತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಬಂಧನವನ್ನು ಪ್ರಶ್ನಿಸಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಶುಕ್ರವಾರ ಆದೇಶದ ಕಾಯ್ದಿರಿಸಿದೆ. ಪ್ರಕರಣದ ವಿಚಾರಣೆ ನಡೆಸಿದ ನ್ಯಾ.ಸಂಜೀವ್ ಖನ್ನಾ ನೇತೃತ್ವದ ದ್ವಿ ಸದಸ್ಯ ಪೀಠ, ಪ್ರಕರಣದ ಲಿಖಿತ ದಾಖಲೆಗಳನ್ನು ಪರಿಶೀಲಿಸಿತು ಮತ್ತು ಕೇಜ್ರಿವಾಲ್ ಅವರನ್ನು ಬಂಧಿಸುವ ನಿರ್ಧಾರವನ್ನು ಸಮರ್ಥಿಸಲು ದೆಹಲಿಯ ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ಬಂಧನದ ನಂತರ ಹೊಸ ಪುರಾವೆಗಳು ಹೊರಹೊಮ್ಮಿದವು ಎಂಬುದನ್ನು ತೋರಿಸಲು ಪಟ್ಟಿ ಸಲ್ಲಿಸುವಂತೆ ಇಡಿಗೆ ಸೂಚಿಸಿತು.

# ಪ್ರಜ್ವಲ್‌ರನ್ನು ಭಾರತಕ್ಕೆ ಕರೆತರುವ ಪ್ರಯತ್ನ ಪ್ರಗತಿಯಲ್ಲಿದೆ

**ಬೆಂಗಳೂರು, ಮೇ 17:** ರಾಷ್ಟ್ರಮಟ್ಟದಲ್ಲಿ ಸದ್ದು ಮಾಡಿರುವ ಹಾಸನದ ಹಾಲಿ ಸಂಸದ, ಪ್ರಜ್ವಲ್ ರೇವಣ್ಣಗೆ ಸಂಬಂಧಿಸಿದ ಲೈಂಗಿಕ ಪ್ರಕರಣ ಇದೀಗ ಹಲವು ತಿರುವುಗಳನ್ನು ಪಡೆದುಕೊಳ್ಳುತ್ತಿದೆ. ಮತ ಚಲಾಯಿಸಿದ ಬಳಿಕ ರಾಜ್ಯ ಬಿಟ್ಟು ವಿದೇಶಕ್ಕೆ ಪರಾರಿಯಾದ ಪ್ರಜ್ವಲ್, ತನ್ನ ವಿರುದ್ಧ ಕೇಳಿಬಂದ ಲೈಂಗಿಕ ದೌರ್ಜನ್ಯ ಆರೋಪಕ್ಕೆ ಒಂದು ತಿಂಗಳಾಗುತ್ತಿದ್ದರೂ ಸಹ ಇನ್ನೂ ತವರಿಗೆ ಮರಳಿಲ್ಲ.ಸದ್ಯ ಇದು ಭಾರೀ ಅನುಮಾನಕ್ಕೆ ಕಾರಣವಾಗಿದೆ.ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಆರೋಪ ಎದುರಿಸುತ್ತಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಭಾರತಕ್ಕೆ



ಕರೆತರುವ ಎಲ್ಲಾ ಪ್ರಯತ್ನಗಳು ಭರದಿಂದ ನಡೆಯುತ್ತಿದೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿಕೆ ನೀಡಿದ್ದು, ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದೆ ಎಂಬುದನ್ನು ಮತ್ತೊಮ್ಮೆ ಒತ್ತಿ ಹೇಳಿದರು. ಕಳೆದ ಏಪ್ರಿಲ್ 27ರಂದು ಜರ್ಮನಿಗೆ ತೆರಳಿದ ಪ್ರಜ್ವಲ್ ರೇವಣ್ಣ ಈ ಪ್ರಕರಣದಿಂದ ಇಡೀ ರಾಜ್ಯ ರಾಜಕೀಯದಲ್ಲಿ ದೊಡ್ಡ ಕೋಲಾಹಲವನ್ನೇ ಎಬ್ಬಿಸಿದ್ದಾರೆ. ಈ ವಿಷಯದಿಂದ ತೀವ್ರ ಕೆಂಡಾಮಂಡಲಗೊಂಡಿರುವ ಕಾಂಗ್ರೆಸ್, ಬಿಜೆಪಿ-ಜೆಡಿ(ಎಸ್) ನಾಯಕರ ವಿರುದ್ಧ ವ್ಯಾಪಕ ಆಕ್ರೋಶ, ಆರೋಪಗಳನ್ನು ಎಸಗಿದೆ. ಸದ್ಯ ಪ್ರಜ್ವಲ್ ರೇವಣ್ಣರನ್ನು ಕರೆತರುವ ಪ್ರಕ್ರಿಯೆಗಳು ನಡೆಯುತ್ತಿವೆ ಎಂದು ಪರಮೇಶ್ವರ್ ಹೇಳಿರುವುದು ಇದೀಗ ಅನೇಕರನ್ನು ಮತ್ತಷ್ಟು ಕೆರಳಿಸಿದೆ.

# ಕಡಿಮೆ ಅಂಕ ಗಳಿಸಿದವರಿಗೂ ರಾಜ್ಯದ ಪ್ರತಿಷ್ಠಿತ ಕಾಲೇಜುಗಳಲ್ಲಿ ಪ್ರವೇಶಕ್ಕೆ ನಿಯಮಾವಳಿ ರೂಪಿಸಿ: ಸರ್ಕಾರಕ್ಕೆ ಹೊರಟ್ಟಿ ಮನವಿ


ಬೆಂಗಳೂರ, ಮೇ.17: ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಪಡೆದ ಮಕ್ಕಳಿಗೂ ಸಹ ರಾಜ್ಯದ ಪ್ರತಿಷ್ಠಿತ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ತರಗತಿ ಪ್ರವೇಶಾತಿ ದೊರೆಯುವಂತೆ ಸರ್ಕಾರ ನಿಯಮಾವಳಿ ರೂಪಿಸಿ ನಿಯಮ ಕಟ್ಟುನಿಟ್ಟಾಗಿ ಜಾರಿಗೊಳ್ಳುವಂತೆ ಕ್ರಮ ವಹಿಸಲು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ಬರೆದಿರುವ ಅವರು ಕೇವಲ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ನೀಡುವುದು ಮಕ್ಕಳ ಹಕ್ಕುಗಳ ಉಲ್ಲಂಘನೆ ಎಂದಿದ್ದಾರೆ. ಅನುದಾನಿತ, ಅನುದಾನ ರಹಿತ, ಖಾಸಗಿ ಮತ್ತು ಸರ್ಕಾರಿ ಸೇರಿದಂತೆ ಪ್ರತಿ ಪಿಯು ಕಾಲೇಜಿನಲ್ಲೂ ಎಸ್ಸೆಸ್ಸೆಲ್ಸಿಯಲ್ಲಿ ಕನಿಷ್ಠ 35 ಅಂಕಗಳೊಂದಿಗೆ ತೇರ್ಗಡೆಯಾದವರಿಗೆ ಕೂಡಾ ಪ್ರವೇಶ ಸಿಗುವಂತಾಬೇಕು. ಶೇ.35 ರಿಂದ 50 ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಶೇ.50 ರಷ್ಟು ಸೀಟುಗಳನ್ನು ಮೀಸಲಿಡಬೇಕು. ಶೇ.51 ರಿಂದ 75 ರಷ್ಟು ಅಂಕ ಪಡೆದವರಿಗೆ ಶೇ.25 ಸೀಟುಗಳನ್ನು ಮೀಸಲಿಡಬೇಕು. ಉಳಿದವುಗಳನ್ನು ಆಡಳಿತ ಮಂಡಳಿ ಬಯಸುವ ರೀತಿ ನೀಡಬಹುದು ಎಂದು ಸಲಹೆ ನೀಡಿದ್ದಾರೆ. ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಪಿಯು ಕಾಲೇಜುಗಳು ಪ್ರವೇಶ ನಿರಾಕರಿಸುತ್ತಿವೆ. ತಮ್ಮಲ್ಲಿ ಶೇ.94, 95 ರ ಮೇಲಿನವರಿಗಷ್ಟೇ ಪ್ರವೇಶ ಎನ್ನುತ್ತಿವೆ. ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಇದೇ ಸ್ಥಿತಿ ನಿರ್ಮಾಣವಾಗಿದೆ.



ಹೀಗಾಗಿ ಹೆಸರಾಂತ ಶಾಲೆಗಳಲ್ಲಿ ಕಲಿಯಬೇಕೆಂಬ ಮಕ್ಕಳು-ಪಾಲಕರ ಇಚ್ಛೆ ಈಡೇರದಂತಾಗಿದೆ ಎಂದು ಬಸವರಾಜ ಹೊರಟ್ಟಿ ವಿಷಾದ ವ್ಯಕ್ತ ಪಡಿಸಿದ್ದಾರೆ. ಬೆಳಗಾವಿ ವಿಭಾಗದ ಕಾಲೇಜುಗಳಲ್ಲಂತೂ ಈ ಸಮಸ್ಯೆ ಹೆಚ್ಚಾಗಿ ಕಾಡುತ್ತಿದೆ. ತಾವು ಶಿಕ್ಷಣ ಸಚಿವರಾಗಿದ್ದಾಗ ಕಾನೂನು ತಂದು ಕಡಿಮೆ ಅಂಕ ಪಡೆದವರಿಗೆ ಕೂಡ ಎಲ್ಲಾ ಕಾಲೇಜುಗಳಲ್ಲಿ ಪ್ರವೇಶ ದೊರೆಯುವಂತೆ ಮಾಡುವ ತೀರ್ಮಾನ ತೆಗೆದುಕೊಳ್ಳಲಾಗಿತ್ತು. ಆದರೆ ಅಷ್ಟರಲ್ಲಿ ಸರ್ಕಾರದ ಅವಧಿ ಮುಗಿದಿದ್ದರಿಂದ ಈ ಉದ್ದೇಶ ಈಡೇರಿರಲಿಲ್ಲ ಎಂದು ಹೇಳಿರುವ ಬಸವರಾಜ ಹೊರಟ್ಟಿ ಈ ರೀತಿ ಮಾಡಿದರೆ ರಾಜ್ಯದ ಎಲ್ಲಾ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಕಾಲೇಜುಗಳಲ್ಲಿ ಪ್ರವೇಶ ದೊರೆತು ಇತರ ವಿದ್ಯಾರ್ಥಿಗಳೊಂದಿಗೆ ಜ್ಞಾನಾರ್ಜನೆ ಕೈಗೊಂಡು ಅತ್ಯುತ್ತಮ ಅಂಕ ಗಳಿಸುವ ಮೂಲಕ ಜೀವನದಲ್ಲಿ ಉನ್ನತ ಸಾಧನೆ ಮಾಡುವ ಕನಸನ್ನು ನನಸಾಗಿಸಿಕೊಳ್ಳಬಹುದುದೆಂದು ಅಭಿಪ್ರಾಯ ಪಟ್ಟಿದ್ದಾರೆ.

ಕೂಡಲೇ ಈ ಸಂಬಂಧ ಸರ್ಕಾರ ಆದೇಶ ಹೊರಡಿಸಬೇಕು ಹಾಗೂ ಕೈಗೊಂಡ ಕ್ರಮದ ಬಗ್ಗೆ ತಮಗೆ ಮಾಹಿತಿ ನೀಡುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಸೂಚಿಸಿದ್ದಾರೆ.



■ ಪ್ರಧಾನಿ ನರೇಂದ್ರ ಮೋದಿ ಅವರು ಶುಕ್ರವಾರ ಫತೇಪುರ್ ಜಿಲ್ಲೆಯಲ್ಲಿ ಲೋಕಸಭೆ ಚುನಾವಣಾ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು.

# ಪೌರತ್ವ ಪ್ರಮಾಣಪತ್ರ ಹಂಚಿಕೆ ನೀತಿಸಂಹಿತೆ ಉಲ್ಲಂಘನೆ ಸುಪ್ರೀಂಗೆ ಐಯುಎಂಎಲ್ ಅರ್ಜಿ




ನವದೆಹಲಿ, ಮೇ 17: ಪೌರತ್ವ ತಿದ್ದುಪಡಿ ಕಾಯ್ದೆ ಅಡಿ ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದ ಮುಸ್ಲಿಮೇತರರಿಗೆ ಭಾರತೀಯ ಪೌರತ್ವ ನೀಡುವ ಪ್ರಕ್ರಿಯೆಯನ್ನು ಕೇಂದ್ರ ಗೃಹ ಇಲಾಖೆ ಪ್ರಾರಂಭಿಸಿದೆ. ದೇಶದಲ್ಲಿ ಲೋಕಸಭೆ ಚುನಾವಣೆಯ ನಡೆಯುತ್ತಿರುವ ಮಧ್ಯೆ ಕೇಂದ್ರ ಸರ್ಕಾರ ಪೌರತ್ವ ಪ್ರಮಾಣಪತ್ರಗಳನ್ನು ವಿತರಿಸುವುದು ಚುನಾವಣಾ ಮಾರ್ಗಸೂಚಿಗಳ ಉಲ್ಲಂಘನೆಯಾಗಲಿದೆ ಎಂದು ಐಯುಎಂಎಲ್ ಆರೋಪಿಸಿದೆ. ಈ ಸಂಬಂಧ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿರುವ ಮುಸ್ಲಿಂ ಲೀಗ್, ಮತದಾರರ ಮೇಲೆ ಪ್ರಭಾವ ಬೀರಲು ಕೇಂದ್ರ ಸರ್ಕಾರ ಸಿಎಎ ಅಡಿಯಲ್ಲಿ ಪೌರತ್ವ ಪ್ರಮಾಣ ಪತ್ರಗಳನ್ನು ವಿತರಿಸಲು ಪ್ರಾರಂಭಿಸಿದೆ. ಇದು ಚುನಾವಣಾ ಮಾರ್ಗಸೂಚಿಗಳ ಉಲ್ಲಂಘನೆಯಾಗಿದೆ. ಇದರ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಒತ್ತಾಯಿಸಿದೆ.

ಈ ಬಗ್ಗೆ ಮಾತನಾಡಿದ ಐಯುಎಂಎಲ್ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿಎಂಎ ಸಲಾಂ, ಈ ವಿಷಯದ ಬಗ್ಗೆ ಕಾನೂನು ಅಭಿಪ್ರಾಯವನ್ನು ಪಡೆದುಕೊಳ್ಳಲು ಐಯುಎಂಎಲ್ ದೆಹಲಿಯ ಹಿರಿಯ ವಕೀಲರೊಂದಿಗೆ ಚರ್ಚೆಯನ್ನು ಪ್ರಾರಂಭಿಸಿದೆ. ಸಿಎಎ ವಿರುದ್ಧದ ನಮ್ಮ ಹೋರಾಟವನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ನಾವು ವಕೀಲರನ್ನು ಸಂಪರ್ಕಿಸಿದ್ದೇವೆ. ಈ ವಿಚಾರದಲ್ಲಿ ಪಕ್ಷವು ಸುಪ್ರೀಂ ಕೋರ್ಟ್ ಮತ್ತು ಚುನಾವಣಾ ಆಯೋಗವನ್ನು ಸಂಪರ್ಕಿಸಲಿದೆ ಎಂದು ಹೇಳಿದ್ದಾರೆ.

ಈಗಾಗಲೇ ಮೊದಲ ಹಂತದಲ್ಲಿ ಅರ್ಜಿ ಸಲ್ಲಿಸಿದ 300ಕ್ಕೂ ಅಧಿಕ ಜನರಿಗೆ ಕೇಂದ್ರ ಸರ್ಕಾರ ಪೌರತ್ವ ಪ್ರಮಾಣ ಪತ್ರ ವಿತರಿಸಿದೆ. 14 ಜನರು ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಭಲ್ಲಾ ಅವರಿಂದ ಬುಧವಾರ ಪ್ರಮಾಣ ಪತ್ರ ಪಡೆದಿದ್ದಾರೆ. ನಾಲ್ಕು ವರ್ಷಗಳ ಮುಂಚೆ, 2019ರಲ್ಲಿ ಸಿಎಎ ಮಸೂದೆ ಅಂಗೀಕಾರಗೊಂಡರೂ ಕೇಂದ್ರ ಸರ್ಕಾರ ಚುನಾವಣೆಯ ಹೊಸ್ತಿಲಲ್ಲಿ ಈ ವರ್ಷದ ಮಾರ್ಚ್ ತಿಂಗಳಲ್ಲಿ ಕಾಯ್ದೆ ಕುರಿತು ಅಧಿಸೂಚನೆ ಹೊರಡಿಸಿತ್ತು.

# ರಾಹುಲ್ ನಿಮ್ಮವ ಎಂದು ಪರಿಗಣಿಸಿ, ಆತ ನಿರಾಶೆಗೊಳಿಸುವುದಿಲ್ಲ: ಸೋನಿಯಾ ಭರವಸೆ

**ನವದೆಹಲಿ, ಮೇ 17:** ರಾಯ್ ಬರೇಲಿ ನನ್ನ ಕುಟುಂಬ, ಅಮೇಥಿ ಕೂಡ ನನ್ನ ಮನೆ ಇಲ್ಲಿ ನನ್ನ ಜೀವನದ ಸವಿ ನೆನಪುಗಳಿದೆ, ನಮ್ಮ ಕುಟುಂಬದ ಬೇರುಗಳು ಕಳೆದ 100 ವರ್ಷಗಳಿಂದ ಈ ಮಣ್ಣಿನೊಂದಿಗೆ ಸಂಬಂಧ ಬೆಸೆದುಕೊಂಡಿವೆ. ಗಂಗಾಮಾತೆಯಂತ ಪವಿತ್ರವಾದ ಈ ಸಂಬಂಧವು ಅವಧ್ ಮತ್ತು ರಾಯ್‌ಬರೇಲಿಯ ರೈತರ ಚಳವಳಿಯಿಂದ ಪ್ರಾರಂಭವಾಯಿತು ಮತ್ತು ಇಂದಿಗೂ ಮುಂದುವರೆದಿದೆ ಎಂದು ಸೋನಿಯಗಾಂಧಿ ಹೇಳಿದ್ದಾರೆ.

ರಾಯ್‌ಬರೇಲಿಯಲ್ಲಿ ರಾಹುಲ್ ಗಾಂಧಿ ಪರ ಮತಯಾಚಿಸಲು ಸಾರ್ವಜನಿಕ ಸಭೆ ಉದ್ದೇಶಿಸಿದ ಮಾತನಾಡಿದ ಅವರು ರಾಯ್ ಬರೇಲಿ ಜೊತೆಗಿನ ನೆನಪುಗಳನ್ನು ಹಂಚಿಕೊಂಡರು. ಇಂದಿರಾ ಗಾಂಧಿ ಅವರ ಹೃದಯದಲ್ಲಿ ರಾಯ್ ಬರೇಲಿಗೆ ವಿಶೇಷ ಸ್ಥಾನವಿತ್ತು. ಅವರು ಹತ್ತಿರದಿಂದ ಕೆಲಸ ಮಾಡುವುದನ್ನು ನಾನು ನೋಡಿದ್ದೇನೆ.

ಇಂದಿರಾ ಗಾಂಧಿ ಮತ್ತು ರಾಯ್‌ಬರೇಲಿಯ ಜನರು ನನಗೆ ನೀಡಿದ ಶಿಕ್ಷಣವನ್ನೇ ನಾನು ರಾಹುಲ್ ಮತ್ತು ಪ್ರಿಯಾಂಕಾ ಅವರಿಗೆ ನೀಡಿದ್ದೇನೆ, ಪ್ರತಿಯೊಬ್ಬರನ್ನು ಗೌರವಿಸಿ, ದುರ್ಬಲರನ್ನು ರಕ್ಷಿಸಿ, ಅನ್ಯಾಯದ ವಿರುದ್ಧ ಹೋರಾಡಿ ಮತ್ತು ಜನರ ಹಕ್ಕುಗಳಿಗಾಗಿ, ನೀವು ಏನು ಹೋರಾಡಬೇಕು.




ಭಯಪಡಬೇಡಿ, ಏಕೆಂದರೆ ನಿಮ್ಮ ಹೋರಾಟದ ಬೇರುಗಳು ಮತ್ತು ಸಂಪ್ರದಾಯಗಳು ತುಂಬಾ ಪ್ರಬಲವಾಗಿವೆ ಎಂದು ಹೇಳಿಕೊಟ್ಟಿದ್ದೇನೆ.

ಜೀವನದುದ್ದಕ್ಕೂ ನಿಮ್ಮ ಆಶೀರ್ವಾದ ಮತ್ತು ಪ್ರೀತಿ ನನ್ನ ಮಡಿಲು ತುಂಬಿದೆ. ನಿಮ್ಮ ಪ್ರೀತಿಯು ನನ್ನನ್ನು ಒಂಟಿಯಾಗಲು ಬಿಡಲಿಲ್ಲ. ನನ್ನದೆಲ್ಲವೂ ನೀವೂ ಕೊಟ್ಟದ್ದು ಆದ್ದರಿಂದ ನಾನು ನನ್ನ ಮಗನನ್ನು ನಿಮಗೆ ಒಪ್ಪಿಸುತ್ತಿದ್ದೇನೆ ನೀವು ನನ್ನನ್ನು ಹೇಗೆ ನಿಮ್ಮವಳು ಎಂದು ಪರಿಗಣಿಸಿದ್ದೀರೋ, ಅದೇ ರೀತಿ ನೀವು ರಾಹುಲ್‌ನನ್ನು ನಿಮ್ಮವ ಎಂದು ಪರಿಗಣಿಸಬೇಕು. ಈ ರಾಹುಲ್ ನಿಮ್ಮನ್ನು ನಿರಾಸೆಗೊಳಿಸುವುದಿಲ್ಲ ಎಂದು ಹೇಳಿದರು. ರಾಯ್ ಬರೇಲಿಯಲ್ಲಿ ನಡೆದ ಸಮಾವೇಶದಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಾಹುಲ್ ಗಾಂಧಿ, ಎಐಸಿಸಿ ಪ್ರದಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ, ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್ ಮತ್ತು ಎಸ್‌ಪಿ ಮುಖ್ಯಸ್ಥ ಮಾಜಿ ಸಿಎಂ ಅಖಿಲೇಶ್ ಯಾದವ್ ಉಪಸ್ಥಿತರಿದ್ದರು.

# ಮೇ 23ರಿಂದ ಮೇ 28ರವರೆಗೆ ಕರ್ನಾಟಕ ಸೇರಿ ಹಲವು ರಾಜ್ಯಗಳಲ್ಲಿ ಮಳೆ

ನವದೆಹಲಿ, ಮೇ 17: ಮುಂದಿನವಾರ ಮೇ 23ರಂದು ಬಂಗಾಳಕೊಲ್ಲಿಗೆ ಚಂಡ ಮಾರುತ ಅಪ್ಪಳಿಸಲಿದ್ದು ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ಮಳೆಯಾಗಲಿದೆ ಎನ್ನುವ ಮಾಹಿತಿಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ. ಬಂಗಾಳಕೊಲ್ಲಿಯಲ್ಲಿ ರೂಪುಗೊಳ್ಳಲಿರುವ ಚಂಡಮಾರುತ ಒಡಿಶಾ, ಮಹಾರಾಷ್ಟ್ರ ಹಾಗೂ ಗುಜರಾತ್‌ನಲ್ಲಿ ಮೇ 23ರಿಂದ ಮೇ 28ರ ನಡುವೆ ಭಾರಿ ಮಳೆಯುಂಟು ಮಾಡಲಿದೆ.



ಮೇ 28ರಂದು ಗುಜರಾತ್ ಹಾಗೂ ಮುಂಬೈನಲ್ಲಿ ಅತಿಹೆಚ್ಚು ಮಳೆಯಾಗುವ ನಿರೀಕ್ಷೆ ಇದೆ. ಚಂಡಮಾರುತ ರೂಪುಗೊಳ್ಳುತ್ತಿದ್ದು ಪಶ್ಚಿಮಕ್ಕೆ ಚಲಿಸುವ ಮೊದಲು ಪೂರ್ವ ಕರಾವಳಿಯಲ್ಲಿ ಭೂಕುಸಿತವನ್ನುಂಟು ಮಾಡಬಹುದು. ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರಾ ಮತ್ತು ಇತರ ರಾಜ್ಯಗಳಲ್ಲಿ ಮೇ 23ರವರೆಗೆ ಅಲ್ಪಪ್ರಮಾಣದ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮುಂದಿನ 7 ದಿನ ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿಯಿಂದ ಕೂಡಿದ ಮಳೆಯಾಗಲಿದೆ. ತಮಿಳುನಾಡು, ಕರ್ನಾಟಕ, ಪುದುಚೇರಿ, ಕೇರಳ, ಆಂಧ್ರಪ್ರದೇಶ, ತೆಲಂಗಾಣ, ಮತ್ತು ಲಕ್ಷದ್ವೀಪಗಳಲ್ಲಿ ಮೇ 23 ರವರೆಗೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಲ್ಲಿ ಚದುರಿದ ಸಣ್ಣ ಮಳೆಯಾಗಲಿದೆ. ತಮಿಳುನಾಡು, ಪುದುಚೇರಿ, ಕೇರಳ ಮತ್ತು ಕರ್ನಾಟಕದಲ್ಲಿ ಮೇ 20 ರವರೆಗೆ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಮೇ 20 ರಂದು ತಮಿಳುನಾಡು ಮತ್ತು ಕೇರಳಕ್ಕೆ ಭಾರಿ ಮಳೆಯ ಎಚ್ಚರಿಕೆ ನೀಡಲಾಗಿದೆ.

ಈಗಿನಿಂದಲೇ ಕೇರಳದ ವಿವಿಧ ಜಿಲ್ಲೆಗಳಲ್ಲಿ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಕೇಂದ್ರ ಹವಾಮಾನ ಇಲಾಖೆ (ಐಎಂಡಿ) ಮಾಹಿತಿ ನೀಡಿದೆ. ಮಲಪ್ಪುರಂ ಮತ್ತು ವಯನಾಡಿನಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಎಂಟು ಜಿಲ್ಲೆಗಳಲ್ಲಿ ಹಳದಿ ಅಲರ್ಟ್ ಘೋಷಿಸಲಾಗಿದೆ. ತಿರುವನಂತಪುರಂ, ಕೊಲ್ಲಂ, ಪತ್ತನಂತಿಟ್ಟ, ಇಡುಕ್ಕಿ, ಪಾಲಕ್ಕಾಡ್, ಕೋಳಿಕ್ಕೋಡ್, ಕಣ್ಣೂರು ಮತ್ತು ಕಾಸರಗೋಡು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ.

# ಇಂಡಿಯಾ ಪರ ಜನರ ಒಲವು: ಡಿಕೆಶಿ ವಿಶ್ವಾಸ

ಬೆಂಗಳೂರು, ಮೇ 17: ದೇಶದೆಲ್ಲೆಡೆ ಕಾಂಗ್ರೆಸ್ ಪಕ್ಷ ಹಾಗೂ ಇಂಡಿಯಾ ಮೈತ್ರಿಕೂಟದ ಪರವಾಗಿ ವಿಶ್ವಾಸ ಮೂಡುತ್ತಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯಿಸಿದರು. ಉತ್ತರ ಪ್ರದೇಶದಲ್ಲಿ ಚುನಾವಣಾ ಪ್ರಚಾರದ ಬಗ್ಗೆ ಮಾಧ್ಯಮಗಳು ಕೇಳಿದಾಗ ಅವರು ಹೇಳಿದ್ದಿಷ್ಟು,

ಉತ್ತರ ಪ್ರದೇಶದಲ್ಲಿ 40ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಇಂಡಿಯಾ ಮೈತ್ರಿಕೂಟ ಗೆಲ್ಲಲಿದೆ ಎಂಬ ವಿಶ್ವಾಸವಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕರ್ನಾಟಕ ಮಾದರಿಯಲ್ಲಿ ಗ್ಯಾರಂಟಿ ಯೋಜನೆಗಳ ಜತೆಗೆ ಬಡವರಿಗೆ 10 ಕೆ.ಜಿ ಉಚಿತ ಅಕ್ಕಿ ಯೋಜನೆ ಘೋಷಿಸಿದ್ದಾರೆ. ನಮ್ಮ ರಾಜ್ಯದಲ್ಲಿ ಹೇಗೆ ಕೊಟ್ಟಮಾತಿನಂತೆ ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದೇವೋ, ಅದೇ ರೀತಿ ಇಂಡಿಯಾ ಒಕ್ಕೂಟ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಗ್ಯಾರಂಟಿ ಯೋಜನೆ ಜಾರಿ ಮಾಡಲಿದೆ ಎಂದು ಜನರಿಗೆ ವಿವರಿಸಿದ್ದೇವೆ. ಜನರು ನಮ್ಮ ಯೋಜನೆಗಳ ಬಗ್ಗೆ ವಿಶ್ವಾಸ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ಇಂದು ಅಧಿಕಾರಿಗಳ ಜತೆ ನಡೆದ ಸಭೆ ಬಗ್ಗೆ ಕೇಳಿದಾಗ, ಬರಗಾಲ, ಕುಡಿಯುವ ನೀರು, ಮೇವಿನ ಸಮಸ್ಯೆ ಮತ್ತಿತರ ವಿಚಾರಗಳ ಬಗ್ಗೆ ಅಧಿಕಾರಿಗಳ ಜತೆ ಪರಿಶೀಲನಾ ಸಭೆ ಮಾಡಿದ್ದೇವೆ. ಬೆಂಗಳೂರಿನಲ್ಲಿ ಮಳೆ ಪರಿಣಾಮ ಕುರಿತು ಪ್ರತ್ಯೇಕ ಸಭೆ ಮಾಡುತ್ತೇನೆ. ಬತ್ತಿ ಹೋಗಿರುವ ಕೆರೆಗಳಿಗೆ ಪರಿಷ್ಕರಿಸಿದ ನೀರು ತುಂಬಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದರು.

# ರೇವಣ್ಣ ಮಧ್ಯಂತರ ಜಾಮೀನು ಸೋಮವಾರದವರೆಗೆ ವಿಸ್ತರಣೆ

ಬೆಂಗಳೂರು, ಮೇ 17: ಮನೆ ಕೆಲಸದ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಆರೋಪ ಎದುರಿಸುತ್ತಿರುವ ಮಾಜಿ ಸಚಿವ ಹಾಗೂ ಹೊಳೆನರಸೀಪುರ ಶಾಸಕ ಎಚ್‌ಡಿ ರೇವಣ್ಣಗೆ ನೀಡಿದ್ದ ಮಧ್ಯಂತರ ಜಾಮೀನನ್ನು ಕೋರ್ಟ್ ಸೋಮವಾರದವರೆಗೆ ಮುಂದುವರಿಸಿದೆ. ಶುಕ್ರವಾರ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣದ ವಿಚಾರಣೆ ಮುಂದುವರಿಸಿದ 42ನೇ ಸೆಷನ್ ನ್ಯಾಯಾಲಯ ಕೋರ್ಟ್ ತೀರ್ಪನ್ನು ಸೋಮವಾರಕ್ಕೆ ಕಾಯ್ದಿರಿಸಿ ಆದೇಶ ಹೊರಡಿಸಿದೆ. ಅಲ್ಲಿಯವರೆಗೆ ರೇವಣ್ಣಗೆ ನೀಡಿರುವ ಮಧ್ಯಂತರ ಜಾಮೀನು ಮುಂದುವರಿಯಲಿದೆ ಎಂದು ತಿಳಿಸಿದೆ. ರೇವಣ್ಣ ಪರ ಸಿ.ವಿ.ನಾಗೇಶ್, ಐಎಸ್‌ಟಿ ಎಸ್‌ಪಿಪಿ ಜಾಯ್ನಾ ಕೊಠಾರಿ ವಾದ ಮಂಡಿಸಿದರು.

### ಮೇ 20ಕ್ಕೆ ರೇವಣ್ಣ ಭವಿಷ್ಯ ನಿರ್ಧಾರ

ಎಚ್.ಡಿ.ರೇವಣ್ಣ ವಿರುದ್ಧ ಹೊಳೆನರಸೀಪುರದಲ್ಲಿ ಮನೆಕೆಲಸದಾಕೆ ಲೈಂಗಿಕ ದೌರ್ಜನ್ಯ ಪ್ರಕರಣ ದಾಖಲಿಸಿದ್ದಾರೆ. ಈ ಪ್ರಕರಣದಲ್ಲಿ ಜಾಮೀನಿಗಾಗಿ ಎಚ್‌ಡಿ ರೇವಣ್ಣ ಅರ್ಜಿ ಸಲ್ಲಿಸಿದ್ದರು. ಗುರುವಾರದಿಂದ ವಿಚಾರಣೆ ನಡೆಸುತ್ತಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಜಾಮೀನು ಅರ್ಜಿ ತೀರ್ಪನ್ನು ಮೇ.20ಕ್ಕೆ ಕಾಯ್ದಿರಿಸಿದೆ. ಅಲ್ಲಿಯವರೆಗೆ ಈಗ ನೀಡಿರುವ ಮಧ್ಯಂತರ ಜಾಮೀನು ಮುಂದುವರಿಯುತ್ತದೆ ಎಂದು ತಿಳಿಸಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363


॥ ಓಂ ಶ್ರೀ ಗುರುಬಸವಲಿಂಗಾಯ ನಮಃ ॥
Precious Parties And Entertainment Services Presents
ಯು.ಎ.ಇ. ಬಸವ ಸಮಿತಿ ದುಬೈ
U.A.E BASAVA SAMITHI DUBAI
UAE BASAVA SAMITHI DUBAI
ದುಬೈನಲ್ಲಿ 17ನೇ ವರ್ಷದ
ಬಸವ ಜಯಂತಿ ಆಚರಣೆ
17TH YEAR BASAVA JAYANTHI CELEBRATION
ಸಾಂಸ್ಕೃತಿಕ ನಾಯಕ ಬಸವಣ್ಣ
ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯ
ದಿವ್ಯ ಅಶೀರ್ವಾದದೊಂದಿಗೆ
ದಿವ್ಯ ಸಾನಿಧ್ಯ ಹಾಗೂ ಆಶೀರ್ವಚನ
ಪರಮಪೂಜ್ಯ ಜಗದ್ಗುರು
ಶ್ರೀ ಶ್ರೀ ಶ್ರೀ ಶಿವರಾತ್ರಿದೇಶಿಕೇಂದ್ರ ಮಹಾಸ್ವಾಮಿಗಳು
ಶ್ರೀ ಕ್ಷೇತ್ರ ಸುತ್ತೂರು, ಮೈಸೂರು ಜಿಲ್ಲೆ.
ಪೂಜ್ಯ ಶ್ರೀ ಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ ಶ್ರೀತರಳಬಾಳು ಜಗದ್ಗುರು
ಶ್ರೀ 1108 ಡಾ॥ ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳವರು
ತರಳಬಾಳು ಜಗದ್ಗುರು ಬೃಹನ್ಮಠ, ಸಿರಿಗೆರೆ.
ಪೂಜ್ಯ ಶ್ರೀ ಮ.ನಿ.ಪ್ರ.
ಶಾಂತವೀರ ಗುರು ಮುರುಘರಾಜೇಂದ್ರ ಮಹಾಸ್ವಾಮಿಗಳು
ಸಂಸ್ಥಾನ ಖಾಸಾಮಠ, ಗುರುಮಠಕಲ್ಲ
ಬಸವ ಭೂಷಣ ಪ್ರಶಸ್ತಿ ಪ್ರಧಾನ
ಗೌರವಾನ್ವಿತ ಅತಿಥಿಗಳು
ಡಾ॥ ಸಿ. ಸೋಮಶೇಖರ ಐ.ಎ.ಎಸ್. (ನಿ.)
ಅಧ್ಯಕ್ಷರು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು
ಶ್ರೀ ದೊಡ್ಡಣ್ಣ
ಕನ್ನಡ ಚಲನಚಿತ್ರ ಹಿರಿಯ ನಟರು ಮತ್ತು ರಂಗಭೂಮಿ ಕಲಾವಿದರು.
ಡಾ॥ ಶಾಮನೂರು ಶಿವಶಂಕರಪ್ಪ
ಮಾಜಿ ಸಚಿವರು, ಹಾಲಿ ಶಾಸಕರು ಹಾಗೂ ಅಧ್ಯಕ್ಷರು,
ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ,
ಅರಮನೆ ರಸ್ತೆ, ಬೆಂಗಳೂರು,
ಸರ್ವರಿಗೂ ಸುಸ್ವಾಗತ ಬಯಸುವವರು
ಶರಣ ಡಾ॥ ಬಸವರಾಜ್ ಹೊಂಗಲ ಹಾಗೂ
ಯುಎಇ ಬಸವ ಸಮಿತಿ ದುಬೈನ ಸರ್ವ ಸದಸ್ಯರು.
ದಿನಾಂಕ: 19-05-2024 ರಂದು ಭಾನುವಾರ,
ಸಮಯ: ಮಧ್ಯಾಹ್ನ 2.00 ಗಂಟೆಗೆ
ಸ್ಥಳ: ಜೆ.ಎಸ್.ಎಸ್ ಪ್ರೈವೇಟ್ ಸ್ಕೂಲ್, ಅಲ್ ಸಫಾ ದುಬೈ
ಸರ್ವರಿಗೂ ಆದರದ ಸುಸ್ವಾಗತ
ಕಾಯಕವೇ ಕೈಲಾಸ
WORK IS WORSHIP

## ನಿತ್ಯ ಪಂಚಾಂಗ 18.5.2024 ಶನಿವಾರ



ಶ್ರೀ ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ವೈಶಾಖ ಶುದ್ಧ

**ದಶಮಿ, ಉತ್ತರಾಷಾಢ ನಕ್ಷತ್ರ, ವಾಸವಿ/ಕನ್ಯಾಕಾಪರಮೇಶ್ವರೀ /ನಿಮಿಷಾಂಭಾ ಜಯಂತಿ ಕಾನಂಗಿ ಶ್ರೀನಿವಾಸ ರಥ, ಬೆಂಗಳೂರು ಕೋಟೆವೆಂಕರಮಣ ರಥ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಸಿದ್ದರಾಮಯ್ಯ ಸರ್ಕಾರಕ್ಕೆ 1 ವರ್ಷ: ಬಿಜೆಪಿಯ ಚಾರ್ಜ್‌ಶೀಟ್ ಸಿದ್ಧ; ತಿರುಗೇಟಿಗೆ ಕಾಂಗ್ರೆಸ್ ಸಜ್ಜು

**ಬೆಂಗಳೂರು, ಮೇ 17:** ದೇಶಾದ್ಯಂತ ಲೋಕಸಭಾ ಚುನಾವಣೆ ಕಾವು ಜೋರಾಗಿಯೇ ಇದೆ. ಈ ನಡುವೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಒಂದು ವರ್ಷ ಪೂರ್ಣವಾಗುತ್ತಿದೆ.

ಮೇ 20ಕ್ಕೆ ಒಂದು ವರ್ಷ ಪೂರ್ಣಗೊಳ್ಳುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಆರೋಪ ಪಟ್ಟಿ ರೆಡಿ ಮಾಡಲು ಸಿದ್ಧತೆ ನಡೆಸಿದೆ. ಇದಕ್ಕೆ ತಿರುಗೇಟು ಕೊಡಲು ಸಿಎಂ ಮತ್ತವರ ಮಂತ್ರಿ ಮಂಡಲದ ಸದಸ್ಯರು ಪ್ಲ್ಯಾನ್ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ಈಗಾಗಲೇ ಮುಗಿಬೀಳುತ್ತಿರುವ ಬಿಜೆಪಿಗರು ಕಾನೂನು ಸುವ್ಯವಸ್ಥೆ ಬಗ್ಗೆಯೂ ಟೀಕೆ ಮಾಡುತ್ತಿದ್ದಾರೆ. ಇನ್ನು ಒಂದು ವರ್ಷ ಸರ್ಕಾರ ಏನೆಲ್ಲ ವೈಫಲ್ಯಗಳನ್ನು ಮಾಡಿದೆ ಎಂಬ ಪಟ್ಟಿಯನ್ನು ಸಿದ್ಧಪಡಿಸಿಟ್ಟುಕೊಂಡು, ಇದು ಸರ್ಕಾರದ ಸಾಧನೆ ಎಂದು ನೆಗೆಟಿವ್ ರೋಲ್‌ನಲ್ಲಿ ಬಿಂಬಿಸಲು ಮುಂದಾಗಿದೆ.

ರಾಜ್ಯದಲ್ಲಿ ಎಂದೂ ಕಂಡರಿಯದ ಭೀಕರ ಬರಗಾಲ ಬಂದಿದೆ. ಆದರೆ, ಬರ ನಿರ್ವಹಣೆಯಲ್ಲಿ ವಿಫಲವಾಗಿದೆ. ರೈತರಿಗೆ ಪರಿಹಾರವನ್ನು ನೀಡಿಲ್ಲ. ರೈತರ ಬದುಕು ದುಸ್ತರವಾಗಿದೆ. ಕೇಂದ್ರ ಸರ್ಕಾರ ನೀಡಿದ ಬರ ಪರಿಹಾರದ ಹಣವೂ ರೈತರಿಗೆ ತಲುಪುತ್ತಿಲ್ಲ. ಅದನ್ನು ಬ್ಯಾಂಕ್‌ಗಳು ಸಾಲಕ್ಕೆ ಬಳಸಿಕೊಳ್ಳುತ್ತಿವೆ. ಇನ್ನು ಸರ್ಕಾರವು ಒಂದು ವರ್ಷದಲ್ಲಿ ಹೊಸ ಕಾಮಗಾರಿಗಳಿಗೆ ಗುದ್ದಲಿ ಪೂಜೆಯನ್ನೂ ಮಾಡಿಲ್ಲ.ಇಷ್ಟಲ್ಲದೆ ಶಾಸಕರ ಪರಿಸ್ಥಿತಿ ಇನ್ನೂ ಕಷ್ಟಕರವಾಗಿದೆ. ಶಾಸಕರಿಗೆ



ಅನುದಾನ ಕೊಡಲು ಹಣವಿಲ್ಲ. ರಾಜ್ಯದಲ್ಲಿ ಸರಣಿ ಕೊಲೆ, ಅತ್ಯಾಚಾರಗಳಾದರೂ ರಾಜ್ಯ ಸರ್ಕಾರ ಕಣ್ಣುಮುಚ್ಚಿ ಕುಳಿತಿದೆ. ಅನುದಾನ ಕೊಡುತ್ತೇವೆ, ಕೊಡುತ್ತೇವೆ ಎಂದೇ ದಿನ ದೂಡುತ್ತಿದೆ ಎಂದು ಸ್ವಪಕ್ಷೀಯ ಶಾಸಕರೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂಬುದನ್ನು ಜನರ ಮುಂದಿಡಲು ಬಿಜೆಪಿ ಮುಂದಾಗಿದೆ.ರಾಜ್ಯ ಸರ್ಕಾರದ ಮೇಲೆ ಮಾಡಲಾಗುವ ಎಲ್ಲ ಆರೋಪಗಳ ಪಟ್ಟಿಯನ್ನು ಒಂದು ಪುಸ್ತಕ ರೂಪದಲ್ಲಿ ತರಲು ಬಿಜೆಪಿ ಸಿದ್ಧತೆ ನಡೆಸಿದೆ ಎನ್ನಲಾಗಿದ್ದು, ಇದನ್ನು ದೊಡ್ಡಮಟ್ಟದಲ್ಲಿ ಅಭಿಯಾನವನ್ನಾಗಿ ಕೈಗೊಳ್ಳಲು ಚಿಂತಿಸಿದೆ ಎಂದು ಮೂಲಗಳು ತಿಳಿಸಿವೆ. ಹೀಗಾಗಿ ಸರ್ಕಾರದ ವಿರುದ್ಧ ಇದೇ ಇವರಿಗೆ ಪ್ರಮುಖ ಅಸ್ತ್ರವಾಗಿರಲಿದೆ. ಇತ್ತ ಒಂದು ವರ್ಷ ಪೂರೈಸಿರುವ ಸಿದ್ದರಾಮಯ್ಯ ಸರ್ಕಾರದಿಂದ ಸಾಧನಾ ಸಮಾವೇಶ ಮಾಡಲು ಯೋಜಿಸಲಾಗಿದೆ. ಈಗ ಲೋಕಸಭಾ ಚುನಾವಣೆ ನಡೆಯುತ್ತಿರುವುದರಿಂದ ಫಲಿತಾಂಶದವರೆಗೂ ಚುನಾವಣಾ ನೀತಿಸಂಹಿತೆ ಜಾರಿಯಲ್ಲಿದೆ. ಜೂನ್ ಎರಡನೇ ವಾರದಲ್ಲಿ ಸಾಧನಾ ಸಮಾವೇಶ ಮಾಡಲು ಸಿದ್ಧತೆಗಳು ನಡೆದಿವೆ ಎನ್ನಲಾಗಿದೆ.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಕರ್ನಾಟಕದಲ್ಲಿ ಅಧಿಕ ಸ್ಥಾನ ಬಂದರೆ ಎರಡನ್ನೂ ಒಟ್ಟಿಗೆ ಸೇರಿ ಸಮಾವೇಶ ಮಾಡುವಂತೆ ಸಿಎಂ ಆಪ್ತರು ಸಲಹೆ ನೀಡಿದ್ದಾರೆನ್ನಲಾಗಿದೆ. ಈ ಸಮಾವೇಶ ಮಾಡುವ ಮೂಲಕ ಗ್ಯಾರಂಟಿ ಸರ್ಕಾರದ ಯಶಸ್ವಿ ನಾಗಾಲೋಟ ಮುಂದುವರಿಯುತ್ತದೆ ಎಂಬ ಸಂದೇಶವನ್ನು ರವಾನೆ ಮಾಡಲು ಚಿಂತನೆ ನಡೆಸಲಾಗಿದೆ. ಒಟ್ಟಾರೆಯಾಗಿ ಬಿಜೆಪಿಯ ವಿಫಲ ಸರ್ಕಾರ ಅಸ್ತ್ರಕ್ಕೆ ಪ್ರತಿಯಾಗಿ ಸಾಧನಾ ಸಮಾವೇಶ ಮಾಡಿ ಎದುರೇಟು ನೀಡಲು ಕಾಂಗ್ರೆಸ್ ತಂತ್ರರೂಪಿಸಿದೆ.

## ಎಚ್.ಡಿ.ರೇವಣ್ಣ ಅಧ್ಯಕ್ಷತೆಯಲ್ಲಿ ಕಾಗದಪತ್ರಗಳ ಸಮಿತಿ ಸಭೆ

**ಬೆಂಗಳೂರು, ಮೇ 17:** ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಇಂದು 2023-24ನೇ ಸಾಲಿನ ವಿಧಾನಸಭೆಯ ಮುಂದಿಡಲಾಗುವ ಕಾಗದಪತ್ರಗಳ ಸಮಿತಿ ಸಭೆ ವಿಧಾನಸೌಧದಲ್ಲಿ ಇಂದು ಜರುಗಿತು. ಲೋಕಸಭೆ ಚುನಾವಣೆ ಹಿನ್ನಲೆಯಲ್ಲಿ ವಿವಿಧ ಸ್ಥಾಯಿ ಸಮಿತಿಗಳ ಸಭೆಯನ್ನು ಚುನಾವಣಾ ಪ್ರಕ್ರಿಯೆ ಮುಗಿಯುವವರೆಗೂ ನಡೆಸದಂತೆ ವಿಧಾನಸಭಾಧ್ಯಕ್ಷರು ನಿರ್ದೇಶನ ನೀಡಿದ್ದರು.

ರಾಜ್ಯದಲ್ಲಿ ಎರಡು ಹಂತದ ಲೋಕಸಭೆ ಚುನಾವಣೆಯ ಮತದಾನ ಪೂರ್ಣಗೊಂಡಿರುವ ಹಿನ್ನಲೆಯಲ್ಲಿ ವಿವಿಧ ಸ್ಥಾಯಿಸಮಿತಿಗಳ ಸಭೆ ನಡೆಸಲು ಸಭಾಧ್ಯಕ್ಷರು ಅನುಮತಿ ನೀಡಿದ್ದ



ಹಿನ್ನೆಲೆಯಲ್ಲಿ ಇಂದು ರೇವಣ್ಣ ಅವರು ತಮ ಅಧ್ಯಕ್ಷತೆಯಲ್ಲಿರುವ ಕಾಗದಪತ್ರಗಳ ಸಮಿತಿ ಸಭೆಯನ್ನು ನಡೆಸಿದರು. ನ್ಯಾಯಾಲಯದಿಂದ ಜಾಮೀನು ಪಡೆದು ಜೈಲಿನಿಂದ ಬಿಡುಗಡೆಯಾದ ನಂತರ ಪ್ರತಿದಿನ ಒಂದಲ್ಲ ಒಂದು ದೇವಾಲಯಕ್ಕೆ ಭೇಟಿ ನೀಡಿ, ಸಂಕಷ್ಟ ಪರಿಹಾರಕ್ಕಾಗಿ ವಿಶೇಷ ಪೂಜೆ ಸಲ್ಲಿಸುತ್ತಿರುವ ರೇವಣ್ಣ ಅವರು, ಇಂದು ಮಧ್ಯಾಹ್ನ ಎಂದಿನಂತೆ ಸಮಿತಿ ಸಭೆಯಲ್ಲಿ ಭಾಗಿಯಾಗಿದ್ದರು.

### ಪ್ರತಿಕ್ರಿಯೆ ನೀಡಲು ನಿರಾಕರಣೆ

ಮಾಜಿ ಸಚಿವ ಹಾಗೂ ಶಾಸಕ ಎಚ್.ಡಿ.ರೇವಣ್ಣ ಅವರು ಯಾವುದೇ ರೀತಿಯ ಪ್ರತಿಕ್ರಿಯೆ ನೀಡಲು ನಿರಾಕರಿಸಿದರು. ವಿಧಾನಸೌಧದಲ್ಲಿ ನಡೆದ 2023-24ನೇ ಸಾಲಿನ ವಿಧಾನಸಭೆಯ ಮುಂದಿಡಲಾಗುವ ಕಾಗದಪತ್ರಗಳ ಸಮಿತಿ ಸಭೆಯ ನಂತರ ಸುದ್ದಿಗಾರರು ರೇವಣ್ಣ ಅವರ ಪ್ರತಿಕ್ರಿಯೆ ಕೇಳಲು ಮುಂದಾದಾಗ ಏನೂ ಮಾತನಾಡುವುದಿಲ್ಲ ಎಂದಷ್ಟೇ ಹೇಳಿದರು. ವಿಷಯ ನ್ಯಾಯಾಲಯದಲ್ಲಿ ಇರುವಾಗ ತಾವು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದ ಅವರು, ಕಾಗದಪತ್ರಗಳ ಸಮಿತಿಯ ಅಧ್ಯಕ್ಷರ ಬದಲಾವಣೆ ವಿಚಾರ ನನಗೆ ಗೊತ್ತಿಲ್ಲ ಎಂದು ಪ್ರತಿಕ್ರಿಯಿಸಿದರು. ಹೆಚ್ಚಿನ ಪ್ರತಿಕ್ರಿಯೆ ನೀಡಲು ಅವರು ನಿರಾಕರಿಸಿದರು.

## ಕಾನೂನು ಸುವ್ಯವಸ್ಥೆ ಕಾಪಾಡಲು ಆಗಲ್ಲ ಅಂದ್ರೆ ಅಧಿಕಾರ ಬಿಡಿ: ಬೊಮ್ಮಾಯಿ

**ಹುಬ್ಬಳ್ಳಿ, ಮೇ 17:** ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲಿಕ್ಕೆ ಆಗಲ್ಲ ಅಂದ್ರೆ ಜಾಗ ಖಾಲಿ ಮಾಡಿ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಹುಬ್ಬಳ್ಳಿಯ ವೀರಾಪುರ ಓಣಿಯಲ್ಲಿನ ಕೊಲೆಯಾದ ಅಂಜಲಿ ನಿವಾಸಕ್ಕೆ ಭೇಟಿನೀಡಿದ ನಂತರ ಅವರು ಸುದ್ದಿಗಾರರ ಜೊತೆಗೆ ಮಾತನಾಡಿದರು. ಅಂಜಲಿ ಕೊಲೆ ಆಘಾತಕಾರಿ ಬೆಳವಣಿಗೆ ಆಗಿದೆ. ಆರೋಪಿಗಳಿಗೆ ಕಾನೂನಿನ ಭಯವೂ ಇಲ್ಲ, ಪೊಲೀಸರ ಭಯವೂ ಇಲ್ಲದಂತಾಗಿದ್ದು, ಏನು ಮಾಡಿದರೂ ನಡೆಯುತ್ತದೆ ಎಂಬ ಭಾವನೆ ಮೂಡಿದೆ. ನೇಹಾ ಪ್ರಕರಣ ನಡೆದ ನಂತರವೂ ಪೊಲೀಸರು ಎಚ್ಚೆತ್ತುಕೊಂಡಿಲ್ಲ. ಸಿಎಂ ಸೇರಿ ಇತರ ನಾಯಕರು ದೊಡ್ಡ ದೊಡ್ಡ ಮಾತುಗಳನ್ನಾಡಿದರು. ಏನೂ ಮಾಡದೆ ಇರೋ ಪರಿಣಾಮ ಈ ಹತ್ಯೆ ನಡೆದಿದ್ದು ಆರೋಪಿ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಂಡಿದ್ದರೆ ಈ ಪರಿಸ್ಥಿತಿ ಉಂಟಾಗುತ್ತಿರಲಿಲ್ಲ ಎಂದರು.ಪೊಲೀಸರೇ ಪರೋಕ್ಷವಾಗಿ ಇಂತಹ ಪರಿಸ್ಥಿತಿ ನಿರ್ಮಾಣಕ್ಕೆ ಕಾರಣ. ಪೊಲೀಸ್ ಠಾಣೆಗಳು ಇರುವುದಾದರೂ ಯಾಕೆ? ಪ್ರಶ್ನೆ ಮಾಡಿದ ಅವರು ವಿರೋಧ



ಪಕ್ಷದವರು ಹೇಳಿಕೆ ಕೊಟ್ಟರೆ ರಾಜಕೀಯ ಅಂತಾರೆ, ಇಷ್ಟೆಲ್ಲಾ ಕೊಲೆ ನಡೆದರೂ ನಾವು ಸುಮ್ಮನೆ ಕೂರಬೇಕೇ ಎಂದು ಪ್ರಶ್ನಿಸಿದ ಅವರು, ನಿಮ ಕೈಯಲ್ಲಿ ಕಾನೂನು ಕಾಪಾಡಲು ಆಗೋಲ್ಲ ಅಂದ್ರೆ ಕೂಡಲೇ ಜಾಗ ಖಾಲಿ ಮಾಡಿ ಎಂದರು.ಪೊಲೀಸರ ಅಮಾನತಿನಿಂದ ಈ ಪ್ರಕರಣಕ್ಕೆ ನ್ಯಾಯ ಸಿಗುತ್ತೆಯೇ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ರಚನೆ ಮಾಡಬೇಕು. ಆರೋಪಿಗೆ ಗಲ್ಲುಶಿಕ್ಷೆ ಆಗುವಂತೆ ಕ್ರಮ ಕೈಗೊಳ್ಳಬೇಕು. ಅಂಜಲಿ ಕುಟುಂಬಕ್ಕೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.ನಮ ಹೋರಾಟವನ್ನು ಇಲ್ಲಿಗೇ ಕೈಬಿಡಲ್ಲ. ಇದೇ ರೀತಿ ಕೊಲೆ ಪ್ರಕರಣ ನಡೆದರೆ ಜನವೇ ಸರ್ಕಾರದ ವಿರುದ್ಧ ತಿರುಗಿ ಬೀಳ್ತಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

**ಅನ್ನದಾತರ ಹೊಟ್ಟೆಗೆ ಹೊಡೆದ ಕಾಂಗ್ರೆಸ್ ಸರ್ಕಾರ- ಅಶೋಕ್ ಆರೋಪ**

## ಖಾಲಿ ಖಜಾನೆಯಲ್ಲಿ ಉಳಿದ ಚಿಲ್ಲರೆ ಎಣಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು, ಮೇ 17:** ರೈತ ವಿರೋಧಿ, ಕಣ್ಣು, ಕಿವಿ, ಹೃದಯ ಇಲ್ಲದ ಕಾಂಗ್ರೆಸ್ ಸರ್ಕಾರ ನರೇಗಾ ಹಣ, ಪಿಂಚಣಿ ಹಣವನ್ನೂ ರೈತರ ಸಾಲಕ್ಕೆ ಜಮೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೂಡಲೇ ರೈತರ ಹಣವನ್ನು ಸಾಲಕ್ಕೆ ಜಮೆ ಮಾಡಿಕೊಳ್ಳದಂತೆ ಬ್ಯಾಂಕ್ ಗಳಿಗೆ ಸೂಚಿಸಲು ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಲಿ. ಬ್ಯಾಂಕ್‌ಗಳು ಒಪ್ಪದಿದ್ದರೆ ರೈತರ ಸಾಲಮನ್ನಾ ಮಾಡಲಿ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕರ್ನಾಟಕದ ರೈತರಿಗಾಗಿ 3,454 ಕೋಟಿ ರೂ. ಬರ ಪರಿಹಾರವನ್ನು ಬಿಡುಗಡೆಗೊಳಿಸಿದೆ. ಆದರೆ ಇದಕ್ಕೆ ಪ್ರತಿಯಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರ ತನ್ನ ಪಾಲಿನ ಹಣವನ್ನು ನೀಡಿಲ್ಲ.

ಕೇಂದ್ರ ಸರ್ಕಾರ ನೀಡಿದ ಹಣವನ್ನು ಕೂಡ ರೈತರಿಗೆ ಸರಿಯಾಗಿ ತಲುಪಿಸಿಲ್ಲ. ಈ ಪರಿಹಾರದ ಹಣವನ್ನು ಹಳೇ ಬಾಕಿಗಳಿಗೆ ಬ್ಯಾಂಕುಗಳು ಜಮೆ ಮಾಡುತ್ತಿದ್ದರೂ ರಾಜ್ಯ ಸರ್ಕಾರ ತಕ್ಷಣದ ಕ್ರಮ ವಹಿಸದೆ ಕೈಕಟ್ಟಿ ಕುಳಿತಿತ್ತು.

ಈಗ ಪಿಂಚಣಿ, ನರೇಗಾ ಹಣವೂ ರೈತರ ಕೈ ಸೇರುವಂತೆ ನೋಡಿಕೊಳ್ಳಲು ಸರ್ಕಾರ



ವಿಫಲವಾಗಿದೆ.

ಈ ಮೂಲಕ ಅನ್ನದಾತರ ಹೊಟ್ಟೆಗೆ ಹೊಡೆಯುವ ಪಾಪದ ಕೆಲಸ ಮಾಡುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ಕೂಡಲೇ ಬ್ಯಾಂಕ್ ಅಧಿಕಾರಿಗಳ ಸಭೆ ಕರೆದು ರೈತರ ಹಣವನ್ನು ಸಾಲಕ್ಕೆ ಜಮೆ ಮಾಡಿಕೊಳ್ಳದಂತೆ ಸೂಚನೆ ನೀಡಲು ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಬೇಕು. ಬ್ಯಾಂಕ್ ಗಳು ಒಪ್ಪದಿದ್ದರೆ ರೈತರ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರ ಪ್ರವಾಹ ವಿಕೋಪದಿಂದ ಹಾನಿಗೊಳಗಾದವರಿಗೆ ದುಪ್ಪಟ್ಟು ಪರಿಹಾರ ನೀಡಿತ್ತು. ಕೇಂದ್ರ ಸರ್ಕಾರದ ಜೊತೆಗೆ ರಾಜ್ಯದ ಪಾಲನ್ನೂ ನೀಡಲಾಗಿತ್ತು. ಈಗ ಪಾಪರ್ ಆಗಿ ಖಾಲಿ ಖಜಾನೆಯಲ್ಲಿ ಚಿಲ್ಲರೆ ಎಷ್ಟು ಉಳಿದಿದೆ ಎಂದು ಎಣಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರೈತರ ಸಂಕಷ್ಟಕ್ಕೂ ಮಿಡಿಯದೆ ಸುಮ್ಮನಿದ್ದಾರೆ ಎಂದು ಟೀಕಿಸಿದ್ದಾರೆ.

### ಸಹಾಯಧನ ಘೋಷಿಸಿ

ಕಳೆದ ವರ್ಷ ಹಿಂಗಾರು, ಮುಂಗಾರು ಎರಡೂ ಕೈಕೊಟ್ಟಿದ್ದರಿಂದ ಈ ವರ್ಷ ರೈತರ ಬಳಿ ಬಿತ್ತನೆ ಬೀಜ, ರಸಗೊಬ್ಬರ ಕೊಳ್ಳಲು, ಉಳುಮೆ ಮಾಡಲೂ ಸಹ ಹಣವಿಲ್ಲದ ಪರಿಸ್ಥಿತಿ ಇದೆ. ಆದ್ದರಿಂದ ಈ ಕೂಡಲೇ ಎಕರೆಗೆ 5,000 ರೂ. ನಂತೆ ರೈತರಿಗೆ ವಿಶೇಷ ಸಹಾಯಧನ ಘೋಷಣೆ ಮಾಡಬೇಕು. ಇಲ್ಲವಾದಲ್ಲಿ ಈ ಬಾರಿಯೂ ಕೃಷಿ ಬೆಳೆಗಳು ಕೈ ಕೊಟ್ಟು ಆಹಾರ ಪದಾರ್ಥಗಳ ಕೊರತೆಯಿಂದ ಹಣದುಬ್ಬರ ಉಂಟಾಗಿ ತೀವ್ರ ಬೆಲೆ ಏರಿಕೆ ಆಗುವುದು ನಿಶ್ಚಿತ. ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡು ರೈತರ ಸಮಸ್ಯೆಗಳಿಗೆ ಸ್ಪಂದಿಸಿ ನಾಡಿನ ಕೃಷಿ ಚಟುವಟಿಕೆಯನ್ನು ಉಳಿಸಬೇಕು ಎಂದು ಆರ್.ಅಶೋಕ ಆಗ್ರಹಪಡಿಸಿದ್ದಾರೆ.

## ನ್ಯಾಚುರಲ್ ಐಸ್‌ಕ್ರೀಂ ಮಾಲೀಕ ರಘುನಂದನ್ ಎಸ್.ಕಾಮತ್ ನಿಧನ

**ಮುಂಬಯಿ, ಮೇ 17:** ಉಪನಗರ ಕಾಂದಿವಿಲಿ ಪಶ್ಚಿಮದ ಚಾರ್ಕೋಪ್ ಇಲ್ಲಿನ ನ್ಯಾಚುರಲ್ ಐಸ್‌ಕ್ರೀಂ ಸಂಸ್ಥೆಯ ಸಂಸ್ಥಾಪಕ ಮೂಲ್ಕಿ ರಘುನಂದನ್ ಶ್ರೀನಿವಾಸ ಕಾಮತ್ (70) ಅಲ್ಪಕಾಲದ ಅಸ್ವಸ್ಥತೆಯಿಂದ ಚೆರ್ನಿರೋಡ್‌ನ ಹೆಚ್.ಎನ್ ರಿಲಾಯನ್ಸ್ ಫೌಡೇಶನ್ ಆಸ್ಪತ್ರೆಯಲ್ಲಿ ಇಂದಿಲ್ಲಿ ರಾತ್ರಿ ನಿಧನರಾದರು.

ಮಂಗಳೂರು ಅಡ್ಯಾರ್ ಮೂಲತಃ ರಘುನಂದನ್ ಕಾಮತ್ ಅಂಧೇರಿ ಪಶ್ಚಿಮದ ಫೋರ್‌ಬಂಗಲೋ ಇಲ್ಲಿ ಸ್ವನಿವಾಸದಲ್ಲಿ ವಾಸವಾಗಿದ್ದ ಕಾಮತ್ ಅವರ್ ಟೈಮ್ಸ್ ಐಸ್‌ಕ್ರೀಮ್ಸ್ ಪ್ರೈವೇಟ್ ಲಿಮಿಟೆಡ್ ಇದರ ಕಾರ್ಯಾಧ್ಯಕ್ಷ ಆಗಿದ್ದು ಉಪನಗರ ಕಾಂದಿವಿಲಿ ಪಶ್ಚಿಮದ ಚಾರ್ಕೋಪ್ ಇಲ್ಲಿನ ನ್ಯಾಚುರಲ್ ಐಸ್‌ಕ್ರೀಂ (ಐಸ್ ಕ್ರೀಂ ಆಫ್ ಜುಹೂ ಸ್ಕೀಮ್) ಮೂಲಕ ಲಿಮ್ಕಾ ರೆಕಾರ್ಡ್ ಪುರಸ್ಕೃತರಾಗಿದ್ದರು. ಸದ್ಯ ದೇಶ ವಿದೇಶಗಳಲ್ಲಿ ತಮ್ಮ ಐಸ್‌ಕ್ರೀಮ್ ಉದ್ಯಮವನ್ನು ವಿಸ್ತರಿಸಿ ಜಾಗತಿಕವಾಗಿ ಜನಾನುರೆಣಿಸಿದ್ದರು.

ಮೃತರು ಪತ್ನಿ, ಇಬ್ಬರು ಸುಪುತ್ರರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಇನ್ನಷ್ಟೇ ನಿರ್ಧಾರಿಸಲಾಗುವುದು ಎಂದು ಕುಟುಂಬ ಮೂಲವು ತಿಳಿಸಿದೆ. ಜಿಎಸ್‌ಬಿ ಸಮುದಾಯದ



ಹಿರಿಯ ಧುರೀಣರೂ, ಕೊಡುಗೈದಾನಿಯಾಗಿದ್ದರು.

ಕಡಲ ತೀರ ಭಲದಂಕಮಲ್ಲ ಮೂಲ್ಕಿ ರಘುನಂದನ ಕಾಮತ್

ತನ್ನ ಭಾತೃ ಶ್ರೀ ಜಿ.ಎಸ್. ಕಾಮತ್‌ರ ಗರಡಿಯ ಕಟ್ಟು ನಿಟ್ಟಿನ ಆಡಳಿತ ವೈಕರಿಯಲ್ಲಿ ಪಳಗಿದ ಅನುಭವದ ಹಿನ್ನೆಲೆಯಲ್ಲಿ ಮರ್ಯಾದಾ ಪುರುಷೋತ್ತಮ ಶ್ರೀ ರಘುನಂದನ ಕಾಮತ್‌ರಿಗೆ 'ಶುದ್ಧತೆ ಮತ್ತು ಪರಿಶುದ್ಧತೆ'ಯ ಮಾನದಂಡದ ಪರಿವೆಯಿದ್ದುದರಿಂದ ಐಸ್‌ಕ್ರೀಂ ತಯಾರಿಕೆಯಲ್ಲಿ ಹೊಸತನ ಹಾಗೂ ತಾಜಾತನವನ್ನು ಕಲೆ ಹಾಕಿ ಐಸ್‌ಕ್ರೀಂ ತಯಾರಿಕೆಯಲ್ಲಿ ಒಂದು ಚಕ್ರವ್ಯೂಹವನ್ನೇ ಸೃಷ್ಟಿಸಿದರು.

ಎಲ್ಲ ಜಾತಿಯವರ ಶ್ರದ್ಧಾಕೇಂದ್ರವಾಗಿರುವ ಪೂಜ್ಯ ಪಾವನಿ ಶಾಂಭವಿ ನದಿ ತಟದಲ್ಲಿನೆಲೆಸಿರುವ ಬಪ್ಪನಾಡು ಶ್ರೀ ದುರ್ಗಾ ಪರಮೇಶ್ವರಿ ಕ್ಷೇತ್ರ, ಮೂಲ್ಕಿಯ ಸನಿಹದಲ್ಲಿರುವ ಒಂದು ಪುಟ್ಟ ಗ್ರಾಮ. ಪುತ್ತೂರಿನಲ್ಲಿ ಆಂಬೆ ಮಾಮು ಎಂದೇ ಪ್ರಸಿದ್ದಿ ಪಡೆದ ಶ್ರೀನಿವಾಸ ಕಾಮತ್ ಮತ್ತು ಶಾಂತಾ ಬಾಯಿ ಯಾನೆ ಅನಸೂಯ ದಂಪತಿ ಅವರ ಎಂಟು ಮಕ್ಕಳಲ್ಲಿ ಅತಿ ಕಿರಿಯವರು ರಘುನಂದನ ಕಾಮತ್.

ಇವರು ತಮ್ಮ ಸ್ವಗ್ರಾಮದಲ್ಲಿ 7ನೇ ತರಗತಿಯವರೆಗೆ ವ್ಯಾಸಂಗ ಮಾಡಿದ್ದರು. ಓದು ಬರಹದಲ್ಲಿ ಶ್ರೀ ರಘುನಂದನ ಕಾಮತ್ ನಿಸ್ಸಿಮರಲ್ಲದ ಕಾರಣ, ತಮ್ಮ ವ್ಯಾಸಂಗವನ್ನು 7ನೇ ತರಗತಿಗೆ ಸೀಮಿತಗೊಳಿಸಿ ಮುಂಬಯಿಗೆ ತೆರಳಿ, ಅಲ್ಲಿ ಎನ್‌ಕೆಇಎಸ್‌ಶಾಲೆಗೆ ಸೇರ್ಪಡೆಗೊಂಡರು. ಆದರೆ ವ್ಯಾಸಂಗದಲ್ಲಿ ಅಷ್ಟೊಂದು ಅಭಿರುಚಿ ಇಲ್ಲದಿದ್ದುದರಿಂದ, ಶ್ರೀಯುತ ಕಾಮತರು ವಿದ್ಯಾಭ್ಯಾಸಕ್ಕೆ ತಿಲಾಂಜಲಿ ಕೊಟ್ಟು ಹೊಟ್ಟೆಪಾಡಿಗಾಗಿ ತಮ್ಮ ಸ್ವಂತ ಅಣ್ಣ ಜಿ.ಎಸ್. ಕಾಮತ್ ಅವರ ಗೋಕುಲ್ ಐಸ್‌ಕ್ರೀಮ್‌ನಲ್ಲಿ ಕೆಲಸಕ್ಕೆ ಸೇರಿ ತಮ್ಮ ಜೀವನ ಚೈತ್ರ ಪ್ರಾರಂಭಿಸಿದರು.

ಮುಂದಕ್ಕೆ 1983ರಲ್ಲಿ ಶ್ರೀ ರಘುನಂದನ ಕಾಮತ್ ಅವರ ವಿವಾಹ ಸಚ್ಚರಿಪೇಟೆಯ ಸಚ್ಚಾರಿತ್ರೆಯ ಹಿನ್ನೆಲೆಯ ಕುಟುಂಬದ ಹುಡುಗಿಯೊಂದಿಗೆ ನೆರವೇರಿದ್ದು ಮುಂಬಯಿಯಲ್ಲಿ ಶ್ರೀ ರಘುನಂದನ ಕಾಮತರ ಧರ್ಮಪತ್ನಿ ಅವಿಭಕ್ತ ಕುಟುಂಬದ ಸದಸ್ಯರಾಗಿದ್ದು ಮುಂಬಯಿಯಲ್ಲಿ ಬಾಳು ಬೆಳಗಿಸಿದರು.

## ಜು.1ರಿಂದ ನೂತನ ಕಾನೂನುಗಳ ಅನುಷ್ಠಾನ: ಬಿ.ದಯಾನಂದ

**ಬೆಂಗಳೂರು,ಮೇ 17:** ಐಪಿಸಿ, ಸಿಆರ್‌ಪಿಸಿ ಸೇರಿದಂತೆ ದೇಶದ ಕಾನೂನುಗಳು ಬದಲಾವಣೆಯಾಗಿದ್ದು, ಜುಲೈ 1 ರಿಂದ ಜಾರಿಯಾಗಲಿರುವ ನೂತನ ಕಾನೂನುಗಳ ಅನುಷ್ಠಾನಕ್ಕೆ ನಗರದ ಎಲ್ಲಾ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಿದ್ಧರಾಗಬೇಕೆಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ತಿಳಿಸಿದ್ದಾರೆ.

ನಗರದ ಆಡುಗೋಡಿಯಲ್ಲಿನ ಸಿಎಆರ್ ಸೌತ್ ಕವಾಯತು ಮೈದಾನದಲ್ಲಿ ಇಂದು ಏರ್ಪಡಿಸಿದ್ದ ಮಾಸಿಕ ಕವಾಯತಿನಲ್ಲಿ ವಂದನೆಯನ್ನು ಸ್ವೀಕರಿಸಿ ಮಾತನಾಡಿದ ಅವರು, ಸ್ವಾತಂತ್ರ್ಯಪೂರ್ವದಿಂದಲೂ ಜಾರಿಯಲ್ಲಿದ್ದ ಐಪಿಸಿ, ಸಿಆರ್‌ಪಿಸಿ ಮತ್ತು ಸಾಕ್ಷ್ಯ ಕಾಯ್ದೆ ಬದಲಾಗಿ ಕೇಂದ್ರ ಸರ್ಕಾರ ಭಾರತೀಯ ನ್ಯಾಯಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, ಭಾರತೀಯ ಸಾಕ್ಷ್ಯ ಸಂಹಿತೆಯನ್ನು ರಚಿಸಿದ್ದು, ಅವು ಕಾನೂನಿನ ಸ್ವರೂಪ ಪಡೆದುಕೊಂಡು ಜು.1 ರಿಂದ ಅನುಷ್ಠಾನಗೊಳ್ಳಲಿವೆ ಎಂದರು.

ಈ ನೂತನ ಕಾನೂನುಗಳ ಪರಿಕರಗಳಲ್ಲಿ ಹೊಸ ಸೆಕ್ಷನ್‌ಗಳೇನು ಹೊಸ ಮತ್ತು ಹಳೆ ಸೆಕ್ಷನ್‌ಗಳಲ್ಲಿನ ಬದಲಾವಣೆ ಹಾಗೂ ವ್ಯತ್ಯಾಸದ ಬಗ್ಗೆ ತಿಳಿದುಕೊಳ್ಳಬೇಕು. ದೇಶದಲ್ಲಿ ಒಂದು ಬಾರಿ ಕಾನೂನು ಅನುಷ್ಠಾನವಾದ ಮೇಲೆ ಅದನ್ನು ಸಂಪೂರ್ಣವಾಗಿ ಪರಿಪಾಲನೆ ಮಾಡಬೇಕಾಗಿರುವುದು ನಮ ಕರ್ತವ್ಯ ಮತ್ತು ಜವಾಬ್ದಾರಿಯಾಗಿರುತ್ತದೆ ಎಂದು ಹೇಳಿದರು.

ಜುಲೈ 1 ರ ಪೂರ್ವವಾಗಿಯೇ ಈ ವಿಷಯದ ಬಗ್ಗೆ ಸಂಪೂರ್ಣ ಮಾಹಿತಿ ಪಡೆದುಕೊಳ್ಳಬೇಕಾಗುತ್ತದೆ. ಈಗಾಗಲೇ ಬೆಂಗಳೂರು ನಗರದ ಕೆಲ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ತರಬೇತಿ ಕೊಡಲಾಗಿದೆ.



ಮುಂದಿನ 15 ದಿನಗಳಲ್ಲಿ ಮತ್ತಷ್ಟು ಜನರಿಗೆ ತರಬೇತಿ ಪ್ರಾರಂಭವಾಗಲಿದೆ ಎಂದು ಹೇಳಿದರು.ಇದರಲ್ಲಿ ಮುಖ್ಯವಾಗಿ ಎಸಿಪಿ ಮಟ್ಟದ ಅಧಿಕಾರಿಗಳು ತಮ ಉಪವಿಭಾಗದ ಅಧೀನದಲ್ಲಿರುವ ಎಲ್ಲಾ ಪೊಲೀಸ್ ಠಾಣೆಗಳ ಮತ್ತು ಫೋಕಸ್ ಗ್ರೂಪ್ ಅಧಿಕಾರಿಗಳಿಗೆ, ಸಬ್ ಇನ್‌ಸಪೆಕ್ಟರ್‌ಗಳಿಗೆ ಐಒ ಮತ್ತು ಐಒ ಅಸಿಸ್ಟೆಂಟ್‌ಗಳು ಮತ್ತು ಸ್ಟೇಷನ್ ರೈಟರ್ಗಳಾದ ನಾಲ್ಕು ಅಥವಾ ಐದು ಸಿಬ್ಬಂದಿಗಳಿಗೆ ಅರಿವು ಮೂಡಿಸಬೇಕಾಗುತ್ತದೆ ಎಂದರು.

ಅಭಿಯೋಜನಾ ಅಧಿಕಾರಿಗಳು, ನ್ಯಾಯಾಲಯದ ಅಧಿಕಾರಿಗಳು ಅಥವಾ ಸ್ಥಳೀಯವಾಗಿರುವ ಕಾನೂನು ಕಾಲೇಜುಗಳ ನೆರವು ಪಡೆದು ತರಬೇತಿ ಕಾರ್ಯಕ್ರಮಗಳನ್ನು ನಡೆಸಲಾಗುವುದು.

ಜು.1 ರಿಂದ ಸಾರ್ವಜನಿಕರು ಪೊಲೀಸ್ ಠಾಣೆಗೆ ಬಂದು ದೂರು ನೀಡಿದರೆ, ನೂತನ ಕಾನೂನು ಮೂಲಕ ಪ್ರಕರಣ ದಾಖಲಿಸಬೇಕಾಗುತ್ತದೆ. ಯಾವ ಕಾಯಿದೆಯಡಿ ಪ್ರಕರಣ ದಾಖಲಿಸಬೇಕು ಎಂಬುದರ ಸಮಗ್ರ ಮಾಹಿತಿ ಜು.1 ರೊಳಗಾಗಿ ಯಾವುದೇ ಸಂಶಯವಿಲ್ಲದೆ ಎಲ್ಲಾ ಪೊಲೀಸ್ ಅಧಿಕಾರಿಗಳು ತಿಳಿದುಕೊಂಡಿರಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ಸಾರ್ವಜನಿಕರಿಗೆ ಇದರಿಂದ ಯಾವುದೇ ಅನಾನುಕೂಲ ಅಥವಾ ತೊಂದರೆಯಾಗದಂತೆ ಎಫ್‌ಐಆರ್ ದಾಖಲಿಸಬೇಕು. ಈ ಸಂಬಂಧ ನ್ಯಾಯಾಲಯಗಳಲ್ಲಿ ಇಲಾಖೆಗೆ ಯಾವುದೇ ಮುಜುಗರ ಉಂಟುಮಾಡದಂತೆ ಎಸಿಪಿ ಮಟ್ಟದ ಅಧಿಕಾರಿಗಳು ಗಮನ ವಹಿಸಬೇಕು ಎಂದು ಹೇಳಿದರು.ರಾಜ್ಯದಲ್ಲಿ ಲೋಕಸಭಾ ಚುನಾವಣೆ ಸುಸೂತ್ರವಾಗಿ ನಡೆದಿದೆ. ಇದಕ್ಕೆ ಸಹಕರಿಸಿದ ನೋಡಲ್ ಅಧಿಕಾರಿಗಳು, ಡಿಸಿಪಿ, ಎಸಿಪಿ ಅಧಿಕಾರಿಗಳ ಉತ್ತಮ ಸಂಯೋಜನೆ ಕಾರಣವಾಗಿದೆ. ಈ ಎಲ್ಲಾ ಅಧಿಕಾರಿಗಳಿಗೆ ಆಯುಕ್ತರು ಅಭಿನಂದನೆ ಸಲ್ಲಿಸಿದರು.

# ಮುಂಬಯಿಯಲ್ಲಿ ಕ್ರೈಸ್ತ ಸಮುದಾಯದ ಸಂವಹನ ಸಭೆಯಲ್ಲಿ ಐವಾನ್ ಡಿ'ಸೋಜಾ

**ಮುಂಬಯಿ, ಮೇ 17:** ರಾಷ್ಟ್ರದ ಸೇವೆಯಲ್ಲಿ ವಿಶೇಷವಾಗಿ ಶಿಕ್ಷಣ ಮತ್ತು ಆರೋಗ್ಯದ ಸೇವೆಯಲ್ಲಿ ಕ್ರೈಸ್ತರ ಕೊಡುಗೆ ಏನೆಂದು ಇಡೀ ವಿಶ್ವಕ್ಕೆ ತಿಳಿದಿದೆ. ದೇಶವನ್ನು ಸುಶಿಕ್ಷಿತರನ್ನಾಗಿಸಿ ಆರೋಗ್ಯವಂತವಾಗಿಸಿದ ಹೆಗ್ಗಳಿಕೆ ಕ್ರೈಸ್ತರದ್ದಾಗಿದೆ. ಇಂತಹ ಕ್ರೈಸ್ತ ಸಮುದಾಯದ ಕಡೆಗಣನೆ ಬರೇ ರಾಜಕೀಯ ಪ್ರೇರಿತವಾಗಿದೆ. ರಕ್ತಗತ ಮತ್ತು ಪರಂಪರಗತವಾಗಿ ಸೇವಾ ಮನೋಧರ್ಮವುಳ್ಳ ಕ್ರೈಸ್ತರು ರಾಜಕೀಯ ಕ್ಷೇತ್ರದಲ್ಲೂ ಆಸಕ್ತರಾಗುವ ಅಗತ್ಯವಿದೆ. ಕ್ರೈಸ್ತರಲ್ಲಿ ಮತಚಲಾಯಿಸುವ ಜಾಗೃತಿ ಆಗಬೇಕಾಗಿದೆ. ಪ್ರಧಾನಮಂತ್ರಿ ಮೋದಿ ಮತ್ತು ಎನ್‌ಡಿಎ ಕೂಟವು ರಾಷ್ಟ್ರದ ಮೈನಾರಿಟಿ ಮತ್ತು ಮೆಜಾರಿಟಿ ಬಗ್ಗೆ ಮಾತೆತ್ತುವುದೇ ಹಾಸ್ಯಾಸ್ಪದವಾಗಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ, ಮಾಜಿ ಎಂಎಲ್‌ಸಿ ಐವಾನ್ ಡಿ'ಸೋಜಾ ತಿಳಿಸಿದರು.

ಮುಂಬಯಿ ಉಪನಗರದ ಅಂಧೇರಿ ಪೂರ್ವದ ಚಕಲಾ ಇಲ್ಲಿನ ಹೋಟೇಲ್ ಸಾಯಿ ಪ್ಯಾಲೇಸ್‌ನಲ್ಲಿ ಇಂದಿಲ್ಲಿ ಗುರುವಾರ ಪೂರ್ವಾಹ್ನ ಆಯೋಜಿಸಿದ್ದ ಸಂವಹನ (ಇಂಟರ‍್ಯಾಕ್ಶನ್) ಸಭೆಯ ಅಧ್ಯಕ್ಷತೆ ವಹಿಸಿ ಐವಾನ್ ಡಿ'ಸೋಜಾ ಮಾತನಾಡಿದರು.

ಮಹಾರಾಷ್ಟ್ರ ಸರ್ಕಾರದ ಮಾಜಿ ಸಚಿವ



ಸುರೇಶ್ ಹೆಚ್.ಶೆಟ್ಟಿ, ಎಐಸಿಸಿ ಕಾರ್ಯದರ್ಶಿಗಳಾದ ಆಶಿಸ್ ದುವಾ, ಬಿ.ಎನ್ ಸಂದೀಪ್, ಕರ್ನಾಟಕದ ಸರ್ಕಾರದ ಮಾಜಿ ಸಚಿವ ಬಿ.ರಮಾನಾಥ ರೈ, ಕರ್ನಾಟಕ ಸರ್ಕಾರದ ಮಾಜಿ ಸಚಿವ ಮತ್ತು ಮಾಜಿ ಸಂಸದ ವಿನಯಕುಮಾರ್ ಸೊರಕೆ, ಉಡುಪಿ-ಚಿಕ್ಕಮಗಳೂರು ಕಾಂಗ್ರೆಸ್ (ಐ) ಪಕ್ಷದ ಸಂಸದ ಅಭ್ಯರ್ಥಿ ಕೆ.ಜಯಪ್ರಕಾಶ್ ಹೆಗ್ಡೆ, ಕ್ರಿಶ್ಚನ್ ಛೇಂಬರ್ ಆಫ್ ಕಾಮರ್ಸ್ ಎಂಡ್ ಇಂಡಸ್ಟ್ರೀಸ್‌ನ (ಸಿಸಿಸಿಐ) ಮಾಜಿ ಕಾರ್ಯಾಧ್ಯಕ್ಷ ಹೆನ್ರಿ ಲೊಬೋ, ಅಮಿತ್ ಜಗನ್ನಾಥ್ ಶೆಟ್ಟಿ, ಉದ್ಯಮಿ ಆಲ್ಬರ್ಟ್ ಡಬ್ಲ್ಯೂ. ಡಿಸೋಜಾ, ಸಭೆಯ ವೇದಿಕೆಯಲ್ಲಿ ಆಸೀನರಾಗಿದ್ದರು.

ಆಲ್ಬರ್ಟ್ ಡಿಸೋಜಾ, ಹೆನ್ರಿ ಲೊಬೋ, ಡಾ। ನೀಲ್ ಅಬ್ರೆಓ, ಪಾಸ್ಟರ್ ದೇವ್‌ದನ್ ತ್ರಿಭುವನ್, ಅಡ್ವಕೇಟ್ ಶರನ್ ಬಿ.ಡಿ'ಸೋಜಾ ಸಮಯೋಚಿತವಾಗಿ ಮಾತನಾಡಿ ಮತದಾನದ ಅವಶ್ಯಕತೆಯನ್ನು ಮನವರಿಸಿದರು.

ಸುರೇಶ್ ಹೆಚ್.ಶೆಟ್ಟಿ ಮಾತನಾಡಿ ಇಂದಿನ ಈ ಸಭೆಯು ಕಾಂಗ್ರೆಸ್ ಪಕ್ಷದ ಉತ್ಸಾಹವನ್ನು ತೋರುತ್ತದೆ. ರಾಷ್ಟ್ರೀಯ ಭಾವೈಕ್ಯತೆಗೆ ಕ್ರೈಸ್ತರ ಪಾತ್ರ ಮಹತ್ತರದ್ದಾಗಿದೆ. ಭಾರತದಲ್ಲಿ ಮತಾಂತರದ ಬಗ್ಗೆ ಯಾವುದೇ ಪುರಾವೆಯಿಲ್ಲ. ಇದೆಲ್ಲವೂ ರಾಜಕಿಯ ಪ್ರೇರಿತ ಷಡ್ಯಾಂತ್ರವಾಗಿದೆ. ಕ್ರೈಸ್ತ ಬಂಧುಗಳು ಯಾವೊತ್ತೂ ರಾಷ್ಟ್ರದ ನಿಷ್ಕಳಂಕಮಯ ಪ್ರಜೆಗಲಾಗಿದ್ದಾರೆ. ಇಂತಹ ಜನತೆಯ ಮೇಲಿನ ದೌರ್ಜನ್ಯ, ದಬ್ಬಾಳಿಕೆ ಸೃಷ್ಟಿಕರ್ತನೂ ಸಹಿಸಲಾರನು ಎಂದರು.

ಭಾರತದ ರಾಜಕಾರಣದಲ್ಲಿ ಬದಲಾವಣೆಯ ಪರ್ವ ಆರಂಭವಾಗಿದೆ. ಹತ್ತು ವರ್ಷಗಳನ್ನಾಳಿದ ಮೋದಿ ಸರ್ಕಾರವು ದೇಶದ ಸವಿಂಧಾನವನ್ನೇ ಬದಲಾಹಿಸಲು ಹೊರಟಿರುವುದು ರಾಷ್ಟ್ರದ ದುರಂತ. ಸವಿಂಧಾನದ ತಿದ್ದುಪಡಿ, ಸುಧಾರಣೆ ಸಾಧ್ಯವೇ ಹೊರತು ಬದಲಾವಣೆ ಅಸಾಧ್ಯ. ಸ್ವಸ್ಥ ರಾಷ್ಟ್ರ ನಿರ್ಮಾಣಕ್ಕೆ ಮತದಾನ ಎಷ್ಟು ಅಗತ್ಯವೋ ಅರ್ಹ ವ್ಯಕ್ತಿಯ ಆಯ್ಕೆಯೂ ಅಷ್ಟೇ ಮುಖ್ಯವಾಗಿದೆ. ಈ ಹೊಣೆಗಾರಿಕೆ ನಿಮ್ಮೆಲ್ಲರ ಜವಾಬ್ದಾರಿ ಆಗಬೇಕು ಎಂದು ಜಯಪ್ರಕಾಶ್ ಹೆಗ್ಡೆ ತಿಳಿಸಿದರು.

ಸಭೆಯಲ್ಲಿ ಅಂಧೇರಿ ಜಿಲ್ಲಾ ಮುಂಬಯಿ ಕಾಂಗ್ರೆಸ್ (ಐ) ಪಕ್ಷದ ಅಧ್ಯಕ್ಷ ಕ್ಲೈವ್ ಡಾಯಸ್, ಕಥೋಲಿ ಸಭಾ ಮುಂಬಯಿ ಮಾಜಿ ಉಪಾಧ್ಯಕ್ಷ ಲಾರೆನ್ಸ್ ಡಿಸೋಜಾ ಮುಲುಂಡ್, ಡೈಮೆನ್ಸಿಯನ್ ನಿರ್ದೇಶಕರುಗಳಾದ ಸಿಲ್ವೆಸ್ಟರ್ ರೋಡ್ರಿಗಸ್, ಸ್ಟೀವನ್ ಫೆರ್ನಾಂಡಿಸ್, ಸಿಎ। ಅರುಣ್ ವಾಸ್, ನಿಲೇಶ್ ಮಿನೇಜಸ್, ಸದಸ್ಯರಾದ ಐವಾನ್ ಆನಂದ್ ಡಿ'ಸೋಜಾ ನಕ್ರೆ, ಡೋಲ್ಫಿ ಡಿ'ಸೋಜಾ, ನಗರ ಸೇವಕಿ ವಿನ್ನಿ ಬಿ.ಡಿ'ಸೋಜಾ, ಬಂಟ್ವಾಳ ನಗರಾಭಿವೃದ್ಧಿ ಪ್ರಾಧಿಕಾರ (ಬೂಡಾ) ಅಧ್ಯಕ್ಷ, ಬಂಟ್ವಾಳ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬೇಬಿ ಕುಂದರ್, ಆಲ್ ಇಂಡಿಯಾ ಕಿಸಾನ್ ಕಾಂಗ್ರೆಸ್‌ನ ರಾಷ್ಟ್ರೀಯ ಜೊತೆ ಸಂಯೋಜಕ ಸುರೇಶ್ ಶೆಟ್ಟಿ ಯೆಯ್ಯಾಡಿ, ಉದ್ಯಮಿಗಳಾದ ಜೋನ್ ರೆಬೆಲ್ಲೋ ಚೆಂಬೂರು, ಫ್ರಾನ್ಸಿಸ್ ಕಾಸ್ತೆಲಿನೋ ಮಹಾಕಾಳಿ ಜಯಕರ್ ಶೆಟ್ಟಿ ಸಿದ್ಧಕಟ್ಟೆ, ಡೆನ್ಜಿಲ್ ಅಲ್ಲಿಪಾದೆ ಮತ್ತಿತರರು ಹಾಗೂ ಕ್ರೈಸ್ತ ಮುಖಂಡರನೇಕರು ಉಪಸ್ಥಿತರಿದ್ದರು.

ಮುಂಬಯಿ ಕಾಂಗ್ರೆಸ್ (ಐ) ಪಕ್ಷದ ಹಾಲಿ ಹಿರಿಯ ಉಪಾಧ್ಯಕ್ಷೆ, ಮಾಜಿ ಮಹಿಳಾ ಅಧ್ಯಕ್ಷೆ ಜಾನೆಟ್ ಎಲ್.ಡಿ'ಸೋಜಾ ಸ್ವಾಗತಿಸಿ ಪ್ರಸ್ತಾವನೆಗೈದರು. ಮೀರಾರೋಡ್‌ನ ಮಾಜಿ ನಗರ ಸೇವಕಿ ಮಾರ್ಲಿನ್ ಡೆಸಾ ವಂದಿಸಿದರು.



ಪೀಪಲ್ಸ್ ರಿಪಬ್ಲಿಕ್ ಆಫ್ ಚೀನಾ (ಪಿಆರ್‌ಸಿ) 11ನೇ ಪಂಚನ್ ಲಾಮಾ ಅವರನ್ನು ಅಪಹರಿಸಿ 29 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ, ಟಿಬೆಟಿಯನ್ ಸಮುದಾಯದ ಜನರು ಶುಕ್ರವಾರ ಮೈಸೂರಿನಲ್ಲಿ ಮೆರವಣಿಗೆ ನಡೆಸಿದರು.

# ಕೊಟ್ಟ ಮಾತಿನಂತೆ ಬಾಗಲಕೋಟೆ ಯುವತಿಗೆ ಪತ್ರ ಬರೆದ ಪ್ರಧಾನಿ ಮೋದಿ



**ಬಾಗಲಕೋಟೆ, ಮೇ.17–** ಚುನಾವಣಾ ಪ್ರಚಾರದ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಅವರ ತಾಯಿ ಇರುವ ಭಾವಚಿತ್ರ ಚಿತ್ರಿಸಿ ನೀಡಿದ್ದ ಬಾಗಲಕೋಟೆ ಯುವತಿ ನಾಗರತ್ನಾ ಬಸವರಾಜ ಮೇಟಿಯವರಿಗೆ ಮೋದಿ ಅವರು ಧನ್ಯವಾದ ತಿಳಿಸಿ ಪತ್ರ ಬರೆದಿದ್ದಾರೆ.

ಪ್ರಧಾನಿ ಮೋದಿ ಅವರು ಬಾಗಲಕೋಟೆಯಲ್ಲಿ ಭಾಷಣ ಮಾಡುವ ವೇಳೆ ನಾಗರತ್ನಾ ಅವರು ಪ್ರಧಾನಿ ಚಿತ್ರ ಹಿಡಿದು ಎಲ್ಲರಿಗೂ ಕಾಣುವಂತೆ ನಿಂತಿದ್ದರು. ಇದನ್ನು ಗಮನಿಸಿದ ಮೋದಿಯವರು ತಮ್ಮ ಅಂಗರಕ್ಷಕರಿಂದ ಫೋಟೋ ತರಿಸಿಕೊಂಡು, ಪತ್ರ ಬರೆಯುವುದಾಗಿ ತಿಳಿಸಿದ್ದರು. ಇದೀಗ ಕೊಟ್ಟ ಮಾತಿನಂತೆ ಪ್ರಧಾನಿ ಮೋದಿ ಯುವತಿಗೆ ಪತ್ರ ಬರೆದಿದ್ದಾರೆ.

ಏಪ್ರಿಲ್ 29ರಂದು ಬಾಗಲಕೋಟೆಗೆ ಲೋಕಸಭಾ ಚುನಾವಣಾ ಪ್ರಚಾರಕ್ಕೆ ಬಂದ ಸಂದರ್ಭದಲ್ಲಿ ಮೋದಿ ಅವರಿಗೆ ನಾಗರತ್ನಾ ಅವರು ಚಿತ್ರವನ್ನು ದೂರದಿಂದ ತೋರಿಸಿದ್ದರು. ಆಗ ಮೋದಿ ಅವರು ವಿಶೇಷ ಭದ್ರತಾ ಸಿಬ್ಬಂದಿಗೆ ಚಿತ್ರವನ್ನು ಸಂಗ್ರಹಿಸಿಕೊಳ್ಳುವಂತೆ ತಿಳಿಸಿದ್ದಲ್ಲದೇ, ನಿನ್ನ ಹೆಸರು, ವಿಳಾಸ ಬರೆದು ಕಳುಹಿಸು ಮಗಳೇ, ನಾನು ನಿನಗೆ ಖಂಡಿತವಾಗಿಯೂ ಪತ್ರ ಕಳುಹಿಸುತ್ತೇನೆಂದು ಹೇಳಿದ್ದರು.

ಈ ಕಲಾತ್ಮಕ ಚಿತ್ರವು ಮಾನವನ ಭಾವನೆಗಳ ಪ್ರಾಮುಖ್ಯ ತೋರಿಸುತ್ತದೆ. ಹೊಸ ಭಾರತ ಮತ್ತು ಯುವಶಕ್ತಿಯ ಭವಿಷ್ಯ ನಿರ್ಮಾಣಕ್ಕೆ ನನ್ನನ್ನು ಪ್ರೇರೇಪಿಸುತ್ತದೆ. ಕೌಶಲ ಹಾಗೂ ರಚನಾತಕ ಚಟುವಟಿಕೆಯನ್ನು ನಿಮ ಕೆಲಸದಲ್ಲಿ ಅಳವಡಿಸಿಕೊಳ್ಳಿ. ಶುಭವಾಗಲಿ ಎಂದು ಹಾರೈಸಿದ್ದಾರೆ.

ಮೋದಿಯವರ ಪತ್ರಕ್ಕೆ ನಾಗರತ್ನಾ ಅವರು ಬಹಳ ಸಂತಸ ವ್ಯಕ್ತಪಡಿಸಿದ್ದು, ಇದು ನನ್ನ ಜೀವನದಲ್ಲಿ ಮರೆಯಲಾಗದ ಕ್ಷಣ ಎಂದು ನಾಗರತ್ನ ಅವರ ಕುಟುಂಬದವರು ಹೇಳಿದ್ದಾರೆ.

### ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿ ನಿಷೇಧಾಜ್ಞೆ ಜಾರಿ

# ಬಳ್ಳಾರಿ ಜಿಲ್ಲಾಧಿಕಾರಿ ಮಿಶ್ರಾ ಆದೇಶ



**ಬಳ್ಳಾರಿ, ಮೇ.17–** ಬಳ್ಳಾರಿ ನಗರದ ಕೋಟೆ ಪ್ರದೇಶದ ಸೇಂಟ್ ಜಾನ್ಸ್ ಪ್ರೌಢ ಶಾಲೆ ಪರೀಕ್ಷಾ ಕೇಂದ್ರದಲ್ಲಿ ಮೇ 20 ರಿಂದ 29 ರ ವರೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ಕರ್ನಾಟಕ ಮುಕ್ತ ಶಾಲೆ–ಕೆಓಎಸ್ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ಆವರಣವನ್ನು ಸಿಆರ್‌ಪಿಸಿ ಕಲಂ 144 ಮೇರೆಗೆ ನಿರ್ಬಂಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾ ದಂಡಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತ–ಮುತ್ತ ಬೆಳಿಗ್ಗೆ 09 ಗಂಟೆಯಿಂದ ಮಧ್ಯಾಹ್ನ 1.30 ರವರೆಗೆ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಕೇಂದ್ರಗಳನ್ನು ಕಾರ್ಯ ನಿರ್ವಹಿಸದಂತೆ ಆದೇಶಿಸಿದ್ದು, ಈ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿ ಮತ್ತು ವ್ಯಕ್ತಿಗಳ ಗುಂಪುಗಳಿಗೆ ಪ್ರವೇಶ ನಿಷೇಧಿಸಲಾಗಿದೆ. ಈ ಆದೇಶವು ಪರೀಕ್ಷಾ ಕಾರ್ಯ ನಿರ್ವಹಿಸುವ ಸಿಬ್ಬಂದಿಯವರಿಗೆ ಅನ್ವಯಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಿದ್ದಾರೆ.

### ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಮನವಿ

# ಅನುತ್ತೀರ್ಣರಾದವರಿಗೆ ವಿಶೇಷ ತರಗತಿ ಆದೇಶ ರದ್ದತಿಗೆ ಆಗ್ರಹ



ಬೀದರ್‌ನಲ್ಲಿ ರಜೆ ಅವಧಿಯಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಅನುತ್ತೀರ್ಣ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ ನಡೆಸುವಂತೆ ಹೊರಡಿಸಿದ ಆದೇಶ ಹಿಂಪಡೆಯಬೇಕು ಎಂದು ಒತ್ತಾಯಿಸಿ ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಬೀದರ್‌ನಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿದರು

**ಬೀದರ್, ಮೇ.17–** ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ 1 ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ರಜೆ ಅವಧಿಯಲ್ಲಿ ವಿಶೇಷ ತರಗತಿ ನಡೆಸುವಂತೆ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಹೊರಡಿಸಿದ ಆದೇಶ ರದ್ದುಪಡಿಸಬೇಕು ಎಂದು ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕ ಆಗ್ರಹಿಸಿದೆ.

ಜಿಲ್ಲಾ ಘಟಕದ ಅಧ್ಯಕ್ಷ ಪಾಂಡುರಂಗ ಬೆಲ್ದಾರ್ ನೇತೃತ್ವದಲ್ಲಿ ಸಂಘದ ಪದಾಧಿಕಾರಿಗಳು ನಗರದಲ್ಲಿ ನಿಯೋಗದಲ್ಲಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಕಲಬುರಗಿಯ ಹೆಚ್ಚುವರಿ ಆಯುಕ್ತರಿಗೆ ಬರೆದ ಮನವಿ ಪತ್ರವನ್ನು ಇಲಾಖೆಯ ಅಧಿಕಾರಿ ಶಿವಲಿಂಗಪ್ಪ ಹಿರೇಮನಿ ಅವರಿಗೆ ಸಲ್ಲಿಸಿದರು.

ಏಪ್ರಿಲ್ 10 ರಿಂದ ಮೇ 28 ರ ವರೆಗೆ ರಜೆ ಅವಧಿ ಇದ್ದರೂ ಶಿಕ್ಷಕರು ಮೇ 7ರ ವರೆಗೆ ಎಸ್‌ಎಸ್‌ಯಿಎಲ್‌ಸಿ ಉತ್ತರ ಪತ್ರಿಕೆ ಮೌಲ್ಯಮಾಪನ ಹಾಗೂ ಲೋಕಸಭೆ ಚುನಾವಣೆ ಕೆಲಸ ನಿರ್ವಹಿಸಿದ್ದಾರೆ.

ಇದೀಗ ಉಳಿದ ರಜೆ ಅವಧಿಯಲ್ಲೂ ತರಗತಿ ನಡೆಸಲು ಸೂಚಿಸಿರುವುದು ಶಿಕ್ಷಕರಿಗೆ ಆಘಾತ ಉಂಟು ಮಾಡಿದೆ ಎಂದು ಹೇಳಿದರು. ಇಲಾಖೆ ಕ್ರಮ ಶಿಕ್ಷಕರ ಮೇಲೆ ಒತ್ತಡ ಹೇರುವಂಥದ್ದಾಗಿದೆ. ಇದು, ಕೆಲ ದಿನಗಳಾದರೂ ನೆಮ್ಮದಿಯಿಂದ ರಜೆ ಕಳೆಯ ಬಯಸಿದ್ದ ಶಿಕ್ಷಕರ ಮಾನಸಿಕ ಸ್ಥಿತಿ ಮೇಲೆ ಪರಿಣಾಮ ಬೀರಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಶಿಕ್ಷಕರಿಗೂ ವೈಯಕ್ತಿಕ ಬದುಕು ಇರುತ್ತದೆ. ರಜೆ ದಿನಗಳಲ್ಲಿ ಮಕ್ಕಳ ಮದುವೆ, ಮುಂಜಿವೆ ಕಾರ್ಯಕ್ರಮಗಳಿಗೆ ಯೋಜನೆ ಹಾಕಿಕೊಂಡಿರುತ್ತಾರೆ. ಅನೇಕರು ಸ್ವಂತ ಊರಿಗೆ ಹೋಗುತ್ತಾರೆ. ಕೆಲವರು ಕುಟುಂಬದೊಂದಿಗೆ ಪ್ರವಾಸಕ್ಕೆ ಮುಂಗಡ ಟಿಕೆಟ್ ಬುಕ್ ಮಾಡಿರುತ್ತಾರೆ. ಇಂಥವರಿಗೆ ಇಲಾಖೆ ಆದೇಶ ಸಮಸ್ಯೆ ಉಂಟು ಮಾಡಲಿದೆ. ಆರ್ಥಿಕ ನಷ್ಟಕ್ಕೂ ಕಾರಣವಾಗಲಿದೆ ಎಂದು ಹೇಳಿದರು. ಕೆಲ ಶಾಲೆಗಳಲ್ಲಿ ಪೂರ್ಣ ಪ್ರಮಾಣದ ಶಿಕ್ಷಕಯಿರಿಲ್ಲದ ಕಾರಣ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಈಗ ಅತಿಥಿ ಶಿಕ್ಷಕರೂ ಲಭ್ಯವಿರುವುದಿಲ್ಲ. ಹೀಗಾಗಿ ಎಲ್ಲ ವಿಷಯಗಳ ಬೋಧನೆ ಸಾಧ್ಯವಾಗುವುದಿಲ್ಲ. ಹೆಚ್ಚಿನ ವಿದ್ಯಾರ್ಥಿಗಳು ರಜೆ ಅವಧಿಯ ವಿಶೇಷ ತರಗತಿಗೆ ಹಾಜರು ಕೂಡ ಆಗುವುದಿಲ್ಲ ಎಂದು ತಿಳಿಸಿದರು. ಶಿಕ್ಷಕ ವೃತ್ತಿ ರಜೆ ಸಹಿತ ಸೇವೆಯಾಗಿದೆ. ಶಿಕ್ಷಕರು ಶೈಕ್ಷಣಿಕ ವರ್ಷದ ಪ್ರಾರಂಭದಿಂದಲೇ ಶಾಲಾ ಪೂರ್ವ ಅವಧಿ ಹಾಗೂ ನಂತರದ ಅವಧಿಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ ನಡೆಸಿಕೊಂಡು ಬಂದಿದ್ದಾರೆ. ಎಫ್‌ಎ 1 ರಿಂದ ಎಫ್‌ಎ 4, ಮೂರು ಸರಣಿ ಹಾಗೂ ಒಂದು ಪೂರ್ವ ಸಿದ್ಧತಾ ಪರೀಕ್ಷೆ ಅಚ್ಚುಕಟ್ಟಾಗಿ ನಡೆಸಿಕೊಂಡು ಬಂದಿದ್ದಾರೆ ಎಂದು ಹೇಳಿದರು.

### ಬಿಜೆಪಿ ಸಮಾವೇಶದಲ್ಲಿ ರವಿಕುಮಾರ್ ಆರೋಪ

# ಕಲಬುರಗಿ ಜಿಲ್ಲೆಯಲ್ಲಿ ಗೂಂಡಾಗಳ ಸಾಮ್ರಾಜ್ಯ: ಅಟ್ಟಹಾಸ



ಕಲಬುರಗಿಯಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶವನ್ನು ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ ಉದ್ಘಾಟಿಸಿದರು. ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ್, ಶಶೀಲ್ ನಮೋಶಿ, ಸುನೀಲ್ ವಲ್ಯಾಪುರ, ಬಿಜೆಪಿ ಜಿಲ್ಲಾಧ್ಯಕ್ಷ ಶಿವರಾಜ ಪಾಟೀಲ್ ರದ್ದೇವಡಗಿ ಮುಂತಾದವರಿದ್ದರು.

**ಕಲಬುರಗಿ, ಮೇ. 17:** ಜಿಲ್ಲೆಯಲ್ಲಿ ಪ್ರಿಯಾಂಕ್ ಖರ್ಗೆ ಜಿಲ್ಲಾ ಉಸ್ತುವಾರಿ ಸಚಿವರಾಗಿ ಬಂದಾಗಿನಿಂದಲೂ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಜಿಲ್ಲೆಯಲ್ಲಿ ಗುಂಡಾ ಸಂಸ್ಕೃತಿ ಆಳುತ್ತಿದೆ ಎಂದು ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಆರೋಪಿಸಿದ್ದಾರೆ.

ಈಶಾನ್ಯ ಪದವೀಧರರ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ್ ಪರವಾಗಿ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, ವ್ಯಾಪಾರಿಯೊಬ್ಬನಿಗೆ ಬೆತ್ತಲೆಗೊಳಿಸಿ ಕರೆಂಟ್ ಶಾಕ್ ನೀಡಿರುವುದು ಸೇರಿ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿವೆ ಎಂದರು.

ಟಿವಿ ಮತ್ತು ಪೇಪರ್ ನೋಡುತ್ತಿದ್ದರೆ ಅಸಹ್ಯವಾಗುತ್ತಿದೆ. ಇಂತಹ ಗೂಂಡಾ ಸಂಸ್ಕೃತಿ ಹೋಗಲಾಡಿಸಲು ಸರಳ, ಸಜ್ಜನಿಕೆಯ ಅಭ್ಯರ್ಥಿ ಅಮರನಾಥ ಪಾಟೀಲ್ ಅವರಿಗೆ ಪದವೀಧರರು ಜಾಣ್ಮೆಯಿಂದ ಪ್ರಥಮ ಪ್ರಾಶಸ್ತ್ಯ ಮತ ನೀಡುವ ಮೂಲಕ ಆರಿಸಿ ತರಬೇಕು ಎಂದು ಮನವಿ ಮಾಡಿದರು. ಪದವೀಧರರ ಕ್ಷೇತ್ರದಲ್ಲಿ ಹಲವಾರು ಜ್ವಲಂತ ಸಮಸ್ಯೆಗಳಿವೆ. ಹೈಸ್ಕೂಲ್ ಶಿಕ್ಷಕರಿಗೆ ರಜೆ ನೀಡದೆ ಎಸ್‌ಎಸ್‌ಎಲ್‌ಸಿ ಮರು ಪರೀಕ್ಷೆ ಹಿನ್ನೆಲೆಯಲ್ಲಿ ಮಕ್ಕಳಿಗೆ ವಿಶೇಷ ತರಗತಿ ನೀಡಲು ಸೂಚಿಸಿರುವುದು ಅವೈಜ್ಞಾನಿಕವಾಗಿದೆ. ಶಿಕ್ಷಕರ ಕೆಲಸದ ಹೊರೆ ಇಳಿಸುವ ನಿಟ್ಟಿನಲ್ಲಿ ಬರುವ ಜೂನ್ ತಿಂಗಳಲ್ಲಿ ನಡೆಯುವ ವಿಧಾನ ಪರಿಷತ್ ಅಧಿವೇಶನದಲ್ಲಿ ಧ್ವನಿ ಎತ್ತಲಾಗುವುದು ಎಂದರು. ಕಲಬುರಗಿ ವಿಶ್ವವಿದ್ಯಾಲಯ ಸೇರಿ ರಾಜ್ಯದಲ್ಲಿರುವ ಎಲ್ಲ ವಿವಿಗಳಲ್ಲಿ ಶೇ.60 ಅತಿಥಿ ಉಪನ್ಯಾಸಕರಾಗಿ ಕೆಲಸ ಮಾಡುತ್ತಿದ್ದಾರೆ. ಯುವ ವಕೀಲರಿಗೆ ನೀಡುತ್ತಿದ್ದ 4 ಸಾವಿರ ರೂ.ಪ್ರೋತ್ಸಾಹಧನ ಮತ್ತು ಹಾಲು ಉತ್ಪಾದಕರಿಗೆ ನೀಡುತ್ತಿರುವ ಪ್ರೋತ್ಸಾಹಧನ ರಾಜ್ಯ ಸರ್ಕಾರ ರದ್ದು ಮಾಡಿದೆ. ಕಾಂಗ್ರೆಸ್ ಪಕ್ಷಕ್ಕೆ ಕಣ್ಣು ಇಲ್ಲ, ಬುದ್ಧಿಯೂ ಇಲ್ಲ. ಕೇವಲ ಗ್ಯಾರಂಟಿ ಮೇಲೆ ನಡೆಯುತ್ತಿದೆ ಎಂದು ಆಪಾದಿಸಿದರು.

ಹುಬ್ಬಳ್ಳಿಯಲ್ಲಿ ಅಂಜಲಿ ಅಂಬಿಗ ಎಂಬ ಯುವತಿ ಕೊಲೆಯಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಬುದ್ಧಿವಂತ ಮತದಾರರು ಈ ಕೆಟ್ಟ ಸರ್ಕಾರದ ವಿರುದ್ಧ ಮತ ಹಾಕಬೇಕಾಗಿದೆ ಎಂದು ಮನವಿ ಮಾಡಿದರು. ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ್ ಮಾತನಾಡಿ, ನಾನು ನಿಮಗೆ ಹೊಸಬನಲ್ಲ. 2012 ರಲ್ಲಿ ಬಿಜೆಪಿಯಿಂದ ಸ್ಪರ್ಧಿಸಿ ವಿಧಾನ ಪರಿಷತ್ ಸದಸ್ಯನಾಗಿ ಆಯ್ಕೆಯಾಗಿ ಪದವೀಧರರ ಸಮಸ್ಯೆಗೆ ಪರಿಷತ್‌ನಲ್ಲಿ ಧ್ವನಿ ಎತ್ತಿರುವೆ. ನನ್ನ ಅಧಿಕಾರಕ್ಕೆ ಚ್ಯುತಿ ಬರದಂತೆ ಕೆಲಸ ಮಾಡಿದ ತೃಪ್ತಿ ನನಗಿದೆ. ಈ ಬಾರಿ ಪುನಃ ಸ್ಪರ್ಧಿಸುತ್ತಿದ್ದು, ನಿಮ್ಮ ಅಮೂಲ್ಯವಾದ ಪ್ರಾಶಸ್ತ್ಯದ ಮತ ನನಗೆ ನೀಡಬೇಕು ಎಂದು ವಿನಂತಿಸಿದರು. ಅಭ್ಯರ್ಥಿ ಅಮರನಾಥ ಪಾಟೀಲ್ ಅವರ ಚುನಾವಣಾ ಪ್ರಣಾಳಿಕೆ ಬಿಡುಗಡೆಗೊಳಿಸಲಾಯಿತು.

# ಸಾಮಾನ್ಯ ಪ್ರಯಾಣಿಕರಂತೆ ಟಿಕೆಟ್ ಪಡೆದು ಬಸ್‌ನಲ್ಲಿ ಸಂಚರಿಸಿದ ನ್ಯಾಯಾಧೀಶರು



ಬೀದರ್‌ನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳೂ ಆದ ಹಿರಿಯ ಸಿವಿಲ್ ನ್ಯಾಯಾಧೀಶ ಎಸ್.ಕೆ.ಕನಕಟ್ಟೆ ಅವರು ಸಿದ್ದೇಶ್ವರ ಮಾರ್ಗವಾಗಿ ಭಾಲ್ಕಿ ಬಸ್ ಸಂಚಾರಕ್ಕೆ ಚಾಲನೆ ನೀಡಿ ತಾವೂ ಕೂಡ ಸಾಮಾನ್ಯ ಪ್ರಯಾಣಿಕರಂತೆ ಟಿಕೆಟ್ ಪಡೆದು ಬಸ್‌ನಲ್ಲಿ ಸಂಚರಿಸಿದರು.

**ಬೀದರ್, ಮೇ. 17–** ನಗರದಿಂದ ಸಿದ್ಧೇಶ್ವರ ಮಾರ್ಗವಾಗಿ ಭಾಲ್ಕಿಗೆ ಬಸ್ ಓಡಿಸಬೇಕೆಂಬ ಗ್ರಾಮಸ್ಥರ ಬಹುದಿನಗಳ ಬೇಡಿಕೆ ಈಡೇರಿದೆ. ಹಿರಿಯ ಸಿವಿಲ್ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಸ್.ಕೆ. ಕನಕಟ್ಟೆ ಅವರು, ಬಸ್ ಸಂಚಾರಕ್ಕೆ ನಗರದಲ್ಲಿ ಚಾಲನೆ ನೀಡಿ, ಅವರೂ ಕೂಡ ಸಾಮಾನ್ಯ ಪ್ರಯಾಣಿಕರಂತೆ ಟಿಕೆಟ್ ಪಡೆದು ಸಂಚರಿಸಿದರು.

ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಬೀದರ್‌ನಿಂದ ಸಿದ್ಧೇಶ್ವರ ಮಾರ್ಗವಾಗಿ ಭಾಲ್ಕಿಗೆ ಬಸ್ ಓಡಿಸಬೇಕು ಎಂದು ಸಿದ್ಧೇಶ್ವರ ಗ್ರಾಮಸ್ಥರು ನನಗೆ ಮನವಿ ಸಲ್ಲಿಸಿದ್ದರು. ವ್ಯಾಜ್ಯ ಪೂರ್ವ ಪ್ರಕರಣ ದಾಖಲಿಸಿಕೊಂಡು, ಈ ಕುರಿತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿ ಕಾರಿ ಅವರ ಗಮನಕ್ಕೆ ತಂದಿದ್ದೆ. ಎರಡು ಗಂಟೆಗಳಲ್ಲೇ ಬೀದರ್–ಭಾಲ್ಕಿ ವಯಾ ಸಿದ್ಧೇಶ್ವರ ಹೊಸ ಬಸ್ ವ್ಯವಸ್ಥೆ ಮಾಡಿದ್ದಾರೆ' ಎಂದು ಎಸ್.ಕೆ. ಕನಕಟ್ಟೆ ತಿಳಿಸಿದರು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೀದರ್ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಫುಲೇಕರ್, ಕರ್ನಾಟಕ ಲೋಕಾಯುಕ್ತದ ಅಭಿಯೋಜಕ ಕೇಶವರಾವ್ ಶ್ರೀಮಾಳೆ, ಗಣೇಶ ಮೂಕಡೆ ಇದ್ದರು.

# ಚಲಿಸುತ್ತಿದ್ದ ರೈಲಿನಲ್ಲಿ ಕೊಲೆ; ತನಿಖೆಗೆ ನಾಲ್ಕು ವಿಶೇಷ ತಂಡಗಳ ರಚನೆ



**ಬೆಳಗಾವಿ, ಮೇ.17–** ಚಲಿಸುತ್ತಿದ್ದ ರೈಲಿನಲ್ಲಿ ಪ್ರಯಾಣಿಕನೊಬ್ಬ ಚಾಕುವಿನಿಂದ ಇರಿದು ಒಬ್ಬರನ್ನು ಕೊಲೆ ಮಾಡಿದ ಮತ್ತು ನಾಲ್ವರ ಮೇಲೆ ಹಲ್ಲೆ ನಡೆಸಿದ ಪ್ರಕರಣದ ತನಿಖೆಗಾಗಿ ರೈಲ್ವೆ ಪ್ರೊಟೆಕ್ಷನ್ ಫೋರ್ಸ್, ಗ್ರೇಟರ್ ರೈಲ್ವೆ ಪೊಲೀಸ್(ಜಿಆರ್‌ಪಿ) ನೇತೃತ್ವದಲ್ಲಿ ನಾಲ್ಕು ವಿಶೇಷ ತಂಡ ರಚಿಸಲಾಗಿದೆ ಎಂದು ರೈಲ್ವೆ ಪೊಲೀಸ್ ಡಿಐಜಿ ಎಸ್.ಡಿ.ಶರಣಪ್ಪ ಹೇಳಿದರು.

ಖಾನಾಪುರ ತಾಲ್ಲೂಕಿನಲ್ಲಿ ಗುರುವಾರ ನಡೆದ ಈ ಘಟನೆಯಲ್ಲಿ ಹಲ್ಲೆಗೆ ಒಳಗಾಗಿ, ಇಲ್ಲಿನ ಜಿಲ್ಲಾಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿರುವವರ ಆರೋಗ್ಯವನ್ನು ಶುಕ್ರವಾರ ವಿಚಾರಿಸಿದ ನಂತರ ಸುದ್ದಿಗಾರರೊಂದಿಗೆ ಪುದುಚೇರಿ–ದಾದರ್ ಎಕ್ಸ್‌ಪ್ರೆಸ್ ರೈಲಿನಲ್ಲಿ ಟಿಕೆಟ್ ಪರಿವೀಕ್ಷಕ (ಟಿಟಿಇ) ಅಶ್ರಫ್ ಕಿತ್ತೂರ ಟಿಕೆಟ್ ತಪಾಸಣೆ ಮಾಡುತ್ತಿದ್ದರು. ಆಗ ಮುಸುಕುಧಾರಿಯಾಗಿದ್ದ ಪ್ರಯಾಣಿಕ ಹಲ್ಲೆಗೆ ಮುಂದಾದ. ಆಗ ಟಿಟಿಇ ನೆರವಿಗೆ ಬಂದ ಆನ್ ಮೋಡ್ ಹೌಸ್‌ಕೀಪಿಂಗ್ ಸ್ಟಾಫ್ ದೇವರ್ಷಿ ವರ್ಮಾ(23) ಮೇಲೆಯೂ ಹಲ್ಲೆ ಮಾಡಿದ್ದು, ಅವರು ಮೃತಪಟ್ಟಿದ್ದಾರೆ. ಮೃತನ ಕುಟುಂಬಕ್ಕೆ ಪರಿಹಾರ ನೀಡುವಂತೆ ರೈಲ್ವೆ ಇಲಾಖೆಗೆ ಪತ್ರ ಬರೆದಿದ್ದೇವೆ ಎಂದು ತಿಳಿಸಿದರು. ರೈಲಿನಲ್ಲಿ ಭದ್ರತೆ ಕೊರತೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ನಿತ್ಯ 1,400 ರೈಲು ಕಾರ್ಯಾಚರಣೆ ನಡೆಸುತ್ತವೆ. ಆದರೆ, ರೈಲಿನಲ್ಲಿ ಭದ್ರತೆಗಾಗಿ ನಮ್ಮ ಬಳಿ ಇರುವುದು 830 ಸಿಬ್ಬಂದಿ ಮಾತ್ರ. ಒಂದು ರೈಲಿಗೆ ಒಬ್ಬ ಸಿಬ್ಬಂದಿ ನಿಯೋಜಿಸಲು ಆಗದ ಪರಿಸ್ಥಿತಿ ಇದೆ. ಹಾಗಾಗಿ ಅಪರಾಧಗಳ ಪ್ರಮಾಣ ಹಾಗೂ ಸೂಕ್ಷ್ಮ ಪ್ರದೇಶ ಆಧರಿಸಿ, ಆಯಾ ಮಾರ್ಗಗಳಲ್ಲಿ ಸಂಚರಿಸುವ ರೈಲುಗಳಲ್ಲಿ ಸಿಬ್ಬಂದಿ ನಿಯೋಜಿಸುತ್ತಿದ್ದೇವೆ.

### ಅಂಜಲಿ ಹಂತಕ ವಿಶ್ವ ಪೊಲೀಸರಿಗೆ ಸೆರೆ

# ರೈಲಿನಲ್ಲಿ ಮತ್ತೊಬ್ಬ ಮಹಿಳೆ ಕೊಲೆಗೆ ಯತ್ನ: ಪ್ರಯಾಣಿಕರಿಂದ ಹಲ್ಲೆ



**ಹುಬ್ಬಳ್ಳಿ, ಮೇ 17–** ಅಂಜಲಿಯನ್ನು ಕೊಲೆ ಮಾಡಿ ಪರಾರಿಯಾಗಿದ್ದ ಹಂತಕ ಮತ್ತೊಬ್ಬ ಮಹಿಳೆಯೊಬ್ಬರ ಕೊಲೆಗೆ ಯತ್ನಿಸಿ ಸಿಕ್ಕಿ ಬಿದ್ದಿದ್ದಾನೆ. ನಿನ್ನೆ ಆರೋಪಿ ವಿಶ್ವ ಅಲಿಯಾಸ್ ಗಿರೀಶ್ ದಾವಣಗೆರೆಯ ರೈಲಿನಲ್ಲಿ ಪ್ರಯಾಣಿಸುತ್ತಿದ್ದಾಗ ಮಹಿಳಾ ಪ್ರಯಾಣಿಕರೊಬ್ಬರ ಜೊತೆ ಗಲಾಟೆ ಮಾಡಿ ಅವರಿಗೆ ಚಾಕುವಿನಿಂದ ಇರಿಯಲು ಯತ್ನಿಸಿದ್ದಾನೆ. ತಕ್ಷಣ ಸಹ ಪ್ರಯಾಣಿಕರು ಆತನಿಗೆ ಹಿಗ್ಗಾಮುಗ್ಗ ಥಳಿಸಿದಾಗ ರೈಲಿನಿಂದ ಜಿಗಿದು ತಪ್ಪಿಸಿಕೊಳ್ಳುವ ಭರದಲ್ಲಿ ಹಳಿಬಳಿ ಬಿದ್ದು ಗಾಯಗೊಂಡಿದ್ದಾನೆ. ದಾವಣಗೆರೆ ರೈಲ್ವೆ ಪೊಲೀಸರು ಆತನನ್ನು ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿ, ಆತನ ಪೂರ್ವಾಪರ ವಿಚಾರಿಸುತ್ತಿದ್ದಾಗ ಈತನೇ ಹುಬ್ಬಳ್ಳಿಯಲ್ಲಿ ಯುವತಿ ಅಂಜಲಿಯನ್ನು ಕೊಲೆ ಮಾಡಿದ ಆರೋಪಿ ವಿಶ್ವ ಎಂಬುದು ಗೊತ್ತಾಗಿದೆ. ತಕ್ಷಣ ಈ ವಿಷಯವನ್ನು ರೈಲ್ವೆ ಪೊಲೀಸರು ಹುಬ್ಬಳ್ಳಿ ಪೊಲೀಸರಿಗೆ ತಿಳಿಸುತ್ತಾರೆ.

ರಾತ್ರಿಯೇ ಪೊಲೀಸರು ದಾವಣಗೆರೆಗೆ ತೆರಳಿ ಆರೋಪಿಯನ್ನು ವಶಕ್ಕೆ ಪಡೆದು ಹುಬ್ಬಳ್ಳಿಗೆ ಕರೆತಂದು ಕಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆಗೆ ದಾಖಲಿಸಿದ್ದಾರೆ.ಇಂದು ಬೆಳಗ್ಗೆ ಹುಬ್ಬಳ್ಳಿ– ಧಾರವಾಡ ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ ಅವರು ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಆರೋಪಿಯ ಸ್ಥಿತಿಯ ಬಗ್ಗೆ ವೈದ್ಯರಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಈ ಬಗ್ಗೆ ಮಾಧ್ಯಮದವರೊಂದಿಗೆ ಮಾತನಾಡಿ, ಬೆಂಡಿಗೇರಿ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿತ್ತು. ಈ ಹಿನ್ನೆಲೆಯಲ್ಲಿ ಆರೋಪಿ ಪತ್ತೆಗಾಗಿ ಎಂಟು ತಂಡವನ್ನು ರಚನೆ ಮಾಡಿದ್ದೆವು. ನಿನ್ನೆ ರೈಲ್ವೆ ಪೊಲೀಸರ ಸಹಾಯದಿಂದ ಆರೋಪಿಯನ್ನು ಬಂಧಿಸಲಾಗಿದೆ ಎಂದರು.ಆರೋಪಿ ತಲೆ ಹಾಗೂ ಬೆನ್ನಿಗೆ ಗಂಭೀರ ಗಾಯಗಳಾಗಿವೆ. ಆತ ಸದ್ಯ ಕೋಮ ಸ್ಥಿತಿಯಲ್ಲಿದ್ದಾನೆ. ರೈಲಿನಿಂದ ಏಕೆ ಕೆಳಗೆ ಬಿದ್ದ ಎಂಬುದನ್ನು ಆತನ ಹೇಳಿಕೆ ನಂತರವಷ್ಟೇ ತಿಳಿಯಬಹುದಾಗಿದೆ ಎಂದು ಅವರು ತಿಳಿಸಿದರು. ಆರೋಪಿಯನ್ನು ಇಂದು ಬೆಳಗಿನ ಜಾವ 4.30ರ ಸುಮಾರಿಗೆ ವಶಕ್ಕೆ ಪಡೆದುಕೊಳ್ಳಲಾಗಿದೆ. ಆರೋಪಿಯು ಮೈಸೂರಿನಿಂದ ಗೋವಾ, ಮಹಾರಾಷ್ಟ್ರ ಕಡೆ ಹೋಗಿ ತಲೆಮರೆಸಿಕೊಳ್ಳಲು ಯತ್ನಿಸಿದ್ದ. ಆತನ ಮೇಲೆ ನಾಲ್ಕು ಬೈಕ್ ಕಳ್ಳತನ ಪ್ರಕರಣಗಳು ದಾಖಲಾಗಿವೆ ಎಂದು ಅವರು ತಿಳಿಸಿದ್ದಾರೆ.

# ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ

**ವಿಜಯಪುರ, ಮೇ 17:** ಮುಂಜಾಗ್ರತ ಕ್ರಮಾವಗಿ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಂಡು ಡೆಂಗ್ಯೂ ರೋಗದ ನಿರ್ಮೂಲನೆಗೆ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಯಾದ ಡಾ.ಕೆ.ಡಿ. ಗುಂಡಬಾವಡಿ ಹೇಳಿದರು. ಅವರು ಶುಕ್ರವಾರ ನಗರ ಸ್ಯಾಟಲೈಟ್ ಬಸ್‌ನಿಲ್ದಾಣದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ ಸಮುದಾಯದೊಂದಿಗೆ ಸೇರಿ ಡೆಂಗಿ ಜ್ವರವನ್ನು ನಿಯಂತ್ರಿಸೋಣ ಎಂಬ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮನೆಯ ಸುತ್ತಮುತ್ತ ಸ್ವಚ್ಚತೆಯನ್ನು ಕಾಪಾಡುವುದರಿಂದ ರೋಗಗಳಿಂದ ದೂರ ಇರಬಹುದು. ವ್ಯಯಕ್ತಿಕ ಸ್ವಚ್ಚತೆಯೊಂದಿಗೆ ಪರಿಸರದ ಸ್ವಚ್ಚತೆಗೂ ಆದ್ಯತೆ ನೀಡಿ ರೋಗ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾರ್ವಜನಿಕರು ಪಣ ತೊಡಬೇಕು ಎಂದು ಕರೆ ನೀಡಿದರು. ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಯಾದ ಡಾ. ಜೈಬುನ್ನಿಸಾಬೇಗಂ ಬೀಳಗಿ ಮಾತನಾಡಿ, ಡೆಂಗ್ಯ ರೋಗವು ಈಡಿಸ್ ಈಜಿಪ್ತ ಹೆಣ್ಣು ಸೊಳ್ಳೆಯಿಂದ ಹರಡುತ್ತಿದ್ದು, ನಿಂತ ನೀರಿನಲ್ಲಿ ಈ ಸೊಳ್ಳೆಗಳು ಉತ್ಪತ್ತಿಯಾಘುತ್ತವೆ ಹಾಗಾಗಿ ಮನೆಯ ಸುತ್ತಮುತ್ತಲು ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು. ಜಾಥಾ ಕಾರ್ಯಕ್ರಮವು ನಗರದ ಸ್ಯಾಟಲೈಟ್ ಬಸ್‌ನಿಲ್ದಾಣ ಇಂದ ಆರಂಭಗೊಂಡು, ಗೋದಾವರಿ ವೃತ್ತ, ಶಾಸ್ತ್ರಿ ನಗರದ ಮುಖಾಂತರ ಮನೆ–ಮನೆಗೆ ತೆರಳಿ ಡೆಂಗ್ಯು ರೋಗ ಲಕ್ಷಣದ ಬಗ್ಗೆ ಕರಪತ್ರಗಳನ್ನು ಹಂಚಿದರು.

### ವಿಧಾನ ಪರಿಷತ್ ಈಶಾನ್ಯ ಪದವೀಧರ ಕ್ಷೇತ್ರ

# ಬಿಜೆಪಿ ಅಧಿಕೃತ ಅಭ್ಯರ್ಥಿ ಅಮರನಾಥ ಪಾಟೀಲ್ ನಾಮಪತ್ರ ಸಲ್ಲಿಕೆ



ಕಲಬುರಗಿ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ವಿಧಾನ ಪರಿಷತ್‌ಗೆ ಈಶಾನ್ಯ ಪದವಿಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಅಮರನಾಥ ಪಾಟೀಲ್ ಅವರು ನಾಮಪತ್ರ ಸಲ್ಲಿಸಿದರು. ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ, ವಿಧಾನ ಪರಿಷತ್ ಸದಸ್ಯರಾದ ಶಶಿಲ್ ನಮೋಶಿ, ಸುನೀಲ್ ವಲ್ಯಾಪುರೆ ಅವರೂ ಇದ್ದರು.

**ಕಲಬುರಗಿ, ಮೇ.17–** ವಿಧಾನ ಪರಿಷತ್ ಈಶಾನ್ಯ ಪದವೀಧರ ಕ್ಷೇತ್ರಕ್ಕೆ ಬಿಜೆಪಿ ಅಧಿಕೃತ ಅಭ್ಯರ್ಥಿಯಾಗಿ ಮಾಜಿ ಪರಿಷತ್ ಸದಸ್ಯ ಅಮರನಾಥ ಪಾಟೀಲ್ ಅವರು ಚುನಾವಣಾಧಿಕಾರಿಗಳೂ ಆದ ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರಲ್ಲಿ ನಾಮಪತ್ರ ಸಲ್ಲಿಸಿದರು. ಅವರೊಂದಿಗೆ ಪರಿಷತ್ ಸದಸ್ಯರೂ ಆದ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ನಮೋಶಿ, ಸುನೀಲ್ ವಲ್ಯಾಪುರ ಅವರು ಸಾಥ್ ನೀಡಿದರು.

ಈಶಾನ್ಯ ಪದವೀಧರ ಕ್ಷೇತ್ರ ಮೊದಲಿಂದಲೂ ಬಿಜೆಪಿ ವಶದಲ್ಲಿತ್ತು. ಮೂರು ಬಾರಿ ದಿ.ಡಾ.ಎಂ.ಆರ್. ತಂಗಾ ಅವರು ಆಯ್ಕೆಯಾಗಿದ್ದರು. ಅನಂತರ ಮನೋಹರ ಮಸ್ಕಿ ಅವರು, ನಂತರ ಅಮರನಾಥ ಪಾಟೀಲ್ ಅವರು ಆಯ್ಕೆಯಾದರು. ಸತತ ಐದು ಬಾರಿ ಗೆಲ್ಲುತ್ತಾ ಬಂದಿರುವ ಬಿಜೆಪಿ ಕಳೆದ ಚುನಾವಣೆಯಲ್ಲಿ ಶ್ರೀನಿವಾಸರೆಡ್ಡಿ ಎಂಬ ಬಳ್ಳಾರಿ ವ್ಯಕ್ತಿಗೆ ಟಿಕೆಟ್ ನೀಡಿ ಸೋಲು ಅನುಭವಿಸಿತು. ಇದೀಗ ಮತ್ತೆ ಅಮರನಾಥ ಪಾಟೀಲ್ ಅವರಿಗೆ ಟಿಕೆಟ್ ನೀಡಿದ್ದು, ಅವರಿಗೆ ಈ ಮೊದಲೇ ಸೂಚನೆ ನೀಡಿದ್ದರಿಂದ ಕಳೆದ ಹಲವು ತಿಂಗಳಿಂದ ಕ್ಷೇತ್ರದಾದ್ಯಂತ ಸಂಚರಿಸಿ, ಮತದಾರರ ನೋಂದಣಿ ಸೇರಿದಂತೆ ಪ್ರತಿಯೊಂದು ತಾಲ್ಲೂಕು ಮಟ್ಟದಲ್ಲಿ ಬಿಜೆಪಿ ಕಾರ್ಯಕರ್ತರ ಸಭೆಗಳನ್ನು ನಡೆಸುವ ಮೂಲಕ ತಂಡಗಳನ್ನು ರಚಿಸಿದ್ದರು.

ಇದೀಗ ಅವರು ನಾಮಪತ್ರ ಸಲ್ಲಿಕೆಯೊಂದಿಗೆ ಎರಡನೇ ಸುತ್ತಿನ ಪ್ರಚಾರಕ್ಕಾಗಿ ಈಶಾನ್ಯ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕಲಬುರಗಿ, ಬೀದರ್, ಯಾದಗಿರಿ, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳ ಪ್ರವಾಸ ಕೈಕೊಳ್ಳುವುದಾಗಿ ನಾಮಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ನನ್ನ ಗೆಲುವು ಖಚಿತ ಇದರಲ್ಲಿ ಅನುಮಾನವೇ ಇಲ್ಲ ಎಂದು ತಿಳಿಸಿದರು.

### ಬಂಡಾಯ ಅಭ್ಯರ್ಥಿಯೂ ನಾಮಪತ್ರ

ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ್ ಅವರು ನಾಮಪತ್ರ ಸಲ್ಲಿಸಿ ಹೋದ ಕೆಲವೇ ಸಮಯದಲ್ಲಿ ಬಿಜೆಪಿ ಬಂಡಾಯ ಅಭ್ಯರ್ಥಿ ಜಿಪಂ ಮಾಜಿ ಉಪಾಧ್ಯಕ್ಷ ಸುರೇಶ ಸಜ್ಜನ ಅವರೂ ತಮ್ಮ ನಾಮಪ್ರತ ಸಲ್ಲಿಸಿದರು. ತಮಗೆ ಮೊದಲೇ ಟಿಕೆಟ್ ನೀಡುವ ಬಗ್ಗೆ ಸೂಚನೆ ನೀಡಲಾಗಿತ್ತು. ಅನಂತರ ನನ್ನ ಬದಲಾಗಿ ಅಮರನಾಥ್ ಪಾಟೀಲ್ ಅವರಿಗೆ ಟಿಕೆಟ್ ನೀಡಲಾಗಿದೆ. ನಾನು ಮೊದಲೇ ಸಿದ್ಧತೆ ಮಾಡಿಕೊಂಡಿದ್ದರಿಂದ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ ಎಂದು ತಿಳಿಸಿದರು.

## ಕಲಬುರಗಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ

# ಬೆಳೆಪರಿಹಾರ ಸಾಲಕ್ಕೆ ಹೊಂದಾಣಿಕೆ ಬೇಡ: ಬ್ಯಾಂಕುಗಳಿಗೆ ಡಿ.ಸಿ ಎಚ್ಚರಿಕೆ



ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬರಗಾಲ ನಿರ್ವಹಣೆ ಮತ್ತು ಪ್ರಸಕ್ತ ಸಾಲಿನ ಮುಂಗಾರು ಪೂರ್ವ ಸಿದ್ಧತೆ ಕುರಿತು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ಮಾತನಾಡಿದರು.

**ಕಲಬುರಗಿ, ಮೇ.17–** ಬರಗಾಲ ಘೋಷಣೆ ಪರಿಣಾಮ ರಾಜ್ಯ ಸರ್ಕಾರ ಎಸ್.ಡಿ.ಆರ್.ಎಫ್.–ಎನ್.ಡಿ.ಆರ್.ಎಫ್. ಮಾರ್ಗಸೂಚಿಯಂತೆ ರೈತರಿಗೆ ಬ್ಯಾಂಕ್ ಖಾತೆಗೆ ಜಮೆ ಮಾಡಿದೆ. ಈ ಬೆಳೆ ಪರಿಹಾರ ಹಣವನ್ನು ಕೆಲ ಬ್ಯಾಂಕ್ ಅಧಿಕಾರಿಗಳು ಅದನ್ನು ಸಾಲ ವಾಪಸಾತಿಗೆ, ಹಿಂಬಾಕಿ ಪಾವತಿಗೆ ಬಳಕೆ ಮಾಡುತ್ತಿದ್ದಾರೆ ಎಂಬ ದೂರು ಬರುತ್ತಿದ್ದು, ಯಾವುದೇ ಕಾರಣಕ್ಕೂ ಬ್ಯಾಂಕ್ ಅಧಿಕಾರಿಗಳು ಈ ಹಣ ಸಾಲಕ್ಕೆ, ಬಾಕಿಗೆ ಹೊಂದಾಣಿಕೆ ಮಾಡುವಂತಿಲ್ಲ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಬ್ಯಾಂಕ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬರಗಾಲ ನಿರ್ವಹಣೆ ಮತ್ತು ಪ್ರಸಕ್ತ ಸಾಲಿನ ಮುಂಗಾರು ಪೂರ್ವ ಸಿದ್ಧತೆ ಕುರಿತು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಈ ಬಗ್ಗೆ ಹಲವಾರು ರೈತರು ನನಗೆ ಕರೆ ಮಾಡಿ ದೂರಿದ್ದಾರೆ. ಸರ್ಕಾರದ ನಿರ್ದೇಶನದಂತೆ ಬೆಳೆ ಪರಿಹಾರ ಹಣ ಯಾವುದೇ ಸಾಲ, ಬಾಕಿಗೆ ಬಳಸುವಂತಿಲ್ಲ. ಅದು ರೈತರಿಗೆ ನೇರವಾಗಿ ತಲುಪಬೇಕು ಎಂದರು.

ಈ ಸಂಬಂಧ ಈಗಾಗಲೇ ಲೀಡ್ ಬ್ಯಾಂಕ್ ಮ್ಯಾನೇಜರ್ ಅವರಿಗೆ ಲಿಖಿತ ನಿರ್ದೇಶನ ಸಹ ನೀಡಲಾಗಿದೆ. ಇದನ್ನು ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳು ತಪ್ಪದೆ ಪಾಲಿಸಬೇಕು. ಯಾವುದೇ ಬ್ಯಾಂಕ್ ಪರಿಹಾರದ ಹಣ ಸಾಲಕ್ಕೆ ಹೊಂದಿಸಿದಲ್ಲಿ ಕೂಡಲೆ ಅದನ್ನು ರೈತರಿಗೆ ವಾಪಸ್ ಹಿಂದಿರುಗಿಸಬೇಕು. ಇಲ್ಲದಿದ್ದಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿದ್ದ ಲೀಡ್ ಬ್ಯಾಂಕ್ ಮ್ಯಾನೇಜರ್ ಸದಾಶಿವ ರಾತ್ರಿಕರ್ ಅವರಿಗೆ ನಿರ್ದೇಶನ ನೀಡಿದರು.

ಕಳೆದ ವರ್ಷ ಬರಗಾಲ ಹಿನ್ನೆಲೆಯಲ್ಲಿ ಇದೂವರೆಗೆ 2 ಕಂತುಗಳಲ್ಲಿ ಜಿಲ್ಲೆಯ 2,82,010 ರೈತರಿಗೆ 330.53 ಕೋಟಿ ರೂ. ಪರಿಹಾರ ಹಣ ಜಮೆ ಮಾಡಲಾಗಿದೆ. ಈ ಮಧ್ಯೆ ಇನ್ನೂ ಕೆಲ ರೈತರಿಗೆ ಆಧಾರ್ ಸೀಡಿಂಗ್, ಕೆ.ವೈ.ಸಿ., ಎಫ್.ಐ.ಡಿ. ನೊಂದಣಿ ಇಲ್ಲದ ಕಾರಣ ಬರಗಾಲ ಬೆಳೆ ಪರಿಹಾರ ಹಣ ಜಮೆಯಾಗಿಲ್ಲ. ಇಂತಹ ರೈತರ ಆಧಾರ್ ಸೀಡಿಂಗ್, ಎಫ್.ಐ.ಡಿ. ನೊಂದಣಿ ಕಾರ್ಯ ಬರುವ ಶನಿವಾರದೊಳಗೆ ಮುಗಿಸಬೇಕು. ತಹಶೀಲ್ದಾರರು, ಪಿ.ಡಿ.ಓ, ಕೃಷಿ–ತೋಟಗಾರಿಕೆ ಅಧಿಕಾರಿಗಳು ಇದನ್ನು ಪ್ರಥಮಾದ್ಯತೆ ಮೇರೆಗೆ ಮಾಡಬೇಕೆಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ನಿರ್ದೇಶನ ನೀಡಿದರು.

ಶಿಸ್ತಿನ ಕ್ರಮದ ಎಚ್ಚರಿಕೆ: ಕಲಬುರಗಿ ನಗರಕ್ಕೆ ಶುದ್ಧ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ ಎಂಬ ದೂರು ದಿನನಿತ್ಯ ಕೇಳಿಬರುತ್ತಿದೆ. ಪಾಲಿಕೆ ಅಧಿಕಾರಿಗಳು ಇದರ ಹೆಚ್ಚು ಗಮನಹರಿಸಬೇಕು. ನಿಯಮಿತವಾಗಿ ನೀರು ಗುಣಮಟ್ಟದ ಬಗ್ಗೆ ತಪಾಸಣೆ ಮಾಡಿಸಬೇಕು. ಸಾರ್ವಜನಿಕರಿಗೆ ಮುಂಚಿತವಾಗಿ ಸಮಯ ತಿಳಿಸಿ ನೀರು ಬಿಡಬೇಕು. ನಗರದ 55 ವಾರ್ಡುಗಳ ಕೊನೆ ಮನೆಗೂ ನೀರು ಪೂರೈಕೆಯಾಗಬೇಕು. ಕಲುಷಿತ ನೀರು ಸೇವನೆಯಿಂದ ಯಾವುದೇ ಅವಘಡ ಸಂಭವಿಸಿದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರವಾಗಿ ಹೊಣೆಗಾರರನ್ನಾಗಿ ಮಾಡಿ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಪಾಲಿಕೆ ಅಧಿಕಾರಿಗಳಿಗೆ ಡಿ.ಸಿ. ಸೂಚನೆ ನೀಡಿದರು.

ಆರ್.ಪಿ.ಜಾಧವ ಮಾತನಾಡಿ 5 ದಿನಕ್ಕೊಮ್ಮೆ ನಗರದ ವಾಸಿಗಳಿಗೆ ಸರಡಗಿ ಬ್ಯಾರೇಜಿನಿಂದ ನೀರು ಪೂರೈಸಲಾಗುತ್ತಿದೆ. ಜೂನ್ 5ರ ವರೆಗೆ ನೀರು ಸರಬರಾಜಿಗೆ ಶೇಖರಣೆ ಇದೆ. ಶೆಡ್ಯೂಲ್ ಪ್ರಕಾರದಲ್ಲಿ ನೀರು ಬಿಡದಿದ್ದಾಗ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. ಒಟ್ಟಾರೆ 40 ಟ್ಯಾಂಕರ್‌ಗಳು ನೀರು ಪೂರೈಸುತ್ತಿವೆ ಎಂದರು.

# ವಿಶ್ವ ರಕ್ತದ ಒತ್ತಡ ದಿನಾಚರಣೆ ಪ್ರಯುಕ್ತ ಉಚಿತ ಆರೋಗ್ಯ ತಪಾಸಣಾ ಶಿಬಿರ




**ಬಳ್ಳಾರಿ, ಮೇ.17–** ಸಮುದಾಯ ಆರೋಗ್ಯ ಕೇಂದ್ರ ರೂಪನ ಗುಡಿ ವ್ಯಾಪ್ತಿಯಲ್ಲಿ ಬರುವ ಇಬ್ರಾಹಿಂಪುರ ಗ್ರಾಮದಲ್ಲಿ ಶುಕ್ರವಾರ ವಿಶ್ವ ರಕ್ತದ ಒತ್ತಡ ದಿನಾಚರಣೆ ಕಾರ್ಯಕ್ರಮದ ಪ್ರಯುಕ್ತ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಗಳಾಗಿ ಡಾ. ಮರಿಯಾಂಬಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಬಳ್ಳಾರಿ, ಡಾ. ಜಬಿನ್‌ತಾಜ್ ಜಿಲ್ಲಾ ಎನ್. ಸಿ. ಡಿ ಸಂಯೋಜಕರು, ಹಾಗೂ ಶ್ರೀಮತಿ ಡಾ. ಚಿತ್ರಾ ವರಣೆಕರ್ ಆಡಳಿತ ವೈದ್ಯಧಿಕಾರಿಗಳು ಸ. ಆ. ಕೇಂದ್ರ ರೂಪನಗುಡಿ. ತಿಪ್ಪೇಸ್ವಾಮಿ ಆಯುಷ್ ವೈದ್ಯಧಿಕಾರಿಗಳು ತಾರಾನಾಥ ಆಯುರ್ವೇಧೀಕ್ ಆಸ್ಪತ್ರೆ ಬಳ್ಳಾರಿ. ಶ್ರೀಮತಿ ಡಾ. ಪ್ರಿಯಾಂಕಾ ರಡ್ಡಿ ದಂತ ವೈದ್ಯಧಿಕಾರಿಗಳು,ಹಾಗೂ ಶಂಕರಬಂಡೆ ಗ್ರಾಮ ಪಂಚಾಯಿತಿ ಅಧ್ಯಕ್ಷರು ಅಕ್ಕಮಹಾದೇವಿ ಯವರು ಹಾಗೂ ಶ್ರೀ ಸಣ್ಣ ದುರುಗಪ್ಪ ಕಾರ್ಯಕ್ರಮ ಸಂಯೋಜಕರು / ನಸಿರ್ಂಗ್ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಬ್ರಿಮ್ಸ್ ನಸಿರ್ಂಗ್ ಕಾಲೇಜಿನಲ್ಲಿ ವಿಶ್ವ ಶುಶ್ರೂಷಕರ ದಿನಾಚರಣೆ



ಬೀದರ್‌ನ ಬ್ರಿಮ್ಸ್ ಆವರಣದಲ್ಲಿರುವ ಬ್ರಿಮ್ಸ್ ನರ್ಸಿಂಗ್ ಕಾಲೇಜಿನಲ್ಲಿ ವಿಶ್ವ ಶುಶ್ರೂಕರ ದಿನಾಚರಣೆಯನ್ನು ಬ್ರಿಮ್ಸ್ ನಿರ್ದೇಶಕ ಡಾ.ಶಿವಕುಮಾರ ಶೆಟಕಾರ ಉದ್ಘಾಟಿಸಿದರು.

**ಬೀದರ್, ಮೇ. 17–** ಇಲ್ಲಿನ ಬ್ರಿಮ್ಸ್ ಆವರಣದಲ್ಲಿರುವ ಬ್ರಿಮ್ಸ್ ನಸಿರ್ಂಗ್ ಕಾಲೇಜಿನಲ್ಲಿ ವಿಶ್ವ ಶುಶ್ರೂಷಕರ ದಿನ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಬ್ರಿಮ್ಸ್ ನಿರ್ದೇಶಕ ಡಾ. ಶಿವಕುಮಾರ ಶೆಟಕಾರ್ ಮಾತನಾಡಿ,'ಶುಶ್ರೂಷಾ ಅಧಿಕಾರಿಗಳ ಸೇವೆ ಬಹಳ ಶ್ರೇಷ್ಠವಾದುದು.

ಕೋವಿಡ್ ವೇಳೆ ಅಧಿಕಾರಿಗಳು ಜೀವದ ಹಂಗು ತೊರೆದು ಸೇವೆ ಸಲ್ಲಿಸಿದ್ದರು. ಜನರ ಪ್ರಾಣ ರಕ್ಷಿಸಿದ್ದರು ಎಂದು ಅವರ ಸೇವೆ ಶ್ಲಾಘಿಸಿದರು.

ರಾಜ್ಯದ ಎಲ್ಲ ಸರ್ಕಾರಿ ನಸಿರ್ಂಗ್ ಕಾಲೇಜುಗಳಲ್ಲಿ ಫ್ಲಾರೆನ್ಸ್ ನೈಟಿಂಗೇಲ್ ಅವರ ಮೂರ್ತಿ ಸ್ಥಾಪನೆಯಾಗಬೇಕು. ರಾಜ್ಯದಲ್ಲೇ ಸದ್ಯ ಬೀದರ್‌ನ ನಸಿರ್ಂಗ್ ಕಾಲೇಜಿನಲ್ಲಿ ಮಾತ್ರ ಫ್ಲಾರೆನ್ಸ್ ನೈಟಿಂಗೇಲ್ ಅವರ ಮೂರ್ತಿ ಇದೆ. ಫ್ಲಾರೆನ್ಸ್ ನೈಟಿಂಗೇಲ್ ಮಾನವೀಯ ಸೇವೆ ಇತರರಿಗೆ ಪ್ರೇರಣೆ ಆಗುವ ದಿಸೆಯಲ್ಲಿ ಎಲ್ಲ ಕಾಲೇಜುಗಳ ಆವರಣದಲ್ಲಿ ಅವರ ಮೂರ್ತಿ ಸ್ಥಾಪಿಸುವ ಅವಶ್ಯಕತೆ ಇದೆ ಎಂದು ಶುಶ್ರೂಷಾ ಅಧಿಕಾರಿಗಳ ಸಂಘದ ರಾಜ್ಯ ಅಧ್ಯಕ್ಷ ರಾಜಕುಮಾರ ಮಾಳಗೆ ಅಭಿಪ್ರಾಯಪಟ್ಟರು.

ಫ್ಲಾರೆನ್ಸ್ ನೈಟಿಂಗೇಲ್ ತಮ್ಮ ಸೇವೆಯ ಮೂಲಕ ವಿಶ್ವದಲ್ಲಿ ಹೆಸರು ಮಾಡಿದ್ದರು. ಶುಶ್ರೂಷಾ ಅಧಿಕಾರಿಗಳು ಅವರ ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಮಹೇಶ ಬಿರಾದಾರ ತಿಳಿಸಿದರು.

ಬ್ರಿಮ್ಸ್ ಆಸ್ಪತ್ರೆ ನಸಿರ್ಂಗ್ ಸೂಪರಿಟೆಂಡೆಂಟ್ ಶಿವಯೋಗಿ ಬಾಲಿ, ರಾಜ್ಯ ಶುಶ್ರೂಷಾ ಅಧಿಕಾರಿಗಳ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಾಣಿಕಾ ಚಂದನ್, ಅಲೀಮ್, ಪ್ರಕಾಶ ಮಹಿಮಾಕರ್ ಹಾಗೂ ಸುಧಾಕರ ಹಾಜರಿದ್ದರು.

# ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸುರೇಶ ಸಜ್ಜನ್ ನಾಮಪತ್ರ ಸಲ್ಲಿಕೆ



ಕಲಬುರಗಿಯಲ್ಲಿ ಬಿಜೆಪಿ ಬಂಡಾಯ ಅಭ್ಯರ್ಥಿ ಸುರೇಶ ಸಜ್ಜನ್ ಅವರು ತಮ್ಮ ಬೆಂಬಲಿಗರೊಂದಿಗೆ ಆಗಮಿಸಿ ಈಶಾನ್ಯ ಪದವೀಧರ ಕ್ಷೇತ್ರದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು.

**ಕಲಬುರಗಿ, ಮೇ.17–** ಅತ್ತ ನೈಋತ್ಯ ಶಿಕ್ಷಕರ ಕ್ಷೇತ್ರ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿ ಮತ್ತು ಜೆಡಿಎಸ್‌ನಲ್ಲಿ ಬಂಡಾಯ ಭುಗಿಲೆದ್ದು ಆಕಾಂಕ್ಷಿಗಳು ಪಕ್ಷೇತರರಾಗಿ ಕಣಕ್ಕಿಳಿದಿರುವ ಬೆನ್ನಲ್ಲೇ ಇತ್ತ ಈಶಾನ್ಯ ಪದವೀಧರರ ಕ್ಷೇತ್ರದಲ್ಲೂ ಬಿಜೆಪಿಗೆ ಬಂಡಾಯ ಬಿಸಿ ತಟ್ಟಿದೆ.

ಜೂನ್ 3ರಂದು ನಡೆಯುವ ಮೇಲ್ಮನೆ ಚುನಾವಣೆಗೆ ಸಜ್ಜಾಗಿರುವ ಬಿಜೆಪಿಗೆ ಆರಂಭದಲ್ಲೇ ಬಂಡಾಯದ ಬಿಸಿ ತಟ್ಟಿದೆ. ಈಶಾನ್ಯ ಪದವೀಧರರ ಕ್ಷೇತ್ರದಿಂದ ಬಿಜೆಪಿ ಟಿಕೆಟ್‌ನಿಂದ ವಂಚಿತಗೊಂಡ ಡಾ. ಸುರೇಶ ಸಜ್ಜನ್ ಅವರು ಪಕ್ಷೇತರ ಅಭ್ಯರ್ಥಿ ಯಾಗಿ ಗುರುವಾರ ನಾಮಪತ್ರ ಸಲ್ಲಿಸುವ ಮೂಲಕ ಪಕ್ಷದ ವಿರುದ್ಧವೇ ತಿರುಗಿಬಿದ್ದು ಸೆಣಸಾಟಕ್ಕೆ ನಿಂತಿದ್ದಾರೆ. ಪದವೀಧರ ಮತಕ್ಷೇತ್ರದ ವಿಧಾನ ಪರಿಷತ್ ಸ್ಥಾನಕ್ಕೆ ಬಿಜೆಪಿಯಿಂದ ಟಿಕೆಟ್ ಆಕಾಂಕ್ಷಿಯಾಗಿದ್ದ ಸುರೇಶ ಸಜ್ಜನ್‌ಗೆ ಬಿಜೆಪಿಯ ಟಿಕೆಟ್ ಕೈತಪ್ಪಿದೆ. ಈ ಕ್ಷೇತ್ರಕ್ಕೆ ಅಮರನಾಥ ಪಾಟೀಲ್ ಬಿಜೆಪಿ ಅಭ್ಯರ್ಥಿಯಾಗಿ ಆಯ್ಕೆಯಾಗಿ ರುವ ಹಿನ್ನೆಲೆಯಲ್ಲಿ ಸಜ್ಜನ್ ಹಾಗೂ ಅವರ ಅಭಿಮಾನಿಗಳು ಅಸಮಾಧಾನಗೊಂಡಿದ್ದಾರಲ್ಲದೆ ಸಜ್ಜನ್ ಅವರಿಗೆ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸುವಂತೆ ಒತ್ತಡದ ಹಾಕಿದ್ದರಿಂದ ಅಭಿಮಾನಿಗಳ ಒತ್ತಾಯಕ್ಕೆ ಮಣಿದು ಸಜ್ಜನ್ ನಾಮಪತ್ರ ಸಲ್ಲಿಸಿದ್ದಾರೆ.

ಪದವೀಧರರ ಕ್ಷೇತ್ರದಿಂದ ಬಿಜೆಪಿಯ ಟಿಕೆಟ್ ಆಕಾಂಕ್ಷಿಯಾಗಿದ್ದ ಸಜ್ಜನ್ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಉಪಾಧ್ಯಕ್ಷ ನರಸಿಂಹ ನಾಯಕ ಸೇರಿ ಪಕ್ಷದ ನಾಯಕರಿಗೆ 6 ತಿಂಗಳಿಂದ ತಾವು ಈಶಾನ್ಯ ಮತ ಕ್ಷೇತ್ರದಲ್ಲಿ ಬರುವ ಎಲ್ಲಾ ಜಿಲ್ಲೆಗಳ ಪದವೀಧರರನ್ನು ಭೇಟಿ ಯಾಗಿದ್ದಲ್ಲದೇ ತಮ್ಮ ಮುಖಂಡರೊಂದಿಗೆ ಆರು ಜಿಲ್ಲೆಗಳ ಪ್ರತಿಯೊಂದು ತಾಲೂಕಿಗೆ ಭೇಟಿ ನೀಡಿ ಪದವೀಧರರನ್ನು ಮನವೊಲಿಸಿ 50 ಸಾವಿರಕ್ಕೂ ಹೆಚ್ಚು ಪದವೀಧರರ ಹೆಸರು ನೋಂದಣಿ ಮಾಡಿಸಿದ್ದರು. ಕೆಲ ನಾಯಕರು ಈ ಬಾರಿ ಚುನಾವಣೆಗೆ ಟಿಕೆಟ್ ನೀಡುವ ಭರವಸೆ ನೀಡಿದ್ದರು ಎನ್ನಲಾಗಿದೆ. ಇದೀಗ ಅಮರನಾಥ ಪಾಟೀಲ್‌ಗೆ ಟಿಕೆಟ್ ನೀಡಿರುವುದರಿಂದ ಸಜ್ಜನ್ ಅಭಿಮಾನಿಗಳು ಅಸಮಾಧಾನ ಗೊಂಡು ನೀವು ಬಂಡಾಯವಾಗಿ ಸ್ಪರ್ಧಿಸಿ ನಿಮ್ಮ ಜೊತೆಗಿದ್ದೇವೆ ಎಂದು ಅಭಯ ನೀಡಿರುವುದರಿಂದ ಸಜ್ಜನ್ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ಮೂಲಕ ಪಕ್ಷಕ್ಕೆ ಬಿಸಿ ಮುಟ್ಟಿಸಿದ್ದಾರೆ.

# ಅಂಜಲಿಯನ್ನು ಬರ್ಬರವಾಗಿ ಹತ್ಯೆಗೈದ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಲು ಆಗ್ರಹ



**ಬಳ್ಳಾರಿ, ಮೇ.17–** ಹುಬ್ಬಳ್ಳಿಯಲ್ಲಿ ನಡೆದ ಅಂಜಲಿ ಅಂಬಿಗೇರ್ ಬರ್ಬರ ಹತ್ಯೆಯ ಆರೋಪಿಗೆ ಕಠಿಣ ಶಿಕ್ಷೆ ವಿಧಿಸಬೇಕು ಹಾಗೂ ಮೃತಳ ಕುಟುಂಬಕ್ಕೆ ಆರ್ಥಿಕ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ ಜಿಲ್ಲಾಧಿಕಾರಿಗಳ ಕಛೇರಿಗೆ ಆಗಮಿಸಿದ ವಿಜಯನಗರ ಜಿಲ್ಲೆ ಗಂಗಾಮತ ಸಮಾಜದ ಮುಖಂಡರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸಂಘದ ಗೌರವಾಧ್ಯಕ್ಷರಾದ ವೈ.ಯಮುನೇಶ್ ಮಾತನಾಡಿ ವಿದ್ಯಾರ್ಥಿನಿ ನೇಹಾ ಹಿರೇಮಠ್ ಹತ್ಯೆ ಪ್ರಕರಣದ ನೆನಪು ಮಾಸುವ ಮುನ್ನವೇ ಪ್ರೀತಿ ನಿರಾಕರಣೆ ಕಾರಣಕ್ಕೆ ಹುಬ್ಬಳ್ಳಿಯಲ್ಲಿ ಮತ್ತೊಬ್ಬ ಯುವತಿಯ ನೆತ್ತರ ಹರಿದಿರುವುದು ಇಡೀ ರಾಜ್ಯವೇ ಬೆಚ್ಚಿ ಬೀಳುವಂತಾಗಿದೆ.

ಗಿರಿಶ್ ಸಾವಂತ್ ಎಂಬ ಯುವಕ ಅಂಜಲಿ ಅಂಬಿಗೇರಾ ಎಂಬ ಯುವತಿಯನ್ನು ಬೆಳ್ಳಂಬೆಳಿಗ್ಗೆ ಆಕೆಯ ಮನೆಯಲಿ ಹತ್ಯೆ ಮಾಡಿದ್ದಾನೆ. ಅಂಜಲಿಯನ್ನು ಕೊಲೆ ಮಾಡುವುದಾಗಿ ವಿಶ್ವನಾಥನಿಂದ ಬೆದರಿಕೆ ಬಂದ ಬಗ್ಗೆ ಕುಟುಂಬದವರು ಪೊಲೀಸರ ಗಮನಕ್ಕೆ ತಂದಾಗಲೂ ಇದೊಂದು ಸಾಮಾನ್ಯ ಪ್ರಕರಣ ಎನ್ನುವಂತೆ ಪೊಲೀಸ್ ಅಧಿಕಾರಿಗಳು ನಿರ್ಲಕ್ಷ ಮಾಡಿರುವುದು ಮೇಲ್ನೋಟಕ್ಕೆ ಎದ್ದು ಕಾಣುತ್ತದೆ. ಪೊಲೀಸರು ಎಚ್ಚೆತ್ತು ಆರೋಪಿಯನ್ನು ಪತ್ತೆ ಹಚ್ಚಿ ಜೈಲುಪಾರು ಮಾಡಿದ್ದರೆ ಈ ಕೃತ್ಯ ನಡೆಯುತ್ತಿರಲಿಲ್ಲ.

ನಂತರ ಜಿಲ್ಲಾ ಸಂಘದ ಅಧ್ಯಕ್ಷ ಅಂಬಾಡಿ ನಾಗರಾಜ್ ಮಾತನಾಡಿ ನೇಹಾ ಹಿರೇಮಠ ಹತ್ಯೆಯಾದಾಗ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ನಾಯಕರು ಮೃತಳ ಮನೆಗೆ ತೆರಳಿ ಪೋಷಕರಿಗೆ ಸಾಂತ್ವನ ಹೇಳಿ ದೈರ್ಯ ತುಂಬಿದರು ಆದರೆ ಅಂಜಲಿಯ ಹತ್ಯೆಯ ನಂತರ ಯಾವೊಬ್ಬ ಪಕ್ಷದ ಮುಖಂಡರು ಆಕೆಯ ಮನೆಗೆ ಹೋಗದಿರುವುದು ಹಿಂದುಳಿದ ಸಣ್ಣಪುಟ್ಟ ಜಾತಿಗಳ ಬಗ್ಗೆ ಅನಾದರ ಹಾಗೂ ತಾರತಮ್ಯಕ್ಕೆ ಸಾಕ್ಷಿಯಾಗಿದೆ. ಮುಗ್ದ ಜನರು ಹತ್ಯೆಯಾದಾಗ ಆರೋಪಿಗಳಿಗೆ ನಿರ್ಧಾಕ್ಷಣ್ಯವಾಗಿ ಶಿಕ್ಷೆ ವಿಧಿಸಿ ಜಾತಿ ಧರ್ಮದ ಹಂಗಿಲ್ಲದೇ ಎಲ್ಲರನ್ನು ಸಮಾನವಾಗಿ ಕಂಡಾಗ ಮಾತ್ರ ನೆಲದ ಮೇಲಿನ ಕಾನೂನಿಗೆ ಗೌರವ ನೀಡಿದಂತಾಗುತ್ತದೆ ಎಂದರು.

# ನರೇಗಾ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಪಂಚಾಯತ್ ಸಿಇಒ ಭೇಟಿ; ಪರಿಶೀಲನೆ



**ಬಳ್ಳಾರಿ,ಮೇ.17–** ಕುರುಗೋಡು ತಾಲ್ಲೂಕಿನ ವಿವಿಧ ಗ್ರಾಮಗಳ ಗ್ರಾಮ ಪಂಚಾಯಿತಿ ಗಳಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನ ಮಾಡಿದ ಕಾಮಗಾರಿ ಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಶುಕ್ರವಾರ ಭೇಟಿ ನೀಡಿ ವೀಕ್ಷಣೆ ಮಾಡಿದರು.ಕುರುಗೋಡು ತಾಲ್ಲೂಕಿನ ದಮ್ಮೂರು ಗ್ರಾಮದ ವಿ.ಟಿ. ಕ್ಯಾಂಟಿನ್‌ನಲ್ಲಿ ಕಾಲುವೆ ಹೂಳೆತ್ತುವ ಕಾಮಗಾರಿ ಪರಿಶೀಲಿಸಿದರು.

# ಹದಗೆಟ್ಟ ಕಾನೂನು ವ್ಯವಸ್ಥೆಗೆ ಆಕ್ರೋಶ: ನೇಹಾ, ಅಂಜಲಿ ಹತ್ಯೆಗೆ ಭುಗಿಲೆದ್ದ ಪ್ರತಿಭಟನೆ

## ಸ್ವಾಮೀಜಿಗಳ ಸಾಂತ್ವನ

**ಇಲ್ಲಿನ ವೀರಾಪುರ ಓಣಿಯಲ್ಲಿರುವ ಅಂಜಲಿ ಅಂಬಿಗೇರ ಅವರ ನಿವಾಸಕ್ಕೆ ಮೂರುಸಾವಿರ ಮಠದ ಜಗದ್ಗುರು ಡಾ.ಗುರುಸಿದ್ಧ ರಾಜ ಯೋಗೀಂದ್ರ ಮಹಾಸ್ವಾಮೀಜಿ, ಶಿರಹಟ್ಟಿ ಫಕ್ಕೀರೇಶ್ವರ ಮಠದ ಫಕೀರ ದಿಂಗಾಲೇಶ್ವರ ಸ್ವಾಮೀಜಿ, ಹಾವೇರಿ ಜಿಲ್ಲೆಯ ಅಂಬಿಗರ ಚೌಡಯ್ಯ ಪೀಠದ ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ, ರುದ್ರಾಕ್ಷಿಮಠದ ಬಸವಲಿಂಗ ಸ್ವಾಮೀಜಿ, ಬಿಜಕಲ್ ವಿರಕ್ತಮಠದ ಶಿವಲಿಂಗ ಮಹಾ ಸ್ವಾಮೀಜಿ ಹಾಗೂ ಶಾಸಕ ಮಹೇಶ ಟೆಂಗಿನಕಾಯಿ ತೆರಳಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು**




ಹುಬ್ಬಳ್ಳಿಯಲ್ಲಿ ಅಂಜಲಿಯನ್ನು ಹತ್ಯೆಮಾಡಿದ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಶಾಸಕ ಮಹೇಶ ಟೆಂಗಿನಕಾಯಿ ನೇತೃತ್ವದಲ್ಲಿ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಿದರು.

**ಹುಬ್ಬಳ್ಳಿ, ಮೇ.17–** ಪ್ರೀತಿ ನಿರಾಕರಿಸಿದ ಹಿನ್ನೆಲೆಯಲ್ಲಿ ನಡೆದ ಅಂಜಲಿ ಅಂಬಿಗೇರ ಹತ್ಯೆ ಪ್ರಕರಣ ಖಂಡಿಸಿ ನಗರದಲ್ಲಿ ಬಿಜೆಪಿ, ಎಬಿವಿಪಿ, ಕರ್ನಾಟಕ ರಾಜ್ಯ ಭೋವಿ(ವಡ್ಡರ) ಮಹಾಸಭಾ ಸೇರಿದಂತೆ ವಿವಿಧ ಸಂಘಟನೆ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಇದರ ಜೊತೆಯಲ್ಲಿ ಹುಬ್ಬಳ್ಳಿ ರಕ್ಷಿಸಿ, ಕೊಲೆಗಡುಕರಿಗೆ ಶಿಕ್ಷೆ ಕೊಡಿಸಿ ಎಂಬ ಅಭಿಯಾನ ಕೂಡ ಜನರಿಂದ ಆರಂಭವಾಗಿದೆ.

ಕಾನೂನು ಸುವ್ಯವಸ್ಥೆಯ ವೈಫಲ್ಯದ ವಿರುದ್ಧ ನಗರದ ವೀರಾಪುರ ಓಣಿಯ ಕರಿಯಮ್ಮ ದೇವಿ ದೇವಸ್ಥಾನದಿಂದ ಹುಬ್ಬಳ್ಳಿ–ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಶಹರ ಪೊಲೀಸ್ ಠಾಣೆ ಎದುರು ಶಾಸಕ ಮಹೇಶ ಟೆಂಗಿನಕಾಯಿ ನೇತೃತ್ವದಲ್ಲಿ ಕಾರ್ಯಕರ್ತರು ರಸ್ತೆ ತಡೆ ನಡೆಸಿ ಪೊಲೀಸ್ ಆಯುಕ್ತರಿಗೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ಮಹಿಳೆಯರಿಗೆ ರಕ್ಷಣೆ ಇಲ್ಲದಾಗಿದೆ. ಕಾಂಗ್ರೆಸ್ ಸರಕಾರ ಬಂದ ಮೇಲೆ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ನೇಹಾ ಹಿರೇಮಠ ಹತ್ಯೆ ಮಾಸುವ ಮುನ್ನವೇ ಅಂಜಲಿ ಅಂಬಿಗೇರ ಕೊಲೆಯಾಗಿ ರುವುದು ನಗರದ ಜನರನ್ನು ಬೆಚ್ಚಿಬೀಳಿಸಿದೆ. ಆರೋಪಿಯನ್ನು ಸಿಕ್ಕಲ್ಲಿ ಎನ್‌ಕೌಂಟರ್ ಮಾಡಬೇಕು ಅಥವಾ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ನಗರದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನಿಂದ ಅಂಜಲಿ ಹತ್ಯೆ ಖಂಡಿಸಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ಬೃಹತ್ ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸಿದ ವಿದ್ಯಾರ್ಥಿಗಳು, ಯುವತಿಯರು ಹಾಗೂ ಮಹಿಳೆಯರ ರಕ್ಷಣೆಗೆ ಒತ್ತಾಯಿಸಿದರು.

ಕರ್ನಾಟಕ ರಾಜ್ಯ ಭೋವಿ (ವಡ್ಡರ) ಮಹಾಸಭಾ ಖಂಡನೆ ವ್ಯಕ್ತಪಡಿಸಿದೆ. ಇಂತಹ ಕೃತ್ಯ ಮರುಕಳಿಸದಂತೆ ಎನ್ ಕೌಂಟರ್ ನಂತಹ ಕಾನೂನು ರಚಿಸುವುದು ಸೂಕ್ತ ಎಂದು ತಹಶೀಲ್ದಾರ್ ಹಾಗೂ ಪೊಲೀಸ್ ಆಯುಕ್ತರ ಮೂಲಕ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

**ಗೋಕುಲ ಬಸ್ ನಿಲ್ದಾಣದ ಮೂಲಕ ಆರೋಪಿ ಪರಾರಿ:** ಆರೋಪಿ ವಿಶ್ವನಾಥ ಅಲಿಯಾಸ್ ಗಿರೀಶ್ ಸಾವಂತ ವೀರಾಪುರ ಓಣಿಗೆ ಆಟೋದಲ್ಲಿ ಬಂದು ಐದೇ ನಿಮಿಷದಲ್ಲಿ ಯುವತಿಯನ್ನು ಕೊಲೆ ಮಾಡಿ ಪರಾರಿಯಾಗಿದ್ದಾನೆ. ಈ ದೃಶ್ಯ ಓಣಿಯ ನಿವಾಸದಲ್ಲಿ ಅಳವಡಿಸಿರುವ ಸಿಸಿ ಕ್ಯಾಮರಾದಲ್ಲಿ ಪತ್ತೆಯಾಗಿದೆ. ಕೊಲೆ ಮಾಡಿದ ನಂತರ ಆರೋಪಿ ಸೀದಾ ಗೋಕುಲ ಹೊಸ ಬಸ್ ನಿಲ್ದಾಣಕ್ಕೆ ಹೋಗಿದ್ದು, ಅಲ್ಲಿ ಓಡಾಡಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿವೆ. ಶಿವಮೊಗ್ಗ ಜಿಲ್ಲೆಗೆ ಸಂಚರಿಸುವ ಬಸ್ ನಿಲ್ಲುವ ಜಾಗದಲ್ಲಿ ಆರೋಪಿ ನಿಂತಿರುವುದರಿಂದ ಶಿವಮೊಗ್ಗ, ದಾವಣಗೆರೆ, ಮೈಸೂರು ಕಡೆ ಬಸ್ ಮೂಲಕ ಸಂಚರಿಸಿರಬಹುದು ಎಂದು ಪೊಲೀಸರು ಅಂದಾಜಿಸಿದ್ದಾರೆ. ಆರೋಪಿ ಗಿರೀಶ್ ಸಾವಂತ್ ಈ ಹಿಂದೆ ಮೈಸೂರು, ಬೆಂಗಳೂರಿನಲ್ಲಿ ಹೋಟೆಲ್‌ನಲ್ಲಿ ಕೆಲಸ ಮಾಡಿದ್ದ ಹಿನ್ನೆಲೆಯಲ್ಲಿ ಅಲ್ಲಿಯೂ ಶೋಧ ನಡೆಸಿದ್ದಾರೆ. ಆರೋಪಿ ಕೊಲೆ ಮಾಡಿದ ನಂತರ ಹಾಗೂ ಮುಂಚೆ ಯಾರೊಂದಿಗೆ ಸಂಪರ್ಕದಲ್ಲಿ ಇದ್ದ ಎನ್ನುವುದು ಸೇರಿದಂತೆ ಹಲವು ಆಯಾಮಗಳಲ್ಲಿ ಪೊಲೀಸರು ಜಾಲಾಡುತ್ತಿದ್ದಾರೆ.

## ಖಡಕ್ ಪೊಲೀಸ್ ಅಧಿಕಾರಿ ಕೊಡಿ

**ಹುಬ್ಬಳ್ಳಿ – ಧಾರವಾಡ ಮಹಾನಗರದಲ್ಲಿ ಕಳೆದ ಒಂದೆರಡು ತಿಂಗಳಿಂದ ನಡೆಯುತ್ತಿರುವ ಅಪರಾಧ ಕೃತ್ಯ ಆಧರಿಸಿ ಬಿಜೆಪಿ ಮುಖಂಡರು, ಸಾರ್ವಜನಿಕರು ಕಾನೂನು ಸುವ್ಯವಸ್ಥೆ ಕುಸಿದಿದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ನೇಹಾ ಹಿರೇಮಠ ಕೊಲೆ ನಡೆದಾಗಲಂತೂ ಬೀದಿಗಿಳಿದು ಪ್ರತಿಭಟಿಸಿದ್ದರು. ಆದರೆ, ವೀರಾಪುರ ಓಣಿಯಲ್ಲಿ ಅಂಜಲಿ ಎಂಬ ಯುವತಿ ಕೊಲೆಯಾದ ಬಳಿಕ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಮುಖಂಡರೊಬ್ಬರು ಬೇಸರ ವ್ಯಕ್ತಪಡಿಸಿದ್ದು ಕಾನೂನು ಸುವ್ಯವಸ್ಥೆ ಕುಸಿದಿದೆ.ಹಿರಿಯ ಪೊಲೀಸ್ ಅಧಿಕಾರಿಗಳು ತಮ್ಮ ಕರ್ತವ್ಯ ನಿಭಾಯಿಸುವಲ್ಲಿ ವಿಫಲರಾಗಿದ್ದಾರೆ ಎಂದು ದನಿ ಎತ್ತಿರುವುದು ಮಹತ್ವ ಪಡೆದಿದೆ. ಹೀಗೆ ದನಿ ಎತ್ತಿರುವವರು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಯುವ ಕಾಂಗ್ರೆಸ್ ಮುಖಂಡ ರಜತ್ ಉಳ್ಳಾಗಡ್ಡಿಮಠ ಅವರು.**


**ಈ ಕುರಿತು ಗೃಹ ಸಚಿವ ಡಾ.ಜಿ ಪರಮೇಶ್ವರ ಅವರಿಗೆ ಪತ್ರ ಬರೆದಿರುವ ಅವರು, ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಅಸಮರ್ಥವಾಗಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಬದಲಾವಣೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ಅಪರಾಧ ಸಂಖ್ಯೆ ಹೆಚ್ಚುತ್ತಿದ್ದು, ಅವಳಿನಗರದ ಪೊಲೀಸ್ ವೈಫಲ್ಯದಿಂದ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತಿದೆ.**

**ಹೀಗಾಗಿ, ಪೊಲೀಸ್ ಇಲಾಖೆಯ ಉನ್ನತ ಅಧಿಕಾರಿಗಳನ್ನು ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಿಂದ ವರ್ಗಾವಣೆ ಮಾಡಿ ಕಾನೂನು ಸುವ್ಯವಸ್ಥೆ ಕಾಪಾಡಬೇಕು ಎಂದು ಮನವಿ ಮಾಡಿದ್ದಾರೆ. ವಿದ್ಯಾರ್ಥಿನಿ ನೇಹಾ ಹಿರೇಮಠ ಸಾವಿನ ನಂತರ ವಿದ್ಯಾಭ್ಯಾಸ, ಉದ್ಯೋಗಗಳಿಗೆ ಹೆಣ್ಣು ಮಕ್ಕಳನ್ನು ಕಳಿಸಲು ಪಾಲಕರು ಹಾಗೂ ಕುಟುಂಬಸ್ಥರು ಹಿಂಜರಿಯುವ ಸನ್ನಿವೇಶ ನಿರ್ಮಾಣವಾಗಿದೆ. ಪದೇ ಪದೇ ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಯುವತಿಯರ ಕೊಲೆ ಪ್ರಕರಣಗಳಿಂದ ಮಹಿಳೆಯರು ಮತ್ತು ಮಕ್ಕಳು ಮತ್ತಷ್ಟು ಭಯಭೀತರಾಗಿ ಜೀವನ ನಡೆಸುವ ಸಂದರ್ಭ ನಿರ್ಮಾಣವಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.**

**ಮುಖ್ಯವಾಗಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ, ರೌಡಿಗಳನ್ನು ಮಟ್ಟ ಹಾಕುವಲ್ಲಿ, ಪುಂಡ ಪೋಕರಿಗಳನ್ನು ನಿಯಂತ್ರಣ ಮಾಡುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ. ಶೀಘ್ರವೇ ಅವಳಿನಗರಕ್ಕೆ ಖಡಕ್ ಅಧಿಕಾರಿಗಳನ್ನು ನೇಮಕ ಮಾಡಿ ಕಾನೂನು ಸುವ್ಯಸ್ಥೆ ಕಾಪಾಡಬೇಕು ಎಂದು ಗೃಹ ಸಚಿವರಿಗೆ ಮನವಿ ಮಾಡಿದ್ದಾರೆ.**

# ಮಮತಾ ಮೇಲೆ ಆಕ್ಷೇಪಾರ್ಹ ಟೀಕೆ ಬಿಜೆಪಿ ಅಭ್ಯರ್ಥಿ ವಿರುದ್ಧ ದೂರು

**ಕೋಲ್ಕತ್ತಾ, ಮೇ 17:** ಸಾರ್ವಜನಿಕ ರ್ಯಾಲಿಯಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರುದ್ಧ ಆಕ್ಷೇಪಾರ್ಹ ಟೀಕೆ ಮಾಡಿದ್ದಾರೆ ಎಂದು ಆರೋಪಿಸಿ ತಮ್ಲುಕ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ವಿರುದ್ಧ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಶುಕ್ರವಾರ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.



ಕಲ್ಕತ್ತಾ ಹೈಕೋರ್ಟ್‌ನ ಮಾಜಿ ನ್ಯಾಯಾಧೀಶ ಗಂಗೋಪಾಧ್ಯಾಯ ವಿರುದ್ಧವೂ ಪಕ್ಷ ಕಾನೂನು ಕ್ರಮ ಕೈಗೊಳ್ಳಲಿದೆ ಎಂದು ಟಿಎಂಸಿ ನಾಯಕ ಮತ್ತು ಪಶ್ಚಿಮ ಬಂಗಾಳ ಸಚಿವ ಶಶಿ ಪಂಜಾ ಹೇಳಿದ್ದಾರೆ.

ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾ ಅಧಿಕಾರಿಗೆ ಬರೆದ ಪತ್ರದಲ್ಲಿ, ಟಿಎಂಸಿ ನಾಯಕ ಡೆರೆಕ್ ಓಬ್ರಿಯಾನ್, ಈ ಭಾಷಣದಲ್ಲಿ, ಗಂಗೋಪಾಧ್ಯಾಯ ಅವರು ಕೆಲವು ಅತ್ಯಂತ ಆಕ್ಷೇಪಾರ್ಹ ಹೇಳಿಕೆಗಳನ್ನು ಮಾಡಿದ್ದಾರೆ ಮಮತಾ ಬ್ಯಾನರ್ಜಿ, ನಿಮ್ಮನ್ನು ಎಷ್ಟು ಮಾರಾಟ ಮಾಡಲಾಗುತ್ತಿದೆ ನಿಮ್ಮ ದರ 10 ಲಕ್ಷವಾಗಿದೆ, ಏಕೆಂದರೆ ನೀವು ಮಮತಾ ಬ್ಯಾನರ್ಜಿಯಿಂದ ಮೇಕಪ್ ಮಾಡುತ್ತಿದ್ದೀರಿ, ನಾನು ಕೆಲವೊಮ್ಮೆ ಆಶ್ಚರ್ಯ ಪಡುತ್ತೇನೆ ಎಂದಿದ್ದಾರೆ.

ಇದು ಬಿಜೆಪಿ ಅಭ್ಯರ್ಥಿಯ ಸ್ತ್ರೀದ್ವೇಷದ ನಡವಳಿಕೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ. ನ್ಯಾಯಾಂಗದಲ್ಲಿ ಪ್ರಮುಖ ಸ್ಥಾನವನ್ನು ಹೊಂದಿದ್ದ ಅವರು ಮಹಿಳೆಯರ, ವಿಶೇಷವಾಗಿ ಅಧಿಕಾರದ ಸ್ಥಾನದಲ್ಲಿರುವ ಮಹಿಳೆಯ ಘನತೆಯ ಮೇಲೆ ದಾಳಿ ಮಾಡಲು ಆರಿಸಿಕೊಂಡಿರುವುದು ದುರದೃಷ್ಟಕರ ಎಂದು ಪತ್ರದಲ್ಲಿ ಬರೆದಿದ್ದಾರೆ.

ಗಂಗೋಪಾಧ್ಯಾಯ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ಚುನಾವಣಾ ಆಯೋಗ ಆದೇಶ ನೀಡಬೇಕು ಮತ್ತು ಯಾವುದೇ ಸಾರ್ವಜನಿಕ ಸಭೆ, ಮೆರವಣಿಗೆ ಅಥವಾ ರ್ಯಾಲಿಗಳಲ್ಲಿ ಭಾಗವಹಿಸದಂತೆ ಸಂಪೂರ್ಣ ನಿಷೇಧ ಹೇರಬೇಕು, ಜೊತೆಗೆ ಯಾವುದೇ ವೈಯಕ್ತಿಕ ಅಥವಾ ಅವಮಾನಕರ ಟೀಕೆಗಳನ್ನು ಮಾಡದಂತೆ ಅವರನ್ನು ನಿರ್ಬಂಧಿಸಬೇಕು ಎಂದು ಟಿಎಂಸಿ ಒತ್ತಾಯಿಸಿದೆ. ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪಂಜಾ, ಗಂಗೋಪಾಧ್ಯಾಯ ಅವರು ಬ್ಯಾನರ್ಜಿ ವಿರುದ್ಧ ಸೆಕ್ಸಿಸ್ಟ್ ಟೀಕೆಗಳನ್ನು ಮಾಡುವ ಮೂಲಕ ಸಭ್ಯತೆಯ ಎಲ್ಲಾ ಮಿತಿಗಳನ್ನು ದಾಟಿದ್ದಾರೆ ಎಂದು ಹೇಳಿದರು.

ಗುರುವಾರ ಪ್ರಕಟವಾದ ವೀಡಿಯೊದಲ್ಲಿ ಗಂಗೋಪಾಧ್ಯಾಯ ಅವರು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಾರಾಟವಾಗುವ ಮೊತ್ತದ ಬಗ್ಗೆ ಆಶ್ಚರ್ಯ ಪಡುತ್ತಿದ್ದಾರೆ ಎಂದು ಕೇಳಲಾಯಿತು, ಇದು ಮಹಿಳೆಯರನ್ನು ಅಗೌರವಿಸುವ ಬಿಜೆಪಿಯ ಗ್ಯಾರಂಟಿ ಎಂದು ಟಿಎಂಸಿ ಲೇಬಲ್ ಮಾಡುವ ಮೂಲಕ ಗದ್ದಲವನ್ನು ಹುಟ್ಟುಹಾಕಿತು. ಗಂಗೋಪಾಧ್ಯಾಯ ಅವರು ಅಭ್ಯರ್ಥಿ ಮತ್ತು ಮಾಜಿ ನ್ಯಾಯಾಧೀಶರು. ಅವರು ನಮ್ಮಲ್ಲಿ ಹೆಚ್ಚಿನವರಿಗಿಂತ ಕಾನೂನು ವಿಷಯಗಳ ಬಗ್ಗೆ ತಿಳಿದಿರಬೇಕು. ಅಭ್ಯರ್ಥಿಯು ಅಂತಹ ಪದಗಳನ್ನು ಬಳಸಬಹುದೇ ಎಂದು ಪಂಜ ಪ್ರಶ್ನಿಸಿದ್ದಾರೆ.

# 6ನೇ ಹಂತದ ಮತದಾನದಲ್ಲಿ 39% ಅಭ್ಯರ್ಥಿಗಳು ಕೋಟ್ಯಧಿಪತಿಗಳು

**ನವದೆಹಲಿ, ಮೇ 17:** ಲೋಕಸಭೆ ಚುನಾವಣೆಯ ಆರನೇ ಹಂತದಲ್ಲಿ ಸ್ಪರ್ಧಿಸುತ್ತಿರುವ ಶೇ.39 ರಷ್ಟು ಅಭ್ಯರ್ಥಿಗಳು ಕೋಟ್ಯಧಿಪತಿಗಳಾಗಿದ್ದು ಸರಾಸರಿ 6.21 ಕೋಟಿ ಆಸ್ತಿ ಹೊಂದಿದ್ದಾರೆ ಎಂದು ಚುನಾವಣಾ ಹಕ್ಕುಗಳ ಸಂಸ್ಥೆ ಎಡಿಆರ್ ತಿಳಿಸಿದೆ. ಮೇ 25 ರಂದು ನಡೆಯಲಿರುವ ಆರನೇ ಹಂತದಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಪೈಕಿ, ಕುರುಕ್ಷೇತ್ರ ನವೀನ್ ಜಿಂದಾಲ್ (ಬಿಜೆಪಿ) ಅತಿಹೆಚ್ಚು ಆಸ್ತಿಯನ್ನು 1,241 ಕೋಟಿ ಎಂದು ಘೋಷಿಸಿದ್ದಾರೆ. ನಂತರ, ಸಂತೃಪ್ ಮಿಶ್ರಾ 482 ಕೋಟಿ ಮತ್ತು ಸುಶೀಲ್ ಗುಪ್ತಾ 169 ಕೋಟಿ ಎಂದು ಡೆಮಾಕ್ರಟಿಕ್ ರಿಫಾರ್ಮ್ಸ್ ಅಸೋಸಿಯೇಷನ್ ವಿಶ್ಲೇಷಣೆ ಮಾಡಿದೆ.

ಲೋಕಸಭೆ ಚುನಾವಣೆಗೆ ಸ್ಪರ್ಧಿಸಿರುವ 866 ಅಭ್ಯರ್ಥಿಗಳ ಪೈಕಿ 338 (ಶೇ.39) ಮಂದಿ ಕೋಟ್ಯಧಿಪತಿಗಳಾಗಿದ್ದು, ಲೋಕಸಭೆ 6ನೇ ಹಂತದ ಚುನಾವಣೆಯಲ್ಲಿ ಸ್ಪರ್ಧಿಸುವ ಪ್ರತಿ ಅಭ್ಯರ್ಥಿಯ ಸರಾಸರಿ ಆಸ್ತಿ 6.21 ಕೋಟಿಯಾಗಿದೆ. ಪ್ರಮುಖ ಪಕ್ಷಗಳ ಪೈಕಿ, ಬಿಜೆಡಿಯ ಎಲ್ಲಾ ಆರು ಅಭ್ಯರ್ಥಿಗಳು, ಆರ್‌ಜೆಡಿ ಮತ್ತು ಜೆಡಿಯುನ ತಲಾ ನಾಲ್ಕು ಅಭ್ಯರ್ಥಿಗಳಲ್ಲಿ ನಾಲ್ವರು, ಬಿಜೆಪಿಯ 51 ಅಭ್ಯರ್ಥಿಗಳಲ್ಲಿ 48 (ಶೇ.94), ಎಸ್ಪಿಯ 12 ಅಭ್ಯರ್ಥಿಗಳಲ್ಲಿ 11 (ಶೇ.92), ಕಾಂಗ್ರೆಸ್ನ 25 ಅಭ್ಯರ್ಥಿಗಳಲ್ಲಿ 20 (ಶೇ.80), ಎಎಪಿಯ 5 ಅಭ್ಯರ್ಥಿಗಳಲ್ಲಿ 4 (ಶೇ.80) ಮತ್ತು ಎಐಟಿಸಿಯ 9 ಅಭ್ಯರ್ಥಿಗಳಲ್ಲಿ 7 (ಶೇ.78) ಅಭ್ಯರ್ಥಿಗಳು 1 ಕೋಟಿಗೂ ಹೆಚ್ಚು ಮೌಲ್ಯದ ಆಸ್ತಿಯನ್ನು ಘೋಷಿಸಿದ್ದಾರೆ.

ಕಡಿಮೆ ಆಸ್ತಿ ಘೋಷಣೆಯಲ್ಲಿ ರೋಹ್ಟಕ್ನ ಸ್ವತಂತ್ರ ಅಭ್ಯರ್ಥಿ ಮಾಸ್ಟರ್ ರಣಧೀರ್ ಸಿಂಗ್ ಅವರು 2 ಲಕ್ಷದ ಮೌಲ್ಯದ ಆಸ್ತಿಯನ್ನು ಘೋಷಿಸಿದರು ಮತ್ತು ನಂತರ ಪ್ರತಾಪ್‌ಗಢದ ಎಸ್‌ಯುಸಿಐ(ಸಿ) ಅಭ್ಯರ್ಥಿ ರಾಮ್ ಕುಮಾರ್ ಯಾದವ್ ಅವರು 1,686 ಮೌಲ್ಯದ ಆಸ್ತಿಯನ್ನು ಘೋಷಿಸಿದರು.

ಸುಮಾರು 411 (ಶೇ.47) ಅಭ್ಯರ್ಥಿಗಳು ತಮ್ಮ ಪ್ರಮಾಣಪತ್ರದಲ್ಲಿ ಹೊಣೆಗಾರಿಕೆಗಳನ್ನು ಘೋಷಿಸಿದ್ದಾರೆ. 866 ಅಭ್ಯರ್ಥಿಗಳಲ್ಲಿ ಸುಮಾರು 180 (ಶೇ. 21) ಮಂದಿ ತಮ್ಮ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಘೋಷಿಸಿದ್ದಾರೆ ಮತ್ತು 866 ರಲ್ಲಿ 141 (ಶೇ.16) ತಮ್ಮ ವಿರುದ್ಧ ಗಂಭೀರ ಕ್ರಿಮಿನಲ್ ಮೊಕದ್ದಮೆಗಳನ್ನು ಘೋಷಿಸಿದ್ದಾರೆ.

12 ಅಭ್ಯರ್ಥಿಗಳು ಶಿಕ್ಷೆಗೊಳಗಾದ ಪ್ರಕರಣಗಳನ್ನು ಘೋಷಿಸಿದ್ದಾರೆ ಮತ್ತು ಆರು ಅಭ್ಯರ್ಥಿಗಳು ತಮ್ಮ ವಿರುದ್ಧ ಕೊಲೆ (ಐಪಿಸಿ ಸೆಕ್ಷನ್ –302) ಪ್ರಕರಣಗಳನ್ನು ಘೋಷಿಸಿದ್ದಾರೆ. 21 ಅಭ್ಯರ್ಥಿಗಳು ತಮ್ಮ ವಿರುದ್ಧ ಕೊಲೆ ಯತ್ನ (ಐಪಿಸಿ ಸೆಕ್ಷನ್ 307) ಮತ್ತು 24 ಅಭ್ಯರ್ಥಿಗಳು ಮಹಿಳೆಯರ ವಿರುದ್ಧದ ಅಪರಾಧಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಘೋಷಿಸಿದ್ದಾರೆ ಎಂದು ಎಡಿಆರ್ ಹೇಳಿದೆ.

24 ಅಭ್ಯರ್ಥಿಗಳಲ್ಲಿ 3 ಅಭ್ಯರ್ಥಿಗಳು ಅತ್ಯಾಚಾರಕ್ಕೆ ಸಂಬಂಧಿಸಿದ ಆರೋಪಗಳನ್ನು ಘೋಷಿಸಿದ್ದಾರೆ (ಐಪಿಸಿ ಸೆಕ್ಷನ್–376) ಮತ್ತು ಅದೇ ಮಹಿಳೆಯ ಮೇಲೆ ಪದೇ ಪದೇ ಅತ್ಯಾಚಾರ ಎಸಗುವವರಿಗೆ ಕಠಿಣ ಜೈಲುಶಿಕ್ಷೆ ವಿಧಿಸಲಾಗುತ್ತದೆ, ಅದು ಹತ್ತು ವರ್ಷಗಳಿಗಿಂತ ಕಡಿಮೆಯಿಲ್ಲ. ಆದರೆ, ವಿಸ್ತರಿಸಬಹುದು ಸೆರೆವಾಸ (ಐಪಿಸಿ ಸೆಕ್ಷನ್–376(2) (ಎನ್). 16 ಅಭ್ಯರ್ಥಿಗಳು ತಮ್ಮ ವಿರುದ್ಧ ದ್ವೇಷಭಾಷಣಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಘೋಷಿಸಿಕೊಂಡಿದ್ದಾರೆ ಎಂದು ವರದಿ ತಿಳಿಸಿದೆ.

# ಕೆನ್ನೆಗೆ ಬಾರಿಸಿ, ಎದೆ, ಹೊಟ್ಟೆ, ಸೊಂಟಕ್ಕೆ ಒದೆ: ಬಿಭವ್ ಕುಮಾರ್ ವಿರುದ್ಧ ಸ್ವಾತಿ ಮಲಿವಾಲ್ ಆರೋಪ

**ನವದೆಹಲಿ, ಮೇ 17:** ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಆಪ್ತ ಬಿಭವ್ ಕುಮಾರ್ ಕನಿಷ್ಠ ಏಳರಿಂದ ಎಂಟು ಬಾರಿ ತಮ್ಮ ಕೆನ್ನೆಗೆ ಹೊಡೆದಿದ್ದಾನೆ ಎಂದು ಆಪ್ ರಾಜ್ಯಸಭಾ ಸದಸ್ಯೆ ಸ್ವಾತಿ ಮಲಿವಾಲ್ ಗಂಭೀರ ಆರೋಪ ಮಾಡಿದ್ದಾರೆ. ಹಲ್ಲೆ ನಡೆಸಿದ ಸಂಬಂಧ ಸ್ವಾತಿ ಮಲಿವಾಲ್ ದೂರು ನೀಡಿದ್ದು ಎಫ್‌ಐಆರ್ ದಾಖಲಾಗಿದೆ. ಮೇ 13 ರಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ನಿವಾಸದಲ್ಲಿ ನಡೆದ ದೌರ್ಜನ್ಯದ ಬಗ್ಗೆ ಎಳೆ ಎಳೆಯಾಗಿ ಸ್ವಾತಿ ದೂರಿನಲ್ಲಿ ವಿವರಿಸಿದ್ದಾರೆ.



ಮೇ 13 ರಂದು ಬೆಳಗ್ಗೆ 9 ಗಂಟೆ ಸುಮಾರಿಗೆ ಅರವಿಂದ್ ಕೇಜ್ರಿವಾಲ್ ಅವರ ಮನೆಯ ಡ್ರಾಯಿಂಗ್ ರೂಮ್‌ನಲ್ಲಿ ಈ ಘಟನೆ ನಡೆದಿದೆ. ಘಟನೆಯ ಸಮಯದಲ್ಲಿ ಕೇಜ್ರಿವಾಲ್ ನಿವಾಸದಲ್ಲಿ ಇದ್ದರು ಎಂದು ದೆಹಲಿ ಮಹಿಳಾ ಆಯೋಗದ (ಡಿಸಿಡಬ್ಲ್ಯು) ಮಾಜಿ ಮುಖ್ಯಸ್ಥೆ ಸ್ವಾತಿ ಆರೋಪಿಸಿದ್ದಾರೆ. ಎಫ್‌ಐಆರ್‌ನಲ್ಲಿ ಕೇಜ್ರಿವಾಲ್ ಹೆಸರನ್ನು ಉಲ್ಲೇಖಿಸಿಲ್ಲ

ಕೇಜ್ರಿವಾಲ್ ಅವರ ಆಪ್ತ ಸಹಾಯಕ ಬಿಭವ್ ಕುಮಾರ್ ನನಗೆ 7–8 ಬಾರಿ ಕಪಾಳಮೋಕ್ಷ ಮಾಡಿದ್ದಾನೆ. ನಾನು ಎಷ್ಟೇ ಮನವಿ ಮಾಡಿಕೊಂಡರೂ ಪದೇ ಪದೇ ನನ್ನ ಹೊಟ್ಟೆ ಮತ್ತು ಸೊಂಟಕ್ಕೆ ಒದ್ದಿದ್ದಾನೆ. ನಾನು ಡ್ರಾಯಿಂಗ್ ರೂಮಿನಲ್ಲಿ ಕುಳಿತಿದ್ದಾಗ ಬಿಭವ್ ಕುಮಾರ್ ಒಳಗೆ ಬಂದು ಕಾರಣವಿಲ್ಲದೇ ನನ್ನ ವಿರುದ್ಧ ಕಿರುಚಾಡಲು ಹಾಗೂ ನಿಂದಿಸಲು ಪ್ರಾರಂಭಿಸಿದ್ದಾನೆ. ನೀವು ನಮ್ಮ ಮಾತನ್ನು ಯಾಕೆ ಕೇಳುವುದಿಲ್ಲ? ಕೆಟ್ಟ ಮಹಿಳೆ, ನಾವು ನಿಮಗೆ ಪಾಠ ಕಲಿಸುತ್ತೇವೆ ಎಂದೆಲ್ಲಾ ಬಾಯಿಗೆ ಬಂದಂತೆ ಬೈದಿದ್ದಾನೆ. ಇದಾದ ಬಳಿಕ ಭಯಾನಕ ದೌರ್ಜನ್ಯ ಆರಂಭವಾಯಿತು.

ಕುಮಾರ್ ನನಗೆ 7–8 ಬಾರಿ ಕಪಾಳಮೋಕ್ಷ ಮಾಡಿದ್ದಾನೆ. ಆಗ ನಾನು ಸಂಪೂರ್ಣವಾಗಿ ಆಘಾತಕ್ಕೊಳಗಾದೆ. ಕೂಡಲೇ ಸಹಾಯಕ್ಕಾಗಿ ಅಂಗಲಾಚಿದ್ದೇನೆ.

ಈ ವೇಳೆ ಅವರು ನನ್ನ ಬಟ್ಟೆಯನ್ನು ಹಿಡಿದು ಎಳೆದುಕೊಂಡು ಹೋಗಿ ನನ್ನ ತಲೆಯನ್ನು ಮೇಜಿಗೆ ಹೊಡೆದಿದ್ದಾನೆ. ಈ ವೇಳೆ ನಾನು ಕೆಳಗೆ ಬಿದ್ದೆ. ನಾನು ಸಹಾಯಕ್ಕಾಗಿ ನಿರಂತರವಾಗಿ ಕಿರುಚಾಡಿದರೂ ಯಾರೊಬ್ಬರು ನನ್ನ ರಕ್ಷಣೆಗೆ ಬರಲಿಲ್ಲ.

ನಾನು ಪದೇ ಪದೇ ಕಿರುಚಾಡಿದ್ರೂ ಬಿಭವ್ ನನ್ನ ಮೇಲೆ ಹಲ್ಲೆ ಮಾಡುವುದನ್ನು ಬಿಡಲಿಲ್ಲ. ನನ್ನ ಎದೆ, ಹೊಟ್ಟೆ ಹಾಗೂ ಸೊಂಟಕ್ಕೆ ಪದೇ ಪದೇ ಒದ್ದಿದ್ದಾನೆ.

ನನ್ನ ಬಿಟ್ಟುಬಿಡುವಂತೆ ಅಂಗಲಾಚಿದ್ರೂ ಆತ ಕರುಣೆ ತೋರಲಿಲ್ಲ, ಪಶ್ಚಾತ್ತಾಪಡಲಿಲ್ಲ, ಬದಲಾಗಿ ನನ್ನ ಮೇಲೆ ದಾಳಿ ಮುಂದುವರಿಸಿದ ಎಂದು ಮಲಿವಾಲ್ ದೂರಿನಲ್ಲಿ ಆರೋಪಿಸಿದ್ದಾರೆ.

> ರಾಜ್ಯಸಭೆ ಸಂಸದೆ ಸ್ವಾತಿ ಮಲಿವಾಲ್ ನೀಡಿರುವ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಿರುವ ದೆಹಲಿ ಪೊಲೀಸರು ಅರವಿಂದ್ ಕೇಜ್ರಿವಾಲ್ ಆಪ್ತ ಸಹಾಯಕ ಬಿಭವ್ ವಿರುದ್ಧ ಐಪಿಸಿ ಸೆಕ್ಷನ್ 354, 323, 506,509 ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ. ಬಳಿಕ ಅವರನ್ನು ತೀಸ್ ಹಜಾರಿ ಕೋರ್ಟ್ ನ್ಯಾಯಧೀಶದರ ಮುಂದೆ ಹಾಜರಪಡಿಸಿ ಸಿಆರ್‌ಪಿಸಿ 164 ಅಡಿಯಲ್ಲಿ ಹೇಳಿಕೆಯನ್ನು ದಾಖಲಿಸಲಾಗಿದೆ.
>
> ಸದ್ಯ ಬಿಭವ್ ಕುಮಾರ್ ಬಂಧನಕ್ಕೆ ಪೊಲೀಸರು ಮುಂದಾಗಿದ್ದು ಬಿಭವ್ ನಿರೀಕ್ಷಣಾ ಜಾಮೀನು ಪಡೆಯಲು ಪ್ರಯತ್ನಿಸುತ್ತಿದ್ದಾರೆ.

# ಭಾರತದಿಂದ ಇಸ್ರೇಲ್‌ಗೆ ಶಸ್ತ್ರಾಸ್ತ್ರ ಹೊತ್ತ ಹಡಗಿಗೆ ಬಂದರಿನಲ್ಲಿ ನಿಲುಗಡೆ ಅನುಮತಿ ನಿರಾಕರಿಸಿದ ಸ್ಪೇನ್

**ಮ್ಯಾಡ್ರಿಡ್, ಮೇ 17:** ಚೆನ್ನೈನಿಂದ ಶಸ್ತ್ರಾಸ್ತ್ರಗಳನ್ನು ಹೊತ್ತು ಇಸ್ರೇಲ್‌ಗೆ ಸಾಗುತ್ತಿರುವ ಹಡಗಿಗೆ ಸ್ಪೇನ್ ದೇಶ ತನ್ನ ಕಾರ್ಟಗೆನರ ಬಂದರಿನಲ್ಲಿ ನಿಲುಗಡೆಗೆ ಅವಕಾಶ ನಿರಾಕರಿಸಿದೆ ಎಂದು ಸ್ಪೇನ್‌ನ ವಿದೇಶ ಸಚಿವ ಜೋಸ್ ಮ್ಯಾನುವೆಲ್ ಅಲ್ಬಾರೆಸ್ ಹೇಳಿದ್ದಾರೆ. ಮರಿಯನ್ನೆ ಡೇನಿಕಾ ಹೆಸರಿನ ಹಡಗು ಸ್ಪೇನ್ ಬಂದರಿನಲ್ಲಿ ಮೇ 21ರಂದು ನಿಲುಗಡೆಗೆ ಅವಕಾಶ ಕೋರಿತ್ತು.



ಗಾಝಾ ಯುದ್ಧ ಆರಂಭಗೊಂಡ ದಿನನಿಂದ ಇಸ್ರೇಲ್‌ಗೆ ಎಲ್ಲಾ ಶಸ್ತ್ರಾಸ್ತ್ರ ರಫ್ತು ನಿಷೇಧಿಸುವ ಸ್ಪೇನ್ ನೀತಿಯ ಅನುಸಾರ ಅನುಮತಿ ನಿರಾಕರಿಸಲಾಗಿದೆ ಎಂದು ಸಚಿವರು ಹೇಳಿದ್ದಾರೆ. ಡೆನ್ಮಾರ್ಕ್ ಧ್ವಜವಿರುವ ಹಡಗಿನಲ್ಲಿ 27 ಟನ್ ತೂಕದ ಶಸ್ತ್ರಾಸ್ತ್ರಗಳನ್ನು ಇಸ್ರೇಲ್‌ಗೆ ಹೈಫಾ ಬಂದರಿಗೆ ಸಾಗಿಸಲಾಗುತ್ತಿತ್ತು.

ಈ ರೀತಿ ಸ್ಪೇನ್ ಬಂದರಿಗೆ ಇಸ್ರೇಲ್‌ಗೆ ಹೊರಟಿರುವ ಶಸ್ತ್ರಾಸ್ತ್ರ ಹೊತ್ತ ಹಡಗು ಆಗಮಿಸಿರುವುದು ಮೊದಲನೇ ಬಾರಿ ಇದಾಗಿದ್ದು ಅನುಮತಿ ನಿರಾಕರಿಸಲಾಗಿದೆ ಎಂದು ಅವರು ಹೇಳಿದ್ದಾರೆ.


ಶುಕ್ರವಾರ ಅದೇ ಬಂದರಿನಲ್ಲಿ ಮಿಲಿಟರಿ ಉಪಕರಣಗಳನ್ನು ಹೊತ್ತ ಇನ್ನೊಂದು ಹಡಗಿಗೆ ಅನುಮತಿ ನಿರಾಕರಿಸಬೇಕೆಂದು ಸ್ಪೇನ್‌ನ ಎಡಪಂಥೀಯ ಮೈತ್ರಿ ಆಗ್ರಹಿಸಿತ್ತು. ಆದರೆ ಈ ಹಡಗು ಝೆಕ್ ಗಣರಾಜ್ಯಕ್ಕೆ ಹೋಗುವ ಹಡಗಾಗಿರುವುದರಿಂದ ಅದಕ್ಕೆ ಅನುಮತಿಯನ್ನು ನಿರಾಕರಿಸಲಾಗಿಲ್ಲ ಎಂದು ಸಾರಿಗೆ ಸಚಿವ ಆಸ್ಕರ್ ಪುಯೆಂಟೆ ಹೇಳಿದ್ದಾರೆ.



ಭಾರತ ಮತ್ತು ಮಂಗೋಲಿಯಾದ ರಕ್ಷಣಾ ಸಚಿವಾಲಯಗಳ ನಡುವಣ 12ನೇ ಜಂಟಿ ಕಾರ್ಯಪಡೆಯ ಸಭೆ ಗುರುವಾರ ಉಲಾನ್‌ಬಾತರ್‌ನಲ್ಲಿ ನಡೆಯಿತು.

# ಬಾಕ್ಸರ್ ಪರ್ವೀನ್ ಹೂಡಾ ಅಮಾನತು; ಪ್ಯಾರಿಸ್ ಒಲಿಂಪಿಕ್ಸ್ ಸ್ಥಾನಕ್ಕಾಗಿ ಮತ್ತೆ ಭಾರತ ಹೋರಾಟ

ಹೊಸದಿಲ್ಲಿ: ಹನ್ನೆರಡು ತಿಂಗಳಿನಿಂದ ಡೋಪಿಂಗ್ ಟೆಸ್ಟ್ ಗೆ ಒಳಗಾಗದ ಕಾರಣಕ್ಕೆ ಪರ್ವೀನ್ ಹೂಡಾರನ್ನು ವಿಶ್ವ ಡೋಪಿಂಗ್ ವಿರೋಧಿ ಘಟಕ (ವಾಡಾ) 22 ತಿಂಗಳುಗಳ ಕಾಲ ಅಂತರ್‌ರಾಷ್ಟ್ರೀಯ ಸ್ಪರ್ಧೆಯಿಂದ ಅಮಾನತುಗೊಳಿಸಿದ್ದು, ಈ ಹಿನ್ನೆಲೆಯಲ್ಲಿ 2024ರ ಪ್ಯಾರಿಸ್ ಒಲಿಂಪಿಕ್ ಗೇಮ್ಸ್ ನಲ್ಲಿ 57 ಕೆಜಿ ವಿಭಾಗದ ಬಾಕ್ಸಿಂಗ್ ಕೋಟಾ ಸ್ಥಾನಕ್ಕಾಗಿ ಮತ್ತೊಮ್ಮೆ ಹೋರಾಡಬೇಕಾದ ಮುಜುಗರದ ಸನ್ನಿವೇಶವನ್ನು ಎದುರಿಸುತ್ತಿದೆ.



2022ರ ವಿಶ್ವ ಚಾಂಪಿಯನ್ಶಿಪ್ ನಲ್ಲಿ ಕಂಚಿನ ಪದಕ ವಿಜೇತ ಬಾಕ್ಸರ್ ಪ್ರವೀಣ್ ಕಳೆದ ವರ್ಷ ಏಶ್ಯನ್ ಗೇಮ್ಸ್ ನಲ್ಲಿ ಕಂಚಿನ ಪದಕ ಜಯಿಸುವ ಮೂಲಕ ಒಲಿಂಪಿಕ್ಸ್ ಕೋಟಾವನ್ನು ಗಿಟ್ಟಿಸಿಕೊಂಡಿದ್ದರು. ವಾಡಾ ನಿಯಮದ ಪ್ರಕಾರ ಎಪ್ರಿಲ್ 2022ರಿಂದ ಮಾರ್ಚ್ 2023ರ ತನಕ ಡೋಪಿಂಗ್ ಪರೀಕ್ಷೆಗೆ ಹಾಜರಾಗದೆ ತಪ್ಪಿಸಿಕೊಂಡಿದ್ದರು.

ಪ್ರವೀಣ್ ಹೂಡಾ ಅವರನ್ನು ಪರೀಕ್ಷೆಗೆ ಹಾಜರಾಗದ ಕಾರಣಕ್ಕೆ ಅಂತರ್‌ರಾಷ್ಟ್ರೀಯ ಟೆಸ್ಟಿಂಗ್ ಏಜೆನ್ಸಿ(ಐಟಿಎ)22 ತಿಂಗಳ ಕಾಲ ಅಮಾನತುಗೊಳಿಸಿದೆ ಎಂದು ಭಾರತದ ಬಾಕ್ಸಿಂಗ್ ಒಕ್ಕೂಟ ಪ್ರಕಟನೆಯಲ್ಲಿ ತಿಳಿಸಿದೆ.

ಪ್ರವೀಣ್ ಭಾರತದ ಪರ ಸ್ಪರ್ಧಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಲು ವಿಷಾದಿಸುತ್ತೇವೆ. ಅವರ ಅಮಾನತು ಅವಧಿಯನ್ನು ಕಡಿಮೆಮಾಡಲು ನಾವು ಶಕ್ತವಾಗಿದ್ದಕ್ಕೆ ಸಂತೋಷವಾಗಿದೆ. ಆಕೆ ಶೀಘ್ರವೇ ಬಾಕ್ಸಿಂಗ್ ರಿಂಗ್ಗೆ ವಾಪಸಾಗಲಿದ್ದಾರೆ ಎಂದು ಬಿಎಫ್‌ಐ ತಿಳಿಸಿದೆ.

ಸಂಬಂಧಿತ ಏಜೆನ್ಸಿಗಳೊಂದಿಗೆ ಚರ್ಚಿಸಿದ ನಂತರ ಪರ್ವೀನ್ ಮೇಲಿನ ಶಿಕ್ಷೆಯನ್ನು ಕಡಿಮೆ ಮಾಡಲಾಗಿದ್ದು, ಅವರನ್ನು ಶುಕ್ರವಾರದಿಂದ ಜಾರಿಗೆ ಬರುವಂತೆ 14 ತಿಂಗಳುಗಳ ತನಕ ಅಮಾನತುಗೊಳಿಸಲಾಗಿದೆ.

ಪರ್ವೀನ್ ಅಮಾನತುಗೊಂಡಿರುವ ಕಾರಣ ಭಾರತದ ಮೂವರು ಬಾಕ್ಸರ್ಗಳಾದ ನಿಖಾತ್ ಝರೀನ್(50ಕೆಜಿ), ಪ್ರೀತಿ(54ಕೆಜಿ) ಹಾಗೂ ಲವ್ಲಿನಾ ಬೊರ್ಗೊಹೈನ್(75ಕೆಜಿ) ಒಲಿಂಪಿಕ್ಸ್ ಕಣದಲ್ಲಿ ಉಳಿದಿದ್ದಾರೆ.

ಕೊನೆಯ ಒಲಿಂಪಿಕ್ಸ್ ಕ್ವಾಲಿಫೈಯರ್ ಮೇ 24ರಂದು ಬ್ಯಾಂಕಾಕ್ ನಲ್ಲಿ ಆರಂಭವಾಗಲಿದೆ. ಭಾರತಕ್ಕೆ ಮಹಿಳೆಯರ 57 ಕೆಜಿ ವಿಭಾಗದಲ್ಲಿ ಅರ್ಹತೆ ಪಡೆಯಲು ಮತ್ತೊಂದು ಅವಕಾಶವಿದೆ. ಆದರೆ ಭಾರತ ಎಪ್ರಿಲ್ 11ರಂದು ನೊಂದಾಯಿಸಲ್ಪಟ್ಟ ಮೀಸಲು ಬಾಕ್ಸರ್ ಗಳನ್ನು ಕಣಕ್ಕಿಳಿಸಬೇಕಾಗಿದೆ.

60ಕೆಜಿ ಹಾಗೂ 66 ಕೆಜಿ ವಿಭಾಗದಲ್ಲಿ ಕೇವಲ ಇಬ್ಬರನ್ನು ಮೀಸಲು ಬಾಕ್ಸರ್ಗಳಾಗಿ ಹೆಸರಿಸಲಾಗಿದ್ದು, ಈ ಇಬ್ಬರು ಬ್ಯಾಂಕಾಕ್ ನಲ್ಲಿ ಸ್ಪರ್ಧಿಸಲು ಅರ್ಹರಿದ್ದಾರೆ





ಜಪಾನ್‌ನ ಕೋಬ್‌ನಲ್ಲಿ ನಡೆದ ಪ್ಯಾರಾ ಅಥ್ಲೆಟಿಕ್ಸ್ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಪುರುಷರ 5000 ಮೀ.ಟ 11 ಫೈನಲ್‌ನಲ್ಲಿ ಬ್ರೆಜಿಲ್‌ನ ಜೂಲಿಯೊ ಸೀಸರ್ ಅಗ್ರಿಪಿನೊ ಡಾಸ್ ಸ್ಯಾಂಟೋಸ್ ತನ್ನ ಮಾರ್ಗದರ್ಶಕ ಮೈಕೆಲ್ ಬಟಿಸ್ಟಾ ಡಾಸ್ ಸ್ಯಾಂಟೋಸ್‌ನೊಂದಿಗೆ ಸ್ಪರ್ಧಿಸಿದರು.

# ಲಖನೌ ವಿರುದ್ಧವೂ ಸೋತ ಮುಂಬೈ; ಹತ್ತನೇ ಸ್ಥಾನ ಕಾಯಂ

**ಮುಂಬೈ, ಮೇ 17:** ಹಾರ್ದಿಕ್ ಪಾಂಡ್ಯಗೆ ನಾಯಕತ್ವ ನೀಡಿದ್ದ ಮುಂಬೈ ಇಂಡಿಯನ್ಸ್ ತಂಡದ ಯೋಜನೆ ಸಂಪೂರ್ಣವಾಗಿ ಬುಡಮೇಲಾಗಿದೆ. ಹೀಗಾಗಿ ಐಪಿಎಲ್ 17ನೇ ಆವೃತ್ತಿಯ 14 ಪಂದ್ಯಗಳಲ್ಲಿ 10 ಸೋಲು ಮತ್ತು ಕೇವಲ 4 ಗೆಲುವಿನೊಂದಿಗೆ 8 ಅಂಕಗಳೊಂದಿಗೆ ಅಭಿಯಾನ ಮುಗಿಸಿದೆ.





ತವರಿನಲ್ಲಿ ನಡೆದ ಕೊನೇ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ವಿರುದ್ಧದ ಪಂದ್ಯದಲ್ಲಿಯೂ 18 ರನ್‌ಗಳ ಸೋಲಿಗೆ ಒಳಗಾಗಿದೆ. ಎರಡೂ ತಂಡಗಳಿಗೆ ಇದು ಕೊನೇ ಪಂದ್ಯವಾಗಿತ್ತು. ಈ ಪಂದ್ಯದಲ್ಲಿ ಗೆದ್ದಿರುವ ಲಖನೌ ಸೂಪರ್ ಜೈಂಟ್ಸ್ ತಂಡ ಒಟ್ಟು 7 ಗೆಲುವಿನೊಂದಿಗೆ 14 ಅಂಕಗಳ ಸಮೇತ ಏಳನೇ ಸ್ಥಾನ ಪಡೆದುಕೊಂಡಿದೆ. ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಬ್ಯಾಟರ್‌ಗಳು ಮತ್ತೊಂದು ಬಾರಿ ತಮ್ಮ ಅಸಮರ್ಥತೆಯನ್ನು ಪ್ರದರ್ಶಿಸಿ ಅತ್ಯಂತ ನಿರಾಶಾದಾಯಕ ಸೀಸನ್ ಅನ್ನು ಎದುರಿಸಿದರು.

ಇಲ್ಲಿನ ವಾಖೆಂಡೆ ಕ್ರಿಕೆಟ್ ಸ್ಟೇಡಿಯಮ್‌ನಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಚೇಸಿಂಗ್ ಸುಲಭ ಎಂಬ ಯೋಜನೆಯೊಂದಿಗೆ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲ ಬ್ಯಾಟ್ ಮಾಡಿದ ಲಖನೌ ತಂಡ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 214 ರನ್ ಬಾರಿಸಿತು. ಪ್ರತಿಯಾಗಿ ಬ್ಯಾಟ್ ಮಾಡಿ ಮುಂಬೈ ತನ್ನೆಲ್ಲ ಓವರ್‌ಗಳು ಮುಕ್ತಾಯಗೊಂಡಾಗ 6 ವಿಕೆಟ್ ನಷ್ಟಕ್ಕೆ 196 ರನ್ ಬಾರಿಸಿ ಸೋಲೊಪ್ಪಿಕೊಂಡಿತು. ಚೇಸಿಂಗ್ ಸುಲಭ ಎಂದುಕೊಂಡಿದ್ದ ಮುಂಬೈ ತಂಡಕ್ಕೆ ಮಧ್ಯದಲ್ಲಿ ಸುರಿದ ಮಳೆ ಅಡಚಣೆ ಮಾಡಿತು. ಏಕಾಏಕಿ ವಾತಾವರಣ ತಂಪುಗೊಂಡ ಕಾರಣ ಇಬ್ಬನಿ ಪರಿಣಾಮವನ್ನು ಅನುಭವಿಸಿ ಸುಲಭವಾಗಿ ಸ್ಕೋರ್ ಬಾರಿಸಿ ಗೆಲ್ಲುವ ಯೋಜನೆ ವಿಫಲಗೊಂಡಿತು.

ದೊಡ್ಡ ಗುರಿಯನ್ನು ಬೆನ್ನಟ್ಟಲು ಹೊರಟ ಮುಂಬೈ ತಂಡ ಅದ್ಭುತ ಆರಂಭ ಪಡೆಯಿತು. ರೋಹಿತ್ ಶರ್ಮಾ 38 ಎಸೆತಕ್ಕೆ 6 ರನ್ ಬಾರಿಸಿ ಮಿಂಚಿದರು. ಡೀವಾಲ್ಡ್ ಬ್ರೇವಿಸ್ 23 ರನ್ ಹೊಡೆದರು. ಈ ಜೋಡಿ 8. 4 ಓವರ್‌ಗಳಲ್ಲಿ ಮೊದಲ ವಿಕೆಟ್‌ಗೆ 84 ರನ್ ಬಾರಿಸಿ ಗೆಲುವಿನ ನಿರೀಕ್ಷೆ ಹುಟ್ಟಿಸಿತು. ಆದರೆ, ಆ ಬಳಿಕ ಮುಂಬೈ ತಂಡ ಬ್ಯಾಟಿಂಗ್ ವೈಫಲ್ಯ ಪ್ರದರ್ಶನಗೊಂಡಿತು. ಸೂರ್ಯಕುಮಾರ್ ಶೂನ್ಯಕ್ಕೆ ಔಟಾದರೆ ಇಶಾನ್ ಕಿಶನ್ 14 ರನ್ ಬಾರಿಸಿದರು. ಹಾರ್ದಿಕ್ ಪಾಂಡ್ಯ ಕೊಡುಗೆ ಕೇವಲ 16 ರನ್. ನೆಹಲ್ ವದೇರಾ 1 ರನ್‌ಗೆ ಔಟಾಗುವ ಮೂಲಕ ಮುಂಬೈ ಆಸೆ ಕಮರಿತು. ಏತನ್ಮಧ್ಯೆ ಮಧ್ಯಮ ಕ್ರಮಾಂಕದಲ್ಲಿ ಅಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದ ನಮನ್ ಧಿರ್ 28 ಎಸೆತಕ್ಎಕ 68 ರನ್ ಬಾರಿಸಿದರು. ಅದರೆ ಅವರಿಗೆ ಗೆಲುವು ತಂದು ಕೊಡಲು ಸಾಧ್ಯವಾಗಲಿಲ್ಲ.

## ಪೂರನ್ ಅಬ್ಬರ್

ಅದಕ್ಕಿಂತ ಮೊದಲು ಬ್ಯಾಟ್ ಮಾಡಿದ ಲಖನೌ ಪರ ಆರಂಭಿಕ ಬ್ಯಾಟರ್ ರಾಹುಲ್ ಕಷ್ಟಪಟ್ಟು 55 ರನ್ ಬಾರಿಸಿದರು. ಆದರೆ ಮಧ್ಯಮ ಕ್ರಮಾಂಕದಲ್ಲಿ ನಿಕೋಲಸ್ ಪೂರನ್ 29 ಎಸೆತಗಳಿಗೆ 75 ರನ್ ಬಾರಿಸಿ ದೊಡ್ಡ ಮೊತ್ತ ಪೇರಿಸಲು ನೆರವಾದರು. ಕನ್ನಡಿಗ ದೇವದತ್ ಪಡಿಕ್ಕಲ್ ಮತ್ತೊಂದ ಬಾರಿ ವಿಫಲಗೊಂಡು ಶೂನ್ಯಕ್ಕೆ ಔಟಾದರೆ ಸ್ಟೊಯ್ನಿಸ್ 28 ರನ್ ಚಚ್ಚಿದರು. ದೀಪಕ್ ಹೂಡ 11 ರನ್ ಹೊಡೆದರೆ ಕೊನೆಯಲ್ಲಿ ಆಯುಷ್ ಬದೋನಿ 22 ರನ್ ಔಟಾದರೆ. ಕೃಣಾಲ್ ಪಾಂಡ್ಯ 12 ರನ್‌ಗೆ ಔಟಾದರು.

# ಕ್ರಿಸ್ಟಿಯಾನೊ ರೊನಾಲ್ಡೊ ಸತತ 4ನೇ ಬಾರಿ ವಿಶ್ವದ ದುಬಾರಿ ಕ್ರೀಡಾಪಟು

ಪೋರ್ಚುಗಲ್ ನ ಕ್ರಿಸ್ಟಿಯಾನೊ ರೊನಾಲ್ಡೊ ಫೋರ್ಬ್ಸ್ ಬಿಡುಗಡೆ ಮಾಡಿದ ವಿಶ್ವದ ದುಬಾರಿ ಕ್ರೀಡಾಪಟು ಪಟ್ಟಿಯಲ್ಲಿ ಸತತ ನಾಲ್ಕನೇ ಬಾರಿ ಅಗ್ರಸ್ಥಾನ ಪಡೆದಿದ್ದಾರೆ. 39 ವರ್ಷದ ಫುಟ್ಬಾಲ್ ತಾರೆ ಕ್ರಿಸ್ಟಿಯಾನೊ ರೊನಾಲ್ಡೊ ಪ್ರಸ್ತುತ ಸೌದಿ ಅರೇಬಿಯಾದ ಅಲ್ ನಸರ್ ತಂಡದ ಪರ ಆಡುತ್ತಿದ್ದು, 260 ದಶಲಕ್ಷ ಡಾಲರ್ ಆದಾಯ ಪಡೆಯುತ್ತಿದ್ದು, ಇದು ಸಾರ್ವಕಾಲಿಕ ದಾಖಲೆ ಮೊತ್ತವಾಗಿದೆ. ಸ್ಪೇನ್‌ನ ಗಾಲ್ಫ್ ಪಟು ಜಾನ್ ರಹಮ್ 200 ದಶಲಕ್ಷ ಡಾಲರ್ ಆದಾಯ ಹೊಂದಿದ್ದು, ರೊನಾಲ್ಡೊ ನಂತರದ ಎರಡನೇ ಸ್ಥಾನ ಗಳಿಸಿದ್ದಾರೆ. ಅಲ್ಲದೇ ಇನ್‌ಸ್ಟಾಗ್ರಾಂನಲ್ಲಿ 629 ದಶಲಕ್ಷ ಫಾಲೋವರ್ಸ್ ಹೊಂದಿದ್ದು, ಇದರಿಂದ ವಿವಿಧ ಕಂಪನಿಗಳ ಪರ ಜಾಹಿರಾತುಗಳಲ್ಲಿ ಪಾಲ್ಗೊಂಡಿದ್ದಾರೆ. 8 ಬಾರಿ ವಿಶ್ವದ ಶ್ರೇಷ್ಠ ಫುಟ್ಬಾಲ್ ಆಟಗಾರ ಪ್ರಶಸ್ತಿ ಪಡೆದು ಅರ್ಜೆಂಟೀನಾಗೆ ವಿಶ್ವಕಪ್ ತಂದುಕೊಟ್ಟ 36 ವರ್ಷದ ಲಿಯೊನೆಲ್ ಮೆಸ್ಸಿ ಆದಾಯ 135 ದಶಲಕ್ಷ ಡಾಲರ್ ಆಗಿದ್ದು ನಂತರದ ಸ್ಥಾನದಲ್ಲಿದ್ದಾರೆ.

